ಬೆಂಗಳೂರು ಸಂಪುಟ: 16 ಸಂಚಿಕೆ: 37 ಪುಟ: 06 ಸೋಮವಾರ 30-12-2024

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಸಿಖಂದರ್ ಚಿತ್ರದ ಟೀಸರ್ ಬಿಡುಗಡೆ

ಮ್ಯಾಕ್ಸ್ ಸಕ್ಸಸ್: ಚಾಮುಂಡೇಶ್ವರಿ ದರ್ಶನ ಪಡೆದ ಸುದೀಪ್

↘ ಪುಟ 6

### ಜಾಮೀನು ರದ್ದು ಕೋರಿ ಸುಪ್ರೀಂಕೋರ್ಟ್ ಮೆಟ್ಟಿಲೇರಲು ಪೊಲೀಸರಿಗೆ ಅನುಮತಿ ನೀಡಿದ ಗೃಹ ಇಲಾಖೆ

# ದರ್ಶನ್‌ಗೆ ಮತ್ತೆ ಕಂಟಕ

**ಬೆಂಗಳೂರು:** ಹೈಕೋರ್ಟ್‌ನಿಂದ ಜಾಮೀನು ಪಡೆದು ನಿರಾಳವಾಗಿದ್ದ ದರ್ಶನ್, ಪವಿತ್ರಗೌಡ ಮತ್ತು ಆತನ ಗ್ಯಾಂಗ್‌ಗೆ ಮತ್ತೆ ಸಂಕಷ್ಟ ಎದುರಾಗಿದೆ.

ರಾಜ್ಯ ಉಚ್ಚ ನ್ಯಾಯಾಲಯ ನೀಡಿರುವ ಜಾಮೀನನ್ನು ಪ್ರಶ್ನಿಸಿ ಸರ್ವೋಚ್ಚ ನ್ಯಾಯಾಲಯದ ಮೆಟ್ಟಿಲೇರಲು ಪೊಲೀಸ್ ಇಲಾಖೆಗೆ ಅನುಮತಿ ದೊರೆತಿದೆ.

ನಟ ದರ್ಶನ್, ಪವಿತ್ರಾ ಗೌಡ ಸೇರಿದಂತೆ ಏಳು ಮಂದಿಗೆ ಹೈಕೋರ್ಟ್ ಪೂರ್ಣ ಪ್ರಮಾಣದ ಜಾಮೀನು ನೀಡಿದ್ದನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್ ಮೆಟ್ಟಿಲೇರಲು ಪೊಲೀಸ್ ಇಲಾಖೆ ಕೇಳಿದ್ದ ಅನುಮತಿಯನ್ನು ರಾಜ್ಯ ಗೃಹ ಇಲಾಖೆ ಮಂಜೂರು ಮಾಡಿದೆ

ಗೃಹ ಇಲಾಖೆಯಿಂದ ಅನುಮತಿ ದೊರೆತ ಹಿನ್ನೆಲೆಯಲ್ಲಿ ಜಾಮೀನು ವಜಾಗೊಳಿಸುವಂತೆ ಕೋಡಿ ಮೇಲ್ಮನವಿ ಸಲ್ಲಿಸಲು ಇಲಾಖೆ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ಈ ಬಗ್ಗೆ ಇಲಾಖೆಯ ಉನ್ನತ ಅಧಿಕಾರಿಗಳು ಕಾನೂನು ತಜ್ಞರೊಂದಿಗೆ ಮಾತುಕತೆ ನಡೆಸುತ್ತಿದ್ದು ಶೀಘ್ರವೇ ಸರ್ವೋಚ್ಚ ನ್ಯಾಯಾಲಯದ ಮೆಟ್ಟಿಲೇರಲಿದ್ದಾರೆ.

ಬೆನ್ನು ನೋವಿನ ಕಾರಣ ನೀಡಿ ತಾತ್ಕಾಲಿಕ ಜಾಮೀನು



ಪಡೆದಿದ್ದ ದರ್ಶನ್ ಪೂರ್ಣ ಪ್ರಮಾಣದ ಜಾಮೀನು ಪಡೆಯುವಲ್ಲಿ ಯಶಸ್ವಿಯಾಗಿದ್ದರು. ಆದರೆ ಇದನ್ನು ಪ್ರಶ್ನಿಸಿದ್ದ ರಾಜ್ಯ ಪೊಲೀಸ್ ಇಲಾಖೆ ಸುಪ್ರೀಂಕೋರ್ಟ್ ಮೆಟ್ಟಿಲೇರಲು ಅವಕಾಶ ಕಲ್ಪಿಸುವಂತೆ ಪತ್ರ ಬರೆದಿತ್ತು. ಇದನ್ನು ಪರಿಗಣಿಸಿದ ಇಲಾಖೆ ಅನುಮತಿ ನೀಡಿದೆ.

ಹಾಗಾಗಿ ದರ್ಶನ್ ಪವಿತ್ರಾ ಗೌಡ. ಪ್ರದೂಷ್, ನಾಗರಾಜು, ಅನುಕುಮಾರ್, ಜಗದೀಶ್ ಸೇರಿದಂತೆಏಳು ಮಂದಿ ಮತ್ತೆ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಒಂದು ವೇಳೆ ಸುಪ್ರೀಂಕೋರ್ಟ್ ಕರ್ನಾಟಕ ಪೊಲೀಸರ ವಾದವನ್ನು ಪರಿಗಣಿಸಿದ್ದೇ ಆದಲ್ಲಿ ದರ್ಶನ್ ಅಂಡ್ ಗ್ಯಾಂಗ್‌ಗೆ ಮತ್ತೆ ಜೈಲುವಾಸವೇ ಅನಿವಾರ್ಯವಾಗಲಿದೆ.

ಪೊಲೀಸ್ ಇಲಾಖೆಯ

ಈಗಾಗಲೇ ಗೃಹ ಇಲಾಖೆಯಿಂದ ಅನುಮತಿ ನೀಡಿ ಕಡತ ರವಾನೆ ಆಗಿದ್ದು, ಮೆರಿಟ್ಸ್ ಆಫ್ ದಿ ಕೇಸ್ ಮೇಲೆ ಮನವಿ ಮಾಡಲು ಪೊಲೀಸರು ರೆಡಿ ಆಗಿದ್ದಾರೆ.

ಕೇವಲ ದರ್ಶನ್ ಮಾತ್ರವಲ್ಲದೆ, ಬೇಲ್ ಪಡೆದ ಎಲ್ಲರ ಜಾಮೀನು ರದ್ದು ಮಾಡಲು ಮನವಿ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಸ್ ಫೈಲ್ ಮಾಡಲು ಕನ್ನಡದಲ್ಲಿರುವ ಕಡತವನ್ನು ಇಂಗ್ಲಿಷ್‌ಗೆ ತರ್ಜುಮೆ ಮಾಡಲಾಗುತ್ತಿದೆ.



ರಾಜರಾಜೇಶ್ವರಿ ನಗರದ ಹಲಗೆವಡೇರಹಳ್ಳಿಯಲ್ಲಿ ಶ್ರೀ ಕರುಮಾರಿಯಮ್ಮ ದೇಗುಲ ನಿರ್ಮಾಣಕ್ಕೆ ಮಂಜೂರಾಗಿರುವ ಜಮೀನನ್ನು ಡಿಸಿಎಂ ಡಿ ಕೆ ಶಿವಕುಮಾರ್ ಅವರು ಅಧಿಕಾರಿಗಳ ಜತೆ ಸೋಮವಾರ ಪರಿಶೀಲನೆ ಮಾಡಿದರು.

## ನಮ್ಮದು ಸ್ವಚ್ಛ ಆಡಳಿತದ ಸರ್ಕಾರ: ಡಿಸಿಎಂ

ಬೆಂಗಳೂರು: "ನಮ್ಮದು ಸ್ವಚ್ಛ ಆಡಳಿತದ ಸರ್ಕಾರ. ಗುತ್ತಿಗೆದಾರನ ಸಾವಿಗೂ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೂ ಯಾವುದೇ ಸಂಬಂಧವಿಲ್ಲ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಸೋಮವಾರ ಪ್ರತಿಕ್ರಿಯೆ ನೀಡಿದರು.

"ಈ ಪ್ರಕರಣದಲ್ಲಿ ಪ್ರಿಯಾಂಕ್ ಖರ್ಗೆ ಅವರ ಪಾತ್ರವಿಲ್ಲ. ಆತ್ಮಹತ್ಯೆ ಪತ್ರದಲ್ಲಿಅವರ ವಿರುದ್ಧ ನೇರ ಆರೋಪವಿಲ್ಲ. ಬೇರೆಯವರ ಮೇಲೆ ಆರೋಪ ಮಾಡಿದಾಕ್ಷಣ ಇವರು ರಾಜೀನಾಮೆ ನೀಡಲು ಸಾಧ್ಯವಿಲ್ಲ. ಪ್ರಿಯಾಂಕ್ ಖರ್ಗೆ ಅವರ ಪ್ರಾಮಾಣಿಕತೆ ಬಗ್ಗೆ ನಮಗೆ ಗೊತ್ತಿದೆ. ಗುತ್ತಿಗೆದಾರನ ಸಾವಿನ ಬಗ್ಗೆ ಕಾನೂನು ಪ್ರಕಾರ ತನಿಖೆ ನಡೆಯುತ್ತದೆ" ಎಂದರು.

**ವಿಜಯೇಂದ್ರ, ಯಡಿಯೂರಪ್ಪ ಅವರ ಫೋಟೋ ಬಿಡುಗಡೆ ಮಾಡಲೇ:** ಸಾವಿಗೆ ಕಾರಣವಾಗಿರುವ ಆರೋಪ ಹೊತ್ತಿರುವ ರಾಜು ಎಂಬುವವರು ನಿಮ್ಮ ಜತೆ, ಸಿಎಂ, ಪ್ರಿಯಾಂಕ ಖರ್ಗೆ ಅವರ ಜತೆ



ಇರುವ ಫೋಟೋಗಳನ್ನು ವಿಜಯೇಂದ್ರ ಅವರು ಬಿಡುಗಡೆ ಮಾಡಿದ್ದಾರೆ ಎಂದು ಕೇಳಿದಾಗ, "ನನ್ನ ಜೊತೆ ವಿಜಯೇಂದ್ರ, ಯಡಿಯೂರಪ್ಪ ಅವರು ಇರುವ ಫೋಟೋಗಳಿವೆ. ನಮ್ಮ ಮನೆಗೆ ಬಂದವರು, ಮದುವೆ ಕಾರ್ಯಕ್ರಮಕ್ಕೆ ಹೋದಾಗ ಅನೇಕರು ನಮ್ಮ ಜೊತೆ ಫೋಟೋ ತೆಗೆಸಿಕೊಳ್ಳುತ್ತಾರೆ. ವಿಜಯೇಂದ್ರ, ಯಡಿಯೂರಪ್ಪ ಅವರು ಕ್ರಿಮಿನಲ್, ರೌಡಿಗಳು ಸೇರಿದಂತೆ ಯಾರೆಲ್ಲರ ಜತೆ ಫೋಟೋ ತೆಗೆಸಿಕೊಂಡಿದ್ದಾರೆ ಎಂದು ನಾನು ಬಿಡುಗಡೆ ಮಾಡಲೇ? ಅವರಿಗೆ ಬೇಕು ಎಂದರೆ ಬಿಡುಗಡೆ ಮಾಡುತ್ತೇನೆ. ಆರೋಪಿಗಳು ಹಾಗೂ ನಮ್ಮ ಜತೆ ಮಾತುಕತೆ, ವ್ಯವಹಾರ ನಡೆದಿರುವುದಕ್ಕೆ ದಾಖಲೆ ಇದ್ದರೆ ಆರೋಪ ಮಾಡಲಿ. ನಾವು ಉತ್ತಮವಾಗಿ ಸರ್ಕಾರ ನಡೆಸುತ್ತಿದ್ದು, ವಿರೋಧ ಪಕ್ಷದವರು ಸುಮ್ಮನೆ ಮಾತಾಡಬೇಕು ಎಂಬ ಕಾರಣಕ್ಕೆ ಮಾತನಾಡುತ್ತಾರೆ. ಮಾತಾಡಲಿ ಬಿಡಿ" ಎಂದು ಹೇಳಿದರು.


**ಬಿಜೆಪಿ ಅವಧಿಯಲ್ಲಿ ಯಾಕೆ ಸಿಬಿಐ ತನಿಖೆಗೆ ನೀಡಲಿಲ್ಲ?:** ಪ್ರಕರಣವನ್ನು ಸಿಬಿಐ ತನಿಖೆಗೆ ನೀಡುವಂತೆ ಒತ್ತಾಯಿಸಿ ಮುತ್ತಿಗೆ ಹಾಕುತ್ತೇವೆ ಎಂಬ ಬಿಜೆಪಿ ನಾಯಕರ ಹೇಳಿಕೆ ಬಗ್ಗೆ ಕೇಳಿದಾಗ, "ಮುತ್ತಿಗೆ ಹಾಕಲಿ. ನನ್ನ ಸಹೋದರ ಸುರೇಶ್, ರಾಜರಾಜೇಶ್ವರಿ ನಗರದ ಕೆಲವು ಪ್ರಕರಣಗಳನ್ನು ಪ್ರಸ್ತಾಪಿಸಿದ್ದಾರೆ. ಅವೆಲ್ಲವನ್ನು ಸೇರಿಸಿ ಸಿಬಿಐಗೆ ವಹಿಸೋಣ. ಪುಟ 2

## ಮರು ಪರೀಕ್ಷೆಯಲ್ಲೂ ಮುಗ್ಗರಿಸಿದ ಎಡವಟ್ಟು ಕಾಂಗ್ರೆಸ್ ಸರ್ಕಾರ

**ಬೆಂಗಳೂರು:** ಆಗಸ್ಟ್ ನಲ್ಲಿ ನಡೆದ 2023–24ನೇ ಸಾಲಿನ ಕೆಪಿಎಸ್ ಸಿ ಗೆಜೆಟೆಡ್ ಪ್ರೊಬೇಷನರ್ಸ್ ಪೂರ್ವಭಾವಿ ಪರೀಕ್ಷೆಯಲ್ಲಿ ಭಾರಿ ಎಡವಟ್ಟುಗಳು ಕಂಡು ಬಂದ ನಂತರ ಅಭ್ಯರ್ಥಿಗಳ ಆಕ್ರೋಶಕ್ಕೆ ಮಣಿದು ನಿನ್ನೆ ನಡೆಸಲಾದ ಮರುಪರೀಕ್ಷೆಯಲ್ಲಿ ಕಾಂಗ್ರೆಸ್ ಸರ್ಕಾರ ಮತ್ತೊಮ್ಮೆ ಎಡವಟ್ಟುಗಳ ಮೇಲೆ ಎಡವಟ್ಟುಗಳು ಮಾಡಿದ್ದು, ಲಕ್ಷಾಂತರ ಉದ್ಯೋಗಾಕಾಂಕ್ಷಿಗಳ ಭವಿಷ್ಯ ಡೋಲಾಯಮಾನವಾಗಿದೆ ಎಂದು ಪ್ರತಿಪಕ್ಷ ಬಿಜೆಪಿ ಟೀಕಾ ಪ್ರಹಾರ ನಡೆಸಿದೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಟ್ವೀಟ್ ಮಾಡಿರುವ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಭಾಷಾಂತರದಲ್ಲಿ ಲೋಪ ದೋಷ, ಓಎಂಆರ್ ಶೀಟ್ ಮತ್ತು ನೋಂದಣಿ ಸಂಖ್ಯೆ ಅದಲು ಬದಲು, ಕೆಲವೆಡೆಗಳಲ್ಲಿ 45 ನಿಮಿಷ ಪುಟ 2

## ಎಎಪಿ ಗೆದ್ದರೆ ದೇವಸ್ಥಾನಗಳ ಅರ್ಚಕರ ಗೌರವಧನ 18 ಸಾವಿರಕ್ಕೆ ಏರಿಕೆ

ನವದೆಹಲಿ: ದೆಹಲಿಯಲ್ಲಿ ಮತ್ತೆ ಅಧಿಕಾರಕ್ಕೆ ಬಂದರೆ ತಮ್ಮ ಪಕ್ಷವು 'ಪೂಜಾರಿ– ಗ್ರಂಥಿ ಸಮ್ಮಾನ್ ಯೋಜನೆ'ಯನ್ನು ಪ್ರಾರಂಭಿಸಲಿದೆ. ದೇವಾಲಯದ ಅರ್ಚಕರು ಮತ್ತು ಗುರುದ್ವಾರಗಳ ಗ್ರಂಥಿಗಳಿಗೆ ಮಾಸಿಕ 18,000 ರೂ. ಭತ್ಯೆ ನೀಡಲಾಗುವುದು ಎಂದು ಆಮ್ ಆದ್ಮಿ ಪಾರ್ಟಿಯ (ಎಎಪಿ)




ಮುಖ್ಯಸ್ಥ ಅರವಿಂದ ಕೇಜ್ರಿವಾಲ್ ಸೋಮವಾರ ಘೋಷಿಸಿದ್ದಾರೆ.

ಮುಂದಿನ ವರ್ಷ ಫೆಬ್ರುವರಿಯಲ್ಲಿ ದೆಹಲಿ ವಿಧಾನಸಭೆಗೆ ಚುನಾವಣೆ ನಡೆಯಲಿದೆ. ಚುನಾವಣೆಗೆ ಮುನ್ನ ಈ ಘೋಷಣೆ ಹೊರಬಿದ್ದಿದ್ದು, ಸತತ ನಾಲ್ಕನೇ ಅವಧಿಗೆ ಅಧಿಕಾರವನ್ನು ಉಳಿಸಿಕೊಳ್ಳಲು ಎಎಪಿ ಪ್ರಯತ್ನ ನಡೆಸುತ್ತಿದೆ. ಹಲವು ವಿಶೇಷ ಯೋಜನೆಗಳನ್ನು ಘೋಷಿಸುತ್ತಿದೆ.'ಪೂಜಾರಿಗಳು ಮತ್ತು ಗ್ರಂಥಿಗಳು ನಮ್ಮ ಸಮಾಜದ ಪ್ರಮುಖ ಭಾಗವಾಗಿದ್ದಾರೆ. ಆದರೆ, ಅವರನ್ನು ನಿರ್ಲಕ್ಷ್ಯಸಲಾಗಿದೆ. ದೇಶದಲ್ಲಿ ಮೊದಲ ಬಾರಿಗೆ, ನಾವು ಅವರನ್ನು ಬೆಂಬಲಿಸಲು ಪುಟ 2

### ಎಷ್ಟೇ ಚೀರಾಡಿದ್ರೂ ಬಟ್ಟೆ ಹರಿದುಕೊಂಡ್ರೂ

## ರಾಜೀನಾಮೆ ಪ್ರಶ್ನೆಯೇ ಇಲ್ಲ

ಬೆಂಗಳೂರು: ಎಷ್ಟೇ ಚೀರಾಡಿದ್ರೂ ಬಟ್ಟೆ ಹರಿದುಕೊಂಡ್ರೂ ರಾಜೀನಾಮೆ ಪ್ರಶ್ನೆಯೇ ಇಲ್ಲ ಎಂದು ಗ್ರಾಮೀಣಾಭಿವೃದ್ಧಿ ಇಲಾಖೆ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.



ಗುತ್ತಿಗೆದಾರ ಸಚಿವ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜೀನಾಮೆ ನೀಡುವಂತೆ ಆಗ್ರಹಿಸುತ್ತಿರುವ ಬಿಜೆಪಿ ನಾಯಕರಿಗೆ ತಿರುಗೇಟು ನೀಡಿರುವ ಖರ್ಗೆ, ವಿಜಯೇಂದ್ರ ವಿರುದ್ಧ ಮನಿಲಾಂಡರಿಂಗ್ ಕೇಸ್ ಇದೆ. ಯಾಗೆ ರಾಜೀನಾಮೆ ನೀಡಿಲ್ಲ. ನನ್ನ ವಿರುದ್ಧ ಯಾವುದಾದರೂ ದಾಖಲೆ ಇದ್ದರೇ ತೋರಿಸಿ. ಪುಟ 2

## ಕಂಪ್ಲಿ ಸಂಪೂರ್ಣ ಬಂದ್!

ಬಳ್ಳಾರಿ: ಡಾ. ಬಿ.ಆರ್. ಅಂಬೇಡ್ಕರ್ ಅವರ ಕುರಿತಾದ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿಕೆ ಖಂಡಿಸಿ ಇಂದು ಜಿಲ್ಲೆಯ ಕಂಪ್ಲಿ ತಾಲೂಕು ಸಂಪೂರ್ಣ ಬಂದ್ ಆಗಿದೆ.

ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರ



ಬಗ್ಗೆ ಬಿಜೆಪಿಗರು ಅವಮಾನ ಮಾಡುವುದೇ ಕಾಯಕ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿರುವ ವಿವಿಧ ಸಂಘಟನೆಗಳ ಪ್ರತಿಭಟನಕಾರರು ಬೆಳಗ್ಗೆ 6 ಗಂಟೆಯಿಂದಲೇ ಬಂದ್ ಆರಂಭಿಸಿದ್ದಾರೆ. ಪುಟ 2

## ಸಚಿನ್ ಆತ್ಮಹತ್ಯೆ; ಸಿಐಡಿ ತನಿಖೆಗೆ

ಬೆಂಗಳೂರು: ಸಚಿವ ಪ್ರಿಯಾಂಕ್ ಖರ್ಗೆ ಆಪ್ತನ ವಿರುದ್ದ ಗುತ್ತಿಗೆ ನೀಡದೆ ವಂಚನೆ ಕೊಲೆ ಬೆದರಿಕೆ ಆರೋಪ ಮಾಡಿ ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಮಾಡಿಕೊಂಡ ಪ್ರಕರಣವನ್ನ ಸಿಐಡಿ ತನಿಖೆಗೆ ವಹಿಸಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.

ಈ ಕುರಿತು ಮಾತನಾಡಿರುವ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಲಾಗಿದೆ. ಎಲ್ಲಾ ಪ್ರಕರಣಗಳನ್ನ ಸಿಬಿಐ ತನಿಖೆಗೆ ಕೊಡಲು ಆಗಲ್ಲ. ನಮ್ಮ ಸಿಐಡಿ ಸಮರ್ಥವಾಗಿದೆ. ಬಿಜೆಪಿ ಅನಗತ್ಯ ಗೊಂದಲ ಸೃಷ್ಟಿಸುವ ಕೆಲಸ ಮಾಡುತ್ತಿದೆ ಪ್ರಿಯಾಂಕ್ ಖರ್ಗೆ ರಾಜೀನಾಮೆ ಕೊಡುವ ಅವಶ್ಯಕತೆ ಇಲ್ಲ ಎಂದು ತಿಳಿಸಿದರು.

ಹೊಸ ವರ್ಷಾಚರಣೆಗೆ ಬಿಗಿ ಭದ್ರತೆ ಕುರಿತು ಪ್ರತಿಕ್ರಿಯಿಸಿದ ಡಾ.ಜಿ.ಪರಮೇಶ್ವರ್, ಪುಟ 2

## ಸಿಬಿಐ ತನಿಖೆಗೆ ಒತ್ತಾಯ

ಬೆಂಗಳೂರು: ಸಚಿನ್ ಸಾವಿನ ಪ್ರಕರಣದ ಸಂಬಂಧ ಸಚಿವ ಪ್ರಿಯಾಂಕ ಖರ್ಗೆಯವರ ರಾಜೀನಾಮೆ ಪಡೆದು, ದುರ್ಘಟನೆಯ ಸಿಬಿಐ ತನಿಖೆ ಮಾಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಆಗ್ರಹಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನ್ಯಾಯಕ್ಕಾಗಿ ಸಿಬಿಐ ತನಿಖೆಗೆ ಸಚಿನ್ ಕುಟುಂಬವೂ ಒತ್ತಾಯಿಸಿದೆ ಎಂದರು. ಹಿಂದೆ, ಇದೇ ಸರಕಾರದ ಸಚಿವ ನಾಗೇಂದ್ರ ಅವರೂ ವಾಲ್ಮೀಕಿ ನಿಗಮದ ಹಗರಣದಲ್ಲಿ ಸಿಲುಕಿ ರಾಜೀನಾಮೆ ಕೊಟ್ಟಿದ್ದಾರೆ. ಒಂದು ಕ್ಷಣವೂ ತಡ ಮಾಡದೆ, ಪ್ರಿಯಾಂಕ ಖರ್ಗೆಯವರ ರಾಜೀನಾಮೆ ಪಡೆದುಕೊಳ್ಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ಆಗ್ರಹಿಸಿದರು.




ಯಾರನ್ನೋ ಉಳಿಸುವ, ರಕ್ಷಿಸುವ ದುಸ್ಸಾಹಸ ಬೇಡ ಎಂದು ಎಚ್ಚರಿಸಿದರು.

ಮೇಧಾವಿ ಪ್ರಿಯಾಂಕ್ ಖರ್ಗೆಯವರಿಗೆ ಮರೆವು ಜಾಸ್ತಿ. ಹಿಂದೆ ಬಿಜೆಪಿ ಸರಕಾರ ಅಧಿಕಾರದಲ್ಲಿದ್ದಾಗ ಈಶ್ವರಪ್ಪ ಅವರ ಮೇಲೆ ಆರೋಪ ಬಂದಾಗ, ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ಕೊಟ್ಟದ್ದನ್ನು ಪ್ರಿಯಾಂಕ್ ಮರೆಯಬಾರದು. ಮಡಿಕೇರಿಯಲ್ಲಿ ಪೊಲೀಸ್ ಅಧಿಕಾರಿ ಗಣಪತಿ ಆತ್ಮಹತ್ಯೆ ಮಾಡಿಕೊಂಡಿದ್ದು, ಇದೇ ಸಿದ್ದರಾಮಯ್ಯನವರು ಸಿಎಂ ಆಗಿದ್ದಾಗ ಆ ಪ್ರಕರಣದಲ್ಲಿ ಪುಟ 2

## ಕೆಎಸ್‌ಡಿಎಲ್ ಅಧಿಕಾರಿ ಆತ್ಮಹತ್ಯೆ

ಬೆಂಗಳೂರು: ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧಿಕಾರಿಯೊಬ್ಬರು ಆತ್ಮಹತ್ಯೆಗೆ ಶರಣಾಗಿದ್ದಾರೆ. ಅಮೃತ್ ಸಿರಿಯೂರ್ ಆತ್ಮಹತ್ಯೆ ಮಾಡಿಕೊಂಡ ಅಧಿಕಾರಿ. ಕೈಯಲ್ಲಿ ಡೆತ್‌ನೋಟ್ ಹಿಡಿದುಕೊಂಡು ಅಮೃತ್ ಸಿರಿಯೂರ್ ತಮ್ಮ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕೆಎಸ್‌ಡಿಎಲ್ ಮೆಟಿರಿಯಲ್ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದ ಅಮೃತ್ ಸಿರಿಯೂರ್ ಡೆತ್‌ನೋಟ್‌ನಲ್ಲಿ ಹಿರಿಯ ಅಧಿಕಾರಿಗಳ ಹೆಸರನ್ನು ಉಲ್ಲೇಖ ಮಾಡಿದ್ದಾರೆ. ಕೆಲಸದ ಸಂಬಂಧ ಒತ್ತಡ ಹಾಗೂ ಕಿರುಕುಳ ನೀಡುತ್ತಿದ್ದಾರೆ ಎಂದು ಡೆತ್‌ನೋಟ್‌ನಲ್ಲಿ ಆರೋಪಿಸಿದ್ದಾರೆ. ಭಾನುವಾರ ಆತ್ಮಹತ್ಯೆ ಮಾಡಿಕೊಂಡಿದ್ದು ಇಂದು ಪ್ರಕರಣ ಬೆಳಕಿಗೆ ಬಂದಿದೆ. ಮಹಾಲಕ್ಷ್ಮಿ ಲೇಔಟ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಜ.3ಕ್ಕೆ ನಟ ಅಲ್ಲು ಅರ್ಜುನ್ ಜಾಮೀನು ತೀರ್ಪು

ಹೈದರಾಬಾದ್: ಪುಷ್ಪ 2 ಚಿತ್ರ ಪ್ರದರ್ಶನದ ವೇಳೆ ಸಂಭವಿಸಿದ ಕಾಲ್ತುಳಿತದಲ್ಲಿ 35 ವರ್ಷದ ಮಹಿಳೆ ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ಅಲ್ಲು ಅರ್ಜುನ್ ಸಲ್ಲಿಸಿರುವ ಸಾಮಾನ್ಯ ಜಾಮೀನು ಅರ್ಜಿಯ ವಿಚಾರಣೆ ನಡೆಸಿದ ನಾಂಪಲ್ಲಿ ಜಿಲ್ಲಾ ನ್ಯಾಯಾಲಯದಲ್ಲಿ ಜನವರಿ 3 ರಂದು ತೀರ್ಪು ನೀಡುವುದಾಗಿ ಹೇಳಿದೆ.



ಪ್ರಕರಣದ ವಿಚಾರಣೆ ವೇಳೆ ಅಲ್ಲು ಅರ್ಜುನ್ ಅವರ ಸಾಮಾನ್ಯ ಜಾಮೀನು ಅರ್ಜಿಯನ್ನು ವಿರೋಧಿಸಿ ಚಿಕ್ಕಡಪಲ್ಲಿ ಪೊಲೀಸರು ಪ್ರತಿ–ಅಫಿಡವಿಟ್ ಸಲ್ಲಿಸಿದ್ದಾರೆ.

ನಟ ಅಲ್ಲು ಅರ್ಜುನ್‌ಗೆ ಸಾಮಾನ್ಯ ಜಾಮೀನು ನೀಡುವಂತೆ ಅವರ ಹಿರಿಯ ವಕೀಲ ನಿರಂಜನ್ ರೆಡ್ಡಿ ವಾದ ಮಂಡಿಸಿದರು. ಇದೇ ವೇಳೆ ಪಬ್ಲಿಕ್ ಪ್ರಾಸಿಕ್ಯೂಟರ್ ಜಾಮೀನು ಅರ್ಜಿಯನ್ನು ವಜಾಗೊಳಿಸುವಂತೆ ಮನವಿ ಮಾಡಿದರು.

ಬಾರಿ ಚರ್ಚೆಗೆ ಕಾರಣವಾದ ಪ್ರಕರಣದ ವಾದ ಪ್ರತಿವಾದ ಆಲಿಸಿದ ನ್ಯಾಯಾಲಯ ಜನವರಿ 3 ರಂದು ಈ ಪ್ರಕರಣದ ಬಗ್ಗೆ ತೀರ್ಪು ನೀಡುವುದಾಗಿ ಘೋಷಿಸಿತು. ಅಲ್ಲು ಅರ್ಜುನ್‌ಗೆ ಈಗಾಗಲೇ ಹೈಕೋರ್ಟ್ ನಾಲ್ಕು ವಾರಗಳ ಮಧ್ಯಂತರ ಜಾಮೀನು ನೀಡಿದ್ದು, ಇದೀಗ ಸಾಮಾನ್ಯ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದಾರೆ.

ಮೊದಲ ಪುಟದಿಂದ

## ನಮ್ಮದು ಸ್ವಚ್ಛ ಆಡಳಿತದ ಸರ್ಕಾರ:

ಬಿಜೆಪಿ ಸರ್ಕಾರ ಇದ್ದಾಗ ನನ್ನ ಪ್ರಕರಣವನ್ನು ಮಾತ್ರ ಸಿಬಿಐಗೆ ನೀಡಿದ್ದರು. ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಡಿ.ಕೆ. ರವಿ ಸಾವು, ಸೌಜನ್ಯ ಸಾವು, ಪರೇಶ್ ಮೆಸ್ತಾ ಪ್ರಕರಣ ಸೇರಿದಂತೆ ಸುಮಾರು 12 ಪ್ರಕರಣಗಳನ್ನು ಸಿಬಿಐ ತನಿಖೆಗೆ ನೀಡಿದ್ದೆವು. ಬಿಜೆಪಿಯವರು ನನ್ನ ಪ್ರಕರಣದ ಜತೆ ಬಿಜೆಪಿ ಸಚಿವರ ಪ್ರಕರಣಗಳನ್ನು ಸಿಬಿಐಗೆ ನೀಡಬೇಕಿತ್ತು. ಯಾಕೆ ನೀಡಲಿಲ್ಲ" ಎಂದರು.

**ಪ್ರಿಯಾಂಕ್ ಖರ್ಗೆ ಅವರ ಬಗ್ಗೆ ಬಿಜೆಪಿಗೆ ಅಸೂಯೆ:**

ಬಿಜೆಪಿಯವರು ಪ್ರಿಯಾಂಕ್ ಖರ್ಗೆ ರಾಜೀನಾಮೆ ಕೇಳುತ್ತಿರುವ ಬಗ್ಗೆ ಕೇಳಿದಾಗ, "ಪ್ರಿಯಾಂಕ್ ಖರ್ಗೆ ಅವರು ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ. ಅವರು ಯಾವ ತಪ್ಪು ಮಾಡಿದ್ದಾರೆ ಎಂದು ರಾಜೀನಾಮೆ ನೀಡಬೇಕು? ಪ್ರಿಯಾಂಕ್ ಖರ್ಗೆ ನಮ್ಮ ಪಕ್ಷದ ಧ್ವನಿ. ಅವರ ಮೇಲಿನ ಅಸೂಯೆಗೆ ವಿರೋಧ ಪಕ್ಷಗಳು ಈ ರೀತಿ ನಡೆದುಕೊಳ್ಳುತ್ತಿವೆ. ದಲಿತ ಸಮುದಾಯದ ನಾಯಕ ಇಷ್ಟು ದೊಡ್ಡ ಮಟ್ಟಕ್ಕೆ ಬೆಳೆಯುತ್ತಿರುವುದನ್ನು ಸಹಿಸಲು ಅವರಿಗೆ ಸಾಧ್ಯವಾಗುತ್ತಿಲ್ಲ. ಐಟಿ-ಬಿಟಿ ಇಲಾಖೆಯನ್ನು ಸಮರ್ಥವಾಗಿ ಮುನ್ನಡೆಸುತ್ತಿದ್ದಾರೆ. ಕೃಷ್ಣ ಅವರ ಸರ್ಕಾರದ ನಂತರ ಐಟಿ-ಬಿಟಿ ಕ್ಷೇತ್ರದಲ್ಲಿ ರಾಜ್ಯವನ್ನು ಯಶಸ್ವಿಯಾಗಿ ಮುನ್ನಡೆಸುತ್ತಿರುವುದು ಪ್ರಿಯಾಂಕ್ ಖರ್ಗೆ. ಹೀಗಾಗಿ ಅವರನ್ನು ಕೆಳಗಿಳಿಸುವ ಸಂಚು ಮಾಡುತ್ತಿದ್ದಾರೆ" ಎಂದರು.ಕೆಪಿಎಸ್ ಸಿ ಪರೀಕ್ಷೆಯಲ್ಲಿ ಗೊಂದಲದ ಬಗ್ಗೆ ಕೇಳಿದಾಗ, "ಈ ವಿಚಾರವಾಗಿ ಗಮನ ಹರಿಸುತ್ತೇವೆ. ಅನ್ಯಾಯ ಆಗಿರುವರಿಗೆ ನ್ಯಾಯ ಒದಗಿಸಲಾಗುವುದು" ಎಂದು ತಿಳಿಸಿದರು.

ರಾಜ್ಯಪಾಲರನ್ನು ಭೇಟಿ ಮಾಡಿ ಬಿಜೆಪಿ ನಾಯಕರು ದೂರು ನೀಡಿದ ಬಗ್ಗೆ ಕೇಳಿದಾಗ, "ಅವರು ನಿತ್ಯ ನಮ್ಮನ್ನು ನೆನೆಯಬೇಕು. ನೆನೆಯಲಿ ಬಹಳ ಸಂತೋಷ" ಎಂದರು.ಪ್ರಿಯಾಂಕ್ ಖರ್ಗೆ ಅವರ ವಿರುದ್ಧದ ಪ್ರಕರಣ ಸಿಬಿಐಗೆ ಯಾಕೆ ಕೊಡಬಾರದು ಎಂದು ಕೇಳಿದಾಗ, "ಇದು ಸಿಬಿಐಗೆ ನೀಡಬೇಕಾದ ಪ್ರಕರಣವಲ್ಲ. ನಮ್ಮ ತನಿಖಾ ಸಂಸ್ಥೆಗಳು ಈ ಪ್ರಕರಣಗಳ ತನಿಖೆ ಮಾಡಲು ಸಮರ್ಥವಾಗಿವೆ. ಅಧಿಕಾರಿಗಳು ಸಮರ್ಥರಾಗಿದ್ದಾರೆ. ಸಿಬಿಐ ತನಿಖೆ ವೈಖರಿ ನಮಗೂ ಗೊತ್ತಿದೆ" ಎಂದು ತಿಳಿಸಿದರು.

"ರಾಜ್ಯದ ಜನತೆಗೆ ಹೊಸವರ್ಷದ ಹಾರ್ದಿಕ ಶುಭಾಶಯಗಳು. 2025 ರ ವರ್ಷ ಎಲ್ಲರ ಪಾಲಿಗೂ ಉತ್ತಮವಾಗಿರಲಿ. ಹೊಸವರ್ಷಾಚರಣೆ ಹಿನ್ನೆಲೆಯಲ್ಲಿ ನಗರದಲ್ಲಿ ಸಾವಿರಕ್ಕೂ ಹೆಚ್ಚು ಕ್ಯಾಮೆರಾ ಅಳವಡಿಸಲಾಗಿದೆ. ಯಾವುದೇ ದುರ್ವರ್ತನೆ, ಅಹಿತಕರ ಘಟನೆಗೆ ಅವಕಾಶ ಇಲ್ಲ. ನಮಗೆ ಬೆಂಗಳೂರಿನ ಘನತೆ ಬಹಳ ಮುಖ್ಯ. ಯಾರೇ ಕಾನೂನು ಉಲ್ಲಂಘನೆ ಮಾಡಿದರೂ ಪೊಲೀಸರು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಾರೆ" ಎಂದು ತಿಳಿಸಿದರು.

## 18 ಸಾವಿರಕ್ಕೆ ಏರಿಕೆ

ಈ ಯೋಜನೆಯನ್ನು ಪರಿಚಯಿಸುತ್ತಿದ್ದೇವೆ. ಈ ಯೋಜನೆ ಅಡಿಯಲ್ಲಿ ಅವರಿಗೆ ತಿಂಗಳಿಗೆ 18,000 ರೂ. ಭತ್ಯೆಯನ್ನು ನೀಡಲಾಗುತ್ತದೆ. ಈ ಯೋಜನೆಗೆ ನಾಳೆಯಿಂದಲೇ ನೋಂದಣಿ ಪ್ರಾರಂಭವಾಗುತ್ತದೆ' ಎಂದು ಕೇಜ್ರಿವಾಲ್ ಹೇಳಿದರು.

## ಪ್ರಶ್ನೆಯೇ ಇಲ್ಲ □

ನನ್ನ ರಾಜೀನಾಮೆ ಕೇಳಲು ಬಿವೈ ವಿಜಯೇಂದ್ರ ಏನು ಸುಪ್ರೀಂಕೋರ್ಟಾ? ಬಿವೈ ವಿಜಯೇಂದ್ರ ಮಾತಿಗೆ ಬಿಜೆಪಿಯಲ್ಲೇ ಕಿಮ್ಮತ್ತಿಲ್ಲ. ಉಳಿದವರು ಯಾಕೆ ಅವರ ಮಾತಿಗೆ ಕಿಮ್ಮತ್ತು ಕೊಡಬೇಕು ಎಂದರು.

ನನ್ನ ಮನೆಗೆ ಮುತ್ತಿಗೆ ಹಾಕಲು ಎಷ್ಟು ಜನ ಬರ್ತೀರಾ ಮೊದಲೇ ಹೇಳಿ ಅಷ್ಟು ಜನರಿಗೆ ಟೀ ವ್ಯವಸ್ಥೆ ಮಾಡುತ್ತೇವೆ ಎಂದು ಲೇವಡಿ ಮಾಡಿದ ಪ್ರಿಯಾಂಕ್ ಖರ್ಗೆ, ರಾಜು ಕಪನೂರು ನನ್ನ ಆಪ್ತ ಅಲ್ಲ ಎಂದು ಹೇಳಿಲ್ಲ. ಮೊದಲು ಬಿಜೆಪಿಯಲ್ಲಿದ್ದು ನಂತರ ಕಾಂಗ್ರೆಸ್ ಗೆ ಬಂದಿದ್ದಾರೆ ಎಂದರು.

## ಸಿಬಿಐ ತನಿಖೆಗೆ ಒತ್ತಾಯ

ಅಂದಿನ ಗೃಹ ಸಚಿವ ಜಾರ್ಜ್ ಅವರು ಕೂಡ ರಾಜೀನಾಮೆ ಕೊಟ್ಟು, ಸಿಬಿಐ ತನಿಖೆ ಆಗಿ ಕ್ಲೀನ್ ಚಿಟ್ ಬಂದಿತ್ತು ಎಂದು ಗಮನ ಸೆಳೆದರು.

ಸಚಿನ್ ಅವರ ಕುಟುಂಬಕ್ಕೆ ತಕ್ಷಣದಿಂದ ಭದ್ರತೆ ಕೊಡಬೇಕು. ಕುಟುಂಬಕ್ಕೆ 1 ಕೋಟಿ ರೂಪಾಯಿಗಳ ಪರಿಹಾರ ನೀಡಬೇಕು. ಹಲವರು ವಿದ್ಯಾವಂತರಿದ್ದು, ಕುಟುಂಬದ ಒಬ್ಬರು ಸದಸ್ಯರಿಗೆ ಸರಕಾರಿ ನೌಕರಿ ಕೊಡಬೇಕು ಎಂದು ಒತ್ತಾಯಿಸಿದರು.

ಹಿಂದೂ ಸಮಾಜದ ಸಿದ್ಧಲಿಂಗ ಸ್ವಾಮೀಜಿ, ಶಾಸಕ ಬಸವರಾಜ ಮತ್ತಿಮೂಡ, ಕಲಬುರ್ಗಿಯ ಬಿಜೆಪಿ ನಾಯಕರಾದ ಚಂದುಪಾಟೀಲ, ಮಣಿಕಂಠ ರಾಠೋಡ್ ಅವರ ಕೊಲೆಗೆ ಸಂಚು ರೂಪಿಸಿದ್ದಾಗಿ ಡೆತ್ ನೋಟ್ ತಿಳಿಸಿದೆ. ಸಿದ್ಧಲಿಂಗ ಸ್ವಾಮೀಜಿ ಅವರ ಧ್ವನಿ ಅಡಗಿಸಲು ಮಹಾರಾಷ್ಟ್ರದ ಸುಪಾರಿ ಕಿಲ್ಲ□□□ಗಳನ್ನು ಬಳಸುವ ವಿಚಾರವೂ ಡೆತ್ ನೋಟಿನಲ್ಲಿದೆ. ಹಾಗಾಗಿ ಇದೊಂದು ಗಂಭೀರ ವಿಚಾರ. ಆದ್ದರಿಂದ ಇದರ ಸಿಬಿಐ ತನಿಖೆ ಅತ್ಯಗತ್ಯ ಎಂದರು. ರಾಜ್ಯದ ಪೊಲೀಸ್ ಇಲಾಖೆಯಿಂದ ಅಂಥ ಶಕ್ತಿಶಾಲಿ ಖರ್ಗೆ ಕುಟುಂಬದ ವಿರುದ್ಧ ತನಿಖೆ ಮಾಡಲು ಸಾಧ್ಯವಿಲ್ಲ ಎಂದು ತಿಳಿಸಿದರು.

ಪ್ರಿಯಾಂಕ್ ಖರ್ಗೆಯವರ ಇಲಾಖೆ ಗ್ರಾಮೀಣಾಭಿವೃದ್ಧಿ ಮತ್ತು ಐಟಿ, ಬಿಟಿ ಮಾತ್ರವಲ್ಲ; ಅವರು ಸರ್ವ ಇಲಾಖೆಯ ಸಚಿವರು. ಸದನದಲ್ಲಿ ಗೃಹ ಸಚಿವರಿದ್ದರೂ, ಸಿಎಂ ಕುರಿತು ಪ್ರಶ್ನೆ ಇದ್ದರೂ ಅವರ ಪರವಾಗಿ ಇವರು ಎದ್ದೇಳುತ್ತಾರೆ; ಗಲಾಟೆ ಮಾಡುತ್ತಾರೆ ಎಂದು ವಿಜಯೇಂದ್ರ ಅವರು ಟೀಕಿಸಿದರು. ಪ್ರಿಯಾಂಕ್ ಖರ್ಗೆ ಅವರು ಬಹಳ ಜ್ಞಾನಿ, ಮೇಧಾವಿ, ಬುದ್ಧಿವಂತರು, ಅಷ್ಟೇ ಪ್ರಭಾವಿ, ಶಕ್ತಿಶಾಲಿ ಮುಖಂಡ ಎಂದು ತಿಳಿಸಿದರು. ಯಡಿಯೂರಪ್ಪ ಅವರ ಪೋಸ್ಕೊ ಕೇಸನ್ನು ಮುಚ್ಚಿಹಾಕಲು ಎಂಬ ಮಾತನ್ನು ಪ್ರಿಯಾಂಕ್ ಖರ್ಗೆಯವರು ಹೇಳಿದ್ದು, ಅವರು ಸುಪ್ರೀಂ ಕೋರ್ಟೇ, ಹೈಕೋರ್ಟೇ ಎಂದು ಪ್ರಶ್ನಿಸಿದರು.

ಇದೇ 27ರಂದು ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಗುತ್ತಿಗೆದಾರ ಸಚಿನ್ ಪಾಂಚಾಳ ಅವರು ಆತ್ಮಹತ್ಯೆ ಪ್ರಕರಣ ದೇಶಾದ್ಯಂತ ಸುದ್ದಿಯಾಗಿದೆ. ಅವರು ಬರೆದಿಟ್ಟ 7 ಪುಟಗಳ ಡೆತ್ ನೋಟಿನಲ್ಲಿ ಕಿರುಕುಳದ ಉಲ್ಲೇಖವಿದೆ. ಆತ್ಮಹತ್ಯೆ ಮಾಡಿಕೊಳ್ಳುವ ವ್ಯಕ್ತಿ ಬರೆದಿಟ್ಟ ಡೆತ್ ನೋಟಿನ ಮಾಹಿತಿ ಸತ್ಯಕ್ಕೆ ದೂರವಾಗುವ ಸಾಧ್ಯತೆ ಇಲ್ಲ ಎಂದು ತಿಳಿಸಿದರು.

ನಿನ್ನೆ ನಾನು, ವಿಪಕ್ಷ ನಾಯಕರು, ವಿಧಾನಪರಿಷತ್ ಸದಸ್ಯ ರವಿಕುಮಾರ್, ಸ್ಥಳೀಯ ಶಾಸಕರು, ಪಕ್ಷದ ಅಧ್ಯಕ್ಷರು, ಭಾಲ್ಕಿ ತಾಲ್ಲೂಕಿನ ಮೃತರ ಗ್ರಾಮಕ್ಕೆ ಭೇಟಿ ಕೊಟ್ಟಿದ್ದೇವೆ. ಸಚಿನ್ ಅವರ ಕುಟುಂಬವನ್ನು ಭೇಟಿ ಮಾಡಿದ್ದೇವೆ. ಆ ಹಿಂದುಳಿದ ವರ್ಗದ ಬಡ ಕುಟುಂಬದಲ್ಲಿ ಸಚಿ□□□ಗೆ 5 ಜನರು ಸಹೋದರಿಯರಿದ್ದಾರೆ ಎಂದು ವಿವರಿಸಿದರು. ಬಿಜೆಪಿಯವರಿಗೆ ರಾಜಕೀಯ ತೆವಲು, ಚಟ, ಹಿಟ್ ಆಂಡ್ ರನ್ ಎಂದು ಕಾಂಗ್ರೆಸ್ಸಿನವರು ಮಾತನಾಡುತ್ತಾರೆ ಎಂದರು.

ಸಚಿನ್ ಸಾಮಾಜಿಕ ಜಾಲತಾಣದಲ್ಲಿ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಪೋಸ್ಟ್ ಹಾಕಿಕೊಂಡಿದ್ದಾಗ ಅವರ ಇಬ್ಬರು ಸಹೋದರಿಯರಾದ ಸವಿತಾ, ಸುನೀತಾ ಮಧ್ಯಾಹ್ನವೇ 2.15ಕ್ಕೆ ಪೊಲೀಸ್ ಠಾಣೆಗೆ ಧಾವಿಸಿದ್ದರು. ಗೋಗರೆದು ಕೇಳಿದರೆ ಪ್ರಾಣ ಉಳಿಸಲು ಕೋರಿದರೆ, ಅವರ ಮನವಿಯನ್ನು ಕಿಂಚಿತ್ತೂ ಲೆಕ್ಕಿಸದೆ, ಅಮಾನವೀಯವಾಗಿ ಪಿಎ□□□ಐ ನಡೆದುಕೊಂಡಿದ್ದಾರೆ ಎಂದು ಆರೋಪಿಸಿದರು. ಅವರನ್ನು ಪೊಲೀಸ್ ಸ್ಟೇಷ□□□ಗಳಿಗೆ ತಿರುಗಾಡಿಸಿದ್ದರು ಎಂದು ಟೀಕಿಸಿದರು.

ದೂರು ಸ್ವೀಕರಿಸಿಲ್ಲ; ಸಚಿನ್ ಹುಡುಕುವ ಕೆಲಸವನ್ನೂ ಮಾಡಿಲ್ಲ; ಪೊಲೀಸ್ ಅಧಿಕಾರಿಗಳ ವರ್ತನೆಯು ಖಂಡನೀಯ. ಕಾಂಗ್ರೆಸ್ ಹಿರಿಯ ಮುಖಂಡ, ಖರ್ಗೆ ಕುಟುಂಬಕ್ಕೆ ಹತ್ತಿರ ಇರುವ ರಾಜು ಕಪನೂರ್ ಈ ಪ್ರಕರಣದ ಹಿಂದಿನ ಪ್ರಮುಖ ಆರೋಪಿ ಎಂಬುದು ಡೆತ್ ನೋಟಿನಲ್ಲಿದೆ ಎಂದು ತಿಳಿಸಿದರು.

ಅತ್ಯಂತ ಹಿಂದುಳಿದ ವರ್ಗಕ್ಕೆ ಸೇರಿದ ಬಡ ಕುಟುಂಬಕ್ಕೆ ಅನ್ಯಾಯವಾಗಿದೆ. ಕುಟುಂಬದ ಆಧಾರಸ್ತಂಭ ಕುಸಿದಿದೆ. ಹಾಗಾಗಿ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಳ್ಳಲು ನಾವು ಒತ್ತಾಯಿಸುತ್ತಿದ್ದೇವೆ. ದೆಹಲಿಯಲ್ಲಿ ಪ್ರಮುಖ ಸಭೆ ಇದ್ದರೂ ಇಲ್ಲಿ ಬಂದಿದ್ದೇನೆ. ಭಾಲ್ಕಿಗೆ ಹೋಗಿ ಬಂದಿದ್ದೇವೆ ಎಂದ ಅವರು, ರಾಜು ಕಪನೂರ್, ಖರ್ಗೆ ಕುಟುಂಬಕ್ಕೆ ಪರಮಾಪ್ತ. ಬಡ ಸಚಿನ್ ಕುಟುಂಬಕ್ಕೆ ನ್ಯಾಯ ದೊರಕಿಸಿಕೊಡುವ ಪ್ರಾಮಾಣಿಕ ಇಚ್ಛೆ ನಮ್ಮದು ಎಂದರು.

ರಾಜ್ಯದ ಕಾಂಗ್ರೆಸ್ ಸರಕಾರದ ಆಡಳಿತಾವಧಿಯಲ್ಲಿ ಸರಕಾರಿ ಪ್ರಾಯೋಜಿತ ಆತ್ಮಹತ್ಯೆಗಳು ಅಥವಾ ರಾಜ್ಯ ಸರಕಾರದ ಕುಮ್ಮಕ್ಕಿನ ಆತ್ಮಹತ್ಯೆ ಪ್ರಕರಣಗಳು ದಿನೇದಿನೇ ಹೆಚ್ಚಾಗುತ್ತಿದೆ. ಸರಕಾರ, ಸಚಿವರು, ಆಡಳಿತ ಪಕ್ಷದ ಶಾಸಕರ ಕುಮ್ಮಕ್ಕಿನಿಂದ ಹಿಂದೆಂದೂ ಇಂಥ ಸರಣಿ ಆತ್ಮಹತ್ಯೆ ಪ್ರಕರಣಗಳನ್ನು ಕೇಳಿರಲಿಲ್ಲ; ನೋಡಿರಲಿಲ್ಲ ಎಂದು ವಿಜಯೇಂದ್ರ ಅವರು ವಿಶ್ಲೇಷಿಸಿದರು.

ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾದ ಬಳಿಕ ರಾಜ್ಯ ಸರಕಾರವು ಆತ್ಮಹತ್ಯೆ ಭಾಗ್ಯವನ್ನು ಕರ್ನಾಟಕ ರಾಜ್ಯಕ್ಕೆ ದಯಪಾಲಿಸಿದೆ ಎಂದು ಅವರು ಆಕ್ಷೇಪಿಸಿದರು. ಭ್ರಷ್ಟಾಚಾರ ಬಯಲಾದುದರಿಂದ ವಾಲ್ಮೀಕಿ ನಿಗಮದ ಅಕೌಂಟೆಂಟ್ ಚಂದ್ರಶೇಖರ್ ಮೊದಲ ಆತ್ಮಹತ್ಯೆ ಮಾಡಿಕೊಂಡಿದ್ದು, ಬಿಜೆಪಿ ಹೋರಾಟದಿಂದ ಸಚಿವ ನಾಗೇಂದ್ರ ರಾಜೀನಾಮೆ ಕೊಟ್ಟಿದ್ದರು. ಬಳಿಕ ಲಕ್ಷ್ಮಿ ಹೆಬ್ಬಾಳ್ಕರ್ ಪಿ.ಎ. ಹೆಸರು ಬರೆದಿಟ್ಟು ರುದ್ರಣ್ಣ ಯಡವಣ್ಣವರ್ ಆತ್ಮಹತ್ಯೆ ಮಾಡಿಕೊಂಡಿದ್ದರು. ದಾವಣಗೆರೆಯಲ್ಲಿ ಗುತ್ತಿಗೆದಾರರೊಬ್ಬರು ಬಾಕಿ ಹಣ ಸಿಗದೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮಾಗಡಿಯಲ್ಲಿ ಕ್ರಷರ್ ಲಾರಿ ಮಾಲೀಕರೊಬ್ಬರು ಲಂಚ ಕೊಡಲಾಗದೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಯಾದಗಿರಿ ಪಿಎ□□□ಐ ಪರಶುರಾಮ, ಸ್ಥಳೀಯ ಶಾಸಕರ ಪುತ್ರನ ಒತ್ತಡ ತಡೆಯಲಾಗದೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ವಿವರಿಸಿದರು.

ಟೆಂಡರ್ ಮಾಡಿಕೊಡಲು ಶೇ 5 ದುಡ್ಡಿನ ಬೇಡಿಕೆ ಇಟ್ಟಿರುತ್ತಾನೆ. ಪ್ರಿಯಾಂಕ್ ಖರ್ಗೆ ನಾನು ಹೇಳಿದ ಮಾತನ್ನು ಮೀರುವುದಿಲ್ಲ; ಮಾನ್ಯ ಸಚಿವರ ಬೆಂಬಲ ಇದೆ ಎಂದು ರಾಜು ಕಪನೂರ್ ಹೇಳಿದ್ದಾಗಿ ಸಚಿನ್ ತನ್ನ ಡೆತ್ ನೋಟಿನಲ್ಲಿ ತಿಳಿಸಿದ್ದಾಗಿ ಮಾಹಿತಿ ಕೊಟ್ಟರು. ಪೊಲೀಸ್ ಠಾಣೆಗೆ ಹೋಗಿದ್ದ ಹೆಣ್ಮಕ್ಕಳ ಜೊತೆ ಕೆಟ್ಟದಾಗಿ ನಡೆದುಕೊಳ್ಳಲಾಯಿತು. ಅವರ ಮನವಿಗೆ ಸ್ಪಂದಿಸಲಿಲ್ಲ; ಪೊಲೀಸ್ ಅಧಿಕಾರಿಗಳ ಬೇಜವಾಬ್ದಾರಿ ನಡವಳಿಕೆ ಅಕ್ಷಮ್ಯ ಅಪರಾಧ ಎಂದು ಖಂಡಿಸಿದರು. ದೂರು ದಾಖಲಿಸಿ, ಮೊಬೈಲ್ ಟ್ರ್ಯಾಕ್ ಮಾಡಿದ್ದರೆ ನನ್ನ ತಮ್ಮ ಉಳಿಯುತ್ತಿದ್ದ ಎಂದು ಆ ಸೋದರಿಯರು ತಿಳಿಸಿದ್ದಾರೆ ಎಂದು ವಿವರಿಸಿದರು.

ಹೆಣ್ಮಕ್ಕಳಿಗೆ ಹೀಯಾಳಿಸಿ, ಅಪಮಾನ ಮಾಡಿ ನಿಂದಿಸಿದ್ದು ಅಕ್ಷಮ್ಯ ಅಪರಾಧ ಎಂದು ತಿಳಿಸಿದರು. ಇವರ ಕಾಲಹರಣದಿಂದ ಹೀಗಾಗಿದೆ. ಅಲ್ಲಿನ ಪೊಲೀಸ್ ಠಾಣೆಗಳು ಕಾಂಗ್ರೆಸ್ ಕಚೇರಿ ಥರ ಇವತ್ತು ದುರುಪಯೋಗ ಆಗುತ್ತಿವೆ. ರಿಪಬ್ಲಿಕ್ ಆಫ್ ಗುಲ್ಬರ್ಗದಲ್ಲಿ ಗುಲ್ಬರ್ಗ ಜಿಲ್ಲೆ ಯಾರ ಕಪಿಮುಷ್ಟಿಯಲ್ಲಿದೆ ಎಂದು ಬಸ್ ನಿಲ್ದಾಣದಲ್ಲಿ ಯಾರಿಗೆ ಕೇಳಿದರೂ ಹೇಳುತ್ತಾರೆ ಎಂದರು.

ಗುಲ್ಬರ್ಗ ಜಿಲ್ಲೆಯಲ್ಲಿ ಅನೇಕ ಆತ್ಮಹತ್ಯೆ, ಕೊಲೆ ಪ್ರಕರಣಗಳು ನಡೆದಿವೆ. ಅವನ್ನು ಮುಚ್ಚಿ ಹಾಕಿದ ಷಡ್ಯಂತ್ರ ಹಿಂದೆ ಆಗಿದೆ. ಕಾಂಗ್ರೆಸ್ಸಿನವರು ಹಗಲು ಅಂಥ ಕುಟುಂಬದವರನ್ನು ಭೇಟಿ ಮಾಡಿಲ್ಲ; ಬೆಳಗಿನ ಜಾವ 3 ಗಂಟೆಗೆ ಭೇಟಿ ಕೊಟ್ಟಿದ್ದಾರೆ. ಕುಟುಂಬಕ್ಕೆ ಸಮಾಧಾನ ಹೇಳಿ, ಸಮಾಧಾನಿತರಾಗದೆ ಇದ್ದರೆ ಬೆದರಿಕೆ ಹಾಕುತ್ತಾರೆ ಎಂದು ಆಕ್ಷೇಪಿಸಿದರು. ಗುಲ್ಬರ್ಗದ ಪೊಲೀಸ್ ಇಲಾಖೆ ಖರ್ಗೆ ಮತ್ತು ಕುಟುಂಬದ ಮುಷ್ಟಿಯೊಳಗಿದೆ ಎಂದು ಆರೋಪಿಸಿದರು.

ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಧಾನಪರಿಷತ್ ಸದಸ್ಯ ಎನ್. ರವಿಕುಮಾರ್, ಮುಖಂಡ ಜಗದೀಶ್ ಹಿರೇಮನಿ ಅವರು ಹಾಜರಿದ್ದರು.

## ಎಡವಟ್ಟು ಕಾಂಗ್ರೆಸ್ :

ತಡವಾಗಿ ಪರೀಕ್ಷೆ ಆರಂಭ ಹೀಗೆ ಸಾಲು ಸಾಲು ಎಡವಟ್ಟುಗಳಿಂದ ಕೂಡಿದ್ದ ಭಾನುವಾರದ ಮರುಪರೀಕ್ಷೆ ಮತ್ತೊಮ್ಮೆ ಅಭ್ಯರ್ಥಿಗಳ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ತಿಳಿಸಿದ್ದಾರೆ.

ಮರುಪರೀಕ್ಷೆಗೆ ನೋಂದಣಿ ಮಾಡಿಕೊಂಡ್ಡ 2.109 ಲಕ್ಷ ಅಭ್ಯರ್ಥಿಗಳ ಪೈಕಿ ಕೇವಲ 1.005 ಲಕ್ಷ ಅಭ್ಯರ್ಥಿಗಳು ಹಾಜರಾಗಿದ್ದು, ಆಗಸ್ಟ್ ನಲ್ಲಿ ನಡೆದ ಪರೀಕ್ಷೆಯಲ್ಲಿ ಶೇ.62.52ರಷ್ಟಿದ್ದ ಹಾಜರಾತಿ, ಮರುಪರೀಕ್ಷೆಯಲ್ಲಿ ಶೇ.47.7 ರಷ್ಟು ಕುಸಿದಿರುವುದು ಅಭ್ಯರ್ಥಿಗಳು ಸರ್ಕಾರ ಹಾಗೂ ಕೆಪಿಎಸ್ ಸಿ ಮೇಲೆ ನಂಬಿಕೆ ಕಳೆದುಕೊಂಡಿರುವುದಕ್ಕೆ ಸಾಕ್ಷಿಯಾಗಿದೆ ಎಂದಿದ್ದಾರೆ. ಸಿಎಂ ಸಿದ್ದರಾಮಯ್ಯ ನವರೇ, ತಮ್ಮ ಸರ್ಕಾರದ ರಾಜಕೀಯ ಹಸ್ತಕ್ಷೇಪ, ಭ್ರಷ್ಟಾಚಾರ, ಸ್ವಜನಪಕ್ಷಪಾತವೆ ಕೆಪಿಎಸ್ ಸಿ ಪರೀಕ್ಷೆಗಳಲ್ಲಿನ ಪದೇ ಪದೇ ಎಡವಟ್ಟಿಗೆ ಕಾರಣ. ಆಗಸ್ಟ್ ನಲ್ಲಿ ನಡೆದ ಪೂರ್ವಭಾವಿ ಪರೀಕ್ಷೆಗೆ 13.40 ಕೋಟಿ ರೂಪಾಯಿ ವೆಚ್ಚವಾಗಿತ್ತು. ಮರುಪರೀಕ್ಷೆಗೂ ಅಷ್ಟೇ ಮೊತ್ತ ಅಥವಾ ಅದಕ್ಕಿಂತ ಹೆಚ್ಚು ಖರ್ಚಾಗಿರುತ್ತದೆ. ಅದರಲ್ಲಿ ಸುಮಾರು 5.3 ಕೋಟಿ ರೂಪಾಯಿ ಪರೀಕ್ಷಾ ಗೋಪ್ಯತೆ ಕಾಪಾಡುವುದಕ್ಕೆ ವೆಚ್ಚ ಮಾಡಲಾಗಿದೆ ಎಂದು ಅಂದಾಜಿಸಲಾಗಿದೆ. ಇಷ್ಟಾದರೂ ಈ ಪರಿ ಎಡವಟ್ಟುಗಳು ಮರುಕಳಿಸಿದೆ ಎಂದರೆ ಇದಕ್ಕೆ ಯಾರು ಹೊಣೆ? ಎಂದು ಪ್ರಶ್ನಿಸಿದ್ದಾರೆ. ಆಗಸ್ಟ್ ನಲ್ಲಿ ನಡೆದ ಪೂರ್ವಭಾವಿ ಪರೀಕ್ಷೆಯ ಎಡವಟ್ಟುಗಳಿಗೆ, ಲೋಪ ದೋಷಗಳಿಗೆ ಕಾರಣರಾದ ಪರೀಕ್ಷಾ ನಿಯಂತ್ರಕರ ಮೇಲೆ ಯಾವುದೇ ಕ್ರಮ ಕೈಗೊಳ್ಳದೆ ಅದೇ ಹುದ್ದೆಯಲ್ಲಿ ಮುಂದುವರೆಸಿದ್ದೀರಿ. ಕಾರ್ಯದರ್ಶಿಗಳನ್ನು ಮಾತ್ರ ಎತ್ತಂಗಡಿ ಮಾಡಿದ್ದೀರಿ. ತಮ್ಮ ಸರ್ಕಾರದ ರಾಜಕೀಯ ಹಸ್ತಕ್ಷೇಪ, ಸ್ವಜನಪಕ್ಷಪಾತ, ಭ್ರಷ್ಟಾಚಾರವೇ ಪದೇ ಪದೇ ಈ ಎಡವಟ್ಟುಗಳು ಮರುಕಳಿಸುತ್ತಿರುವುದಕ್ಕೆ ಮೂಲ ಕಾರಣ. ಕೆಪಿಎಸ್ಸಿ ಸಂಸ್ಥೆ ಈ ರೀತಿ ನಂಬಿಕೆ ಕಳೆದುಕೊಂಡು, ಹೆಸರು ಕೆಡಿಸಿಕೊಂಡರೆ ಉತ್ತಮ ಅಭ್ಯರ್ಥಿಗಳನ್ನ, ಪ್ರತಿಭಾವಂತ ಯುವಕರನ್ನ ಸರ್ಕಾರಿ ಸೇವೆಯತ್ತ ಆಕರ್ಷಿಸುವುದು ಹೇಗೆ ಸಾಧ್ಯ? ಆಡಳಿತಕ್ಕೆ ಹೊಸ ರಕ್ತ ಬರದಿದ್ದರೆ ಆಡಳಿತವನ್ನು ಚುರುಕುಗೊಳಿಸುವುದು ಹೇಗೆ? ಯುವ ಜನಾಂಗ ಸಾರ್ವಜನಿಕ ಸೇವೆಗೆ ಬರದಿದ್ದರೆ ಆಡಳಿತಕ್ಕೆ ಹೊಸ ಚೈತನ್ಯ ತುಂಬಲು ಹೇಗೆ ಸಾಧ್ಯ? ಎಂದು ಕಿಡಿಕಾರಿದ್ದಾರೆ. ಸಿಎಂ ಸಿದ್ದರಾಮಯ್ಯನವರೇ, 16 ಸದಸ್ಯರನ್ನು ಒಳಗೊಂಡ ಕೆಪಿಎಸ್ ಸಿ ದೇಶದಲ್ಲೇ ದೊಡ್ಡ ಆಯೋಗವಾಗಿದೆ. ಅವರ ಸಂಬಳ ಸಾರಿಗೆಗೆಂದು ಸರ್ಕಾರ ಕೋಟ್ಯಂತರ ರೂಪಾಯಿ ತೆರಿಗೆ ಹಣ ವ್ಯಯ ಮಾಡುತ್ತದೆ. ಇಷ್ಟಾದರೂ ಒಂದು ಗೊಂದಲಮುಕ್ತ ಪೂರ್ವಭಾವಿ ಪರೀಕ್ಷೆ ನಡೆಸಲು ವಿಫಲವಾಗುತ್ತದೆ ಎಂದರೆ ಇದನ್ನ ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಲಕ್ಷಾಂತರ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಾಕಷ್ಟು ಹಣ, ಸಮಯ ಸಮರ್ಪಿಸುತ್ತಾರೆ. ಅನೇಕರು ತಮ್ಮ ಭವಿಷ್ಯವನ್ನೇ ಪಣಕ್ಕಿಟ್ಟು ತಯಾರಿ ನಡೆಸುತ್ತಾರೆ. ಅನೇಕ ಬಡ ಅಭ್ಯರ್ಥಿಗಳು ಸಾಲ-ಸೋಲ ಮಾಡಿ ಕೋಚಿಂಗ್ ಪಡೆಯುತ್ತಾರೆ. ಇಷ್ಟೆಲ್ಲಾ ತನು-ಮನ-ಧನ ಧಾರೆ ಎರೆದು ಪರೀಕ್ಷೆಗೆ ಕುಳಿತುಕೊಳ್ಳುವ ಅಭ್ಯರ್ಥಿಗಳಿಗೆ ಪದೇ ಪದೇ ಈ ರೀತಿ ಗೊಂದಲವಾಗುತ್ತಿದ್ದರೆ ಸರ್ಕಾರ ಅವರ ಭವಿಷ್ಯದ ಜೊತೆ ಚೆಲ್ಲಾಟವಾಡಿದಂತಾಗಿತ್ತದೆ. ಅಭ್ಯರ್ಥಿಗಳ ಹಿತದೃಷ್ಟಿಯಿಂದ ಇನ್ನಾದರೂ ಸರ್ಕಾರ ಎಚ್ಚೆತ್ತುಕೊಳ್ಳಲಿ, ಕೆಪಿಎಸ್ಸಿಯಲ್ಲಿ ಆಮೂಲಗ್ರ ಬದಲಾವಣೆ ತರುವ ಮೂಲಕ ಇಡೀ ನೇಮಕಾತಿ ವ್ಯವಸ್ಥೆಗೆ ಹೊಸ ಕಾಯಕಲ್ಪ ನೀಡಲಿ ಎಂದು ಆಗ್ರಹಿಸಿದ್ದಾರೆ.

## ಬಂದ್!

ಬಂದ್ ಇದ್ದರೂ ಕಂಪ್ಲಿಯಲ್ಲಿ ಎಂದಿನಂತೆ ದಿನಸಿ ಮಾರುಕಟ್ಟೆಗಳು, ಮತ್ತು ಆಟೋ, ಕ್ಯಾಬ್ ಮಾತ್ರ ಓಪನ್ ಇತ್ತು. ಇವುಗಳನ್ನು 10 ಗಂಟೆ ಬಳಿಕ ಬಂದ್ ಮಾಡಲಾಗಿದೆ

ಕನ್ನಡಪರ ಸಂಘಟನೆಗಳು, ವ್ಯಾಪಾರಿ ಸಂಘಟನೆಗಳು ಬಂದ್‌ಗೆ ಸಂಪೂರ್ಣ ಬೆಂಬಲ ನೀಡಿದ್ದಾರೆ. ಶಾಲೆ ಕಾಲೇಜುಗಳಿಗೆ ಯಾವ ಸಮಸ್ಯೆ ನೀಡದೇ ಅವುಗಳು ಎಂದಿನಂತೆ ನಡೆಯಲು ಅವಕಾಶ ಮಾಡಿದ್ದಾರೆ.

ಬಂದ್ ಹಿನ್ನೆಲೆ ಕಂಪ್ಲಿ ನಗರದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆಯಾಗಿ ನಗರದಾದ್ಯಂತ ಹಲವು ಕಡೆ ಅಲ್ಲಲ್ಲಿ ಪೊಲೀಸ್ ತುಕಡಿ ನಿಯೋಜನೆಗೊಂಡಿದೆ.

# ಬಿಎಸ್-6 ರಿಪೇರಿ ತರಬೇತಿ ಕಾರ್ಯಕ್ರಮ



ಚಿಕ್ಕಬಳ್ಳಾಪುರ: ಬಿಎಸ್-6 ದ್ವಿಚಕ್ರ ವಾಹನಗಳು ಹೊಸ ಹೊಸ ಟೆಕ್ನಾಲಜಿಯಿಂದ ತಯಾರಾಗಿದ್ದು, ಈ ವಾಹನಗಳಲ್ಲಿ ಸಮಸ್ಯೆಗಳು ಬಂದಾಗ ಅದನ್ನ ಸರಿಪಡಿಸುವ ವಿಧಾನಗಳನ್ನು ಮೆಕ್ಯಾನಿಕ್‌ಗಳಿಗೆ ತರಬೇತಿ ನೀಡಬೇಕಾಗಿದೆ. ಕರ್ನಾಟಕ ದ್ವಿಚಕ್ರ ವಾಹನ ಕಾರ್ಯಗಾರ ಮಾಲೀಕರ ಮತ್ತು ತಂತ್ರಜ್ಞರ ಸಂಘ ಬೆಂಗಳೂರು ವತಿಯಿಂದ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಃಖ6 ರಿಪೇರಿ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು ಇಂದಿಗೆ 14 ಜಿಲ್ಲೆಗಳಲ್ಲಿ ತರಬೇತಿ ಕಾರ್ಯಕ್ರಮ ನಡೆದಿದೆ ಎಂದು ಸಂಘದ ರಾಜ್ಯ ಕಾರ್ಯದರ್ಶಿ ಭಾಸ್ಕರ ನಾಯ್ಡು ತಿಳಿಸಿದರು.

ನಗರದ ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ದ್ವಿಚಕ್ರ ವಾಹನ ರಿಪೇರಿಗಾರರ ಸಂಘ ಹಾಗೂ ಆಟೋ ಮೊಬೈಲ್ ಓನರ್ಸ್ ವತಿಯಿಂದ ದ್ವಿಚಕ್ರ ವಾಹನ ರಿಪೇರಿಗಾರರಿಗೆ ಹಮ್ಮಿಕೊಂಡಿದ್ದ ಜಿಲ್ಲಾಮಟ್ಟದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಿಎಸ್-6 ವಾಹನ ಮಾಹಿತಿಯ ಕೊರತೆ ಇದ್ದಲ್ಲಿ ರಿಪೇರ್ ಮಾಡಲು ಸಾಧ್ಯವಿಲ್ಲ,ಯಾವುದೇ ಕಂಪೆನಿಯವರು ರಿಪೇರಿಗಾರರಿಗೆ ಬಿಎಸ್-6 ವಾಹನಗಳ ತರಬೇತಿ ನೀಡಲು ಮುಂದಾಗಿಲ್ಲ ಹಾಗಾಗಿ ನಮ್ಮ ಸಂಘದ ವತಿಯಿಂದಲೇ ನುರಿತ ತರಬೇತಿಗಾರರಿಂದ ರಿಪೇರಿಗಾರರಿಗೆ ತರಬೇತಿ ನೀಡಲಾಗುತ್ತಿದೆ.ಬಿಎಸ್-6 ವಾಹನಗಳ ರಿಪೇರ್ ಮಾಡುವ ವಿಧಾನಗಳನ್ನು ಕಲಿತು ಮಾರುಕಟ್ಟೆಯಲ್ಲಿ ದ್ವಿಚಕ್ರ ರಿಪೇರಿಗಾರರು ಕೂಡ ಬಿಎಸ್-6 ವಾಹನಗಳನ್ನು ರಿಪೇರಿ ಮಾಡಬಲ್ಲರು ಇದರಿಂದಾಗಿ ವಾಹನದಲ್ಲಿ ಕಾಣಿಸುವ ಸಣ್ಣಪುಟ್ಟ ಸಮಸ್ಯೆಗಳನ್ನು ಮಾರುಕಟ್ಟೆಯಲ್ಲಿನ ರಿಪೇರ್ ಶಾಪ್ ನಲ್ಲಿ ಸರಿಪಡಿಸಬಹುದು ಎಂದರು.

ಇನ್ನು ಬಿಎಸ್-6 ವಾಹನಗಳು ಮಾರುಕಟ್ಟೆಯಲ್ಲಿ ಬಂದ ನಂತರ ಆ ವಾಹನಗಳ ಮಾಹಿತಿ ಕೊರತೆಯಿಂದ ರಿಪೇರಿಗಾರರಿಗೆ ಕೆಲಸಗಳು ಇಲ್ಲದಂತಾಗಿ ಕಷ್ಟಕ್ಕೆ ಸಿಲುಕಿದ್ದರು ಬಹಳಷ್ಟು ದ್ವಿಚಕ್ರ ವಾಹನ ಮೆಕ್ಯಾನಿಕ್ ಶಾಪ್ ಬಂದ್ ಆಗಿದ್ದವು

ಹಾಗಾಗಿ ನಮ್ಮ ಸಂಘ ರಿಪೇರಿಗಾರರ ಅನುಕೂಲಕ್ಕಾಗಿ ಪ್ರತಿ ಜಿಲ್ಲೆಯಲ್ಲಿ ಬಿಎಸ್-6 ತರಬೇತಿ ನಡೆಸುತ್ತಿದ್ದು ಚಿಕ್ಕಬಳ್ಳಾಪುರದಲ್ಲಿ ನಡೆದ ತರಬೇತಿಯಲ್ಲಿ 200ಕ್ಕು ಹೆಚ್ಚು ರಿಪೇರಿಗಾರರು ಭಾಗವಹಿಸಿ ರಿಪೇರಿ ಬಗ್ಗೆ ಇಂಚಿಂಚಿನ ಮಾಹಿತಿ ಪಡೆದ್ದಿದ್ದಾರೆ. ಇಂತಹ ತರಬೇತಿ ಅವರಿಗೆ ಬಹಳಷ್ಟು ಅನುಕೂಲವಾಗಲಿದೆ ಎಂದರು.

ಇನ್ನು ವಾಹನಗಳ ಕೆಟ್ಟಿ ನಿಂತರೆ ಅದನ್ನ ಶೋ ರೂಂ ಗೆ ಸಾಗಿಸಲು ಹರಸಾಹಸ ಪಡಬೇಕಾಗುತ್ತೆ ಪ್ರತಿ ಸಮಸ್ಯೆಗೂ ಶೋ ರೂಂ ನತ್ತ ಮುಖ ಮಾಡಲು ಗ್ರಾಹಕರು ಕೂಡ ಇಚ್ಛಿಸಲ್ಲ ಇನ್ನು ಶೋ ರೂಂನ ದರದಲ್ಲಿ ದುಬಾರಿ ಎನ್ನುವ ಮಾತುಗಳು ಕೇಳಿ ಬರುತ್ತಿದೆ.ಮಾರುಕಟ್ಟೆಯಲ್ಲಿನ ಮೆಕ್ಯಾನಿಕ್ ಶಾಪ್ ನಲ್ಲಿ ಕೂಡ ಬಿಎಸ್-6 ರಿಪೇರಿ ಮಾಡಿದರೆ ಗ್ರಾಹಕರಿಗೆ ಬಹಳಷ್ಟು ಅನುಕೂಲವಾಗಲಿದೆ ಎಂದರು.

ಚಿಕ್ಕಬಳ್ಳಾಪುರ ದ್ವಿಚಕ್ರ ರಿಪೇರಿಗಾರರ ಸಂಘದ ಜಿಲ್ಲಾದ್ಯಕ್ಷ ಮುಬಾರಕ್ ಮಾತನಾಡಿ ಜಿಲ್ಲೆಯಲ್ಲಿ ಒಟ್ಟು 1280 ದ್ವಿಚಕ್ರ ವಾಹನ ರಿಪೇರಿಗಾರರಿದ್ದು ಮಾಹಿತಿ ಕೊರತೆಯಿಂದ ಬಿಎಸ್-6 ವಾಹನಗಳ ರಿಪೇರ್ ಮಾಡಲು ಸಮಸ್ಯೆಗಳು ಎದುರಿಸುತ್ತಿದ್ದು ತರಬೇತಿ ಅಗತ್ಯವಿತ್ತು ಹಾಗಾಗಿ ಇಂದು ತರಬೇತಿ ಆಯೋಜಿಸಿದ್ದು ರಿಪೇರಿಗಾರರು ಬಹಳಷ್ಟು ತರಬೇತಿ ಪಡೆದಿದ್ದಾರೆ ಹಂತ ಹಂತವಾಗಿ ಇನ್ನಷ್ಟು ತರಬೇತಿ ನೀಡುವ ಮೂಲಕ ರಿಪೇರಿಗಾರರ ಪರ ಸಂಘ ಸದಾ ಇರಬೇಕು ಎಂದರು.

ತಾಲ್ಲೂಕು ಅಧ್ಯಕ್ಷ ದೇವರಾಜ್ ಮಾತನಾಡಿ ಬಿಎಸ್-6 ವಾಹನಗಳ ರಿಪೇರಿ ಕೇವಲ ಶೋ ರೂಂ ನಲ್ಲಿ ಅಲ್ಲದೇ ಮಾರುಕಟ್ಟೆಯಲ್ಲಿನ ಶಾಪ್ ಗಳಲ್ಲಿ ಕೂಡ ರಿಪೇರಿ ಅವಕಾಶ ಮಾಡಿಕೊಡಬೇಕು ಇದಕ್ಕಾಗಿ ರಿಪೇರಿಗಾರರಿಗೆ ತರಬೇತಿ ನೀಡಲಾಗುತ್ತಿದೆ ಗ್ರಾಹಕರು ತಮ್ಮ ಬಿಎಸ್-6 ವಾಹನಗಳು ಸಣ್ಣಪುಟ್ಟ ಸಮಸ್ಯೆಗಳು ಮೆಕ್ಯಾನಿಕ್ ಶಾಪ್ ನಲ್ಲಿ ಬಗೆಹರಿಸಕೊಳ್ಳಬಹುದಾಗಿದೆ ಎಂದರು.ದ್ವಿ ಚಕ್ರ ರಿಪೇರಿಗಾರರಿಗೆ ತರಬೇತಿ ಕಾರ್ಯಗಾರ ಆಯೋಜಿಸಿದ್ದ ಸಂಘಕ್ಕೆ ಧನ್ಯವಾದಗಳು ತಿಳಿಸುತ್ತೇನೆ ಎಂದರು.

ತರಬೇತಿಗಾರರಾದ ಮಂಜುನಾಥ್, ಅಮರ್‌ನಾಥ್, ಶಾಕೀರ್ ಹುಸೇನ್, ನವೀನ್ ಕುಮಾರ್ ರಿಪೇರಿಗಾರರಿಗೆ ಇಂಚಿಂಚಿನ ಮಾಹಿತಿ ನೀಡಿದರು.ಈ ಸಂದರ್ಭದಲ್ಲಿ ಸಂಘದ ತಾಲ್ಲೂಕು ಉಪಾಧ್ಯಕ್ಷ ಸಿದ್ದೀಕ್, ಗೌರವಾದ್ಯಕ್ಷ ಮುನಿರಾಜು, ಕಾರ್ಯದರ್ಶಿ ಅಹಮದ್, ರವಿ, ಮೌಲಾ, ಇನಾಯತ್, ಸುಬ್ಬಣ್ಣ, ರಾಕೇಶ್, ಶ್ರೀದರ್, ಮೋಹನ್, ಅಜಯ್, ನರೇಂದ್ರ ಮತ್ತು ಇತರರು ಹಾಜರಿದ್ದರು.

# ರಾಷ್ಟ್ರೀಯ ಶೂಟಿಂಗ್ ಚಾಂಪಿಯನ್ ಶಿಪ್ ಸ್ಪರ್ಧೆ: ಆರು ಪದಕ ಗೆದ್ದ ಅಭಿಷೇಕ್ ಶೇಖರ್!



**ಬೆಂಗಳೂರು:** ಭೋಪಾಲ್‌ನಲ್ಲಿ ನಡೆದ 67ನೇ ರಾಷ್ಟ್ರೀಯ ಶೂಟಿಂಗ್ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ಆರು ಪದಕಗಳನ್ನು ಗೆದ್ದು ಇತಿಹಾಸ ನಿರ್ಮಿಸಿರುವ ಬೆಂಗಳೂರಿನ 18 ವರ್ಷದ ಅಭಿಷೇಕ್ ಶೇಖರ್ ಈ ಸಾಧನೆ ಮಾಡಿದ ಕರ್ನಾಟಕದ ಮೊದಲ ಶೂಟರ್ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದ್ದಾರೆ. ಮಧ್ಯಪ್ರದೇಶ ರಾಜ್ಯ ಶೂಟಿಂಗ್ ಅಕಾಡೆಮಿಯಲ್ಲಿ ನಡೆದ ಸ್ಪರ್ಧೆಯಲ್ಲಿ ಒಲಿಂಪಿಯನ್‌ಗಳು ಮತ್ತು ವಿಶ್ವಕಪ್ ಚಾಂಪಿಯನ್‌ಗಳು ಸೇರಿದಂತೆ ಭಾರತದ ಗಣ್ಯ ಶೂಟರ್‌ಗಳಿದ್ದರು. ಅಲ್ಲಿ ಅಸಾಧಾರಣ ಪ್ರದರ್ಶನ ನೀಡಿದ ಅಭಿಷೇಕ್, ಕಿರಿಯ ಪುರುಷರ 10-ಮೀಟರ್ ಏರ್ ರೈಫಲ್ ಫೈನಲ್‌ನಲ್ಲಿ 251.4 ಅಂಕ ಗಳಿಸುವುದರೊಂದಿಗೆ ಬೆಳ್ಳಿಯ ಜೊತೆಗೆ ಮೂರು ಚಿನ್ನದ ಪದಕಗಳನ್ನು ಗೆದ್ದರು. ಫೈನಲ್ ಪಂದ್ಯದಲ್ಲಿ ಎದುರಾಳಿಯಾಗಿದ್ದ 2024 ರ ಪ್ಯಾರಿಸ್ ಒಲಿಂಪಿಕ್ಸ್‌ನ ಸ್ಪರ್ಧಿ ರುದ್ರಾಂಕ್ಷ್ ಪಾಟೀಲ್ ಅವರನ್ನು ಸೋಲಿಸಿದರು. ತಿಲೋತ್ತಮಾ ಸೇನ್ ಅವರೊಂದಿಗೆ ಜೂನಿಯರ್ ಮಿಶ್ರ ತಂಡ ಸ್ಪರ್ಧೆಯಲ್ಲಿ ಬೆಳ್ಳಿ ಗೆದ್ದ ಅಭಿಷೇಕ್ ನಾಗರಿಕ ವಿಭಾಗದಲ್ಲಿ ಕಂಚಿನ ಪದಕವನ್ನು ಪಡೆದರು. 2019 ರಲ್ಲಿ ತನ್ನ ಪ್ರಯಾಣವನ್ನು ಪ್ರಾರಂಭಿಸಿದ ಅಭಿಷೇಕ್, 10 ಮೀಟರ್ ಶೂಟಿಂಗ್ ಸ್ಪರ್ಧೆಯಲ್ಲಿ ಎಲ್ಲಾ ವಿಭಾಗಗಳಲ್ಲಿ ಚಿನ್ನ ಗೆಲ್ಲುವ ಮೂಲಕ ತರಬೇತಿ ಪಡೆದ ಎರಡನೇ ತಿಂಗಳಲ್ಲಿ ಕರ್ನಾಟಕದ ಎಲ್ಲಾ ದಾಖಲೆಗಳನ್ನು ಮುರಿದ್ದರು. ಕೋವಿಡ್ ಸಾಂಕ್ರಾಮಿಕ ಸಮಯದಲ್ಲಿ ಎರಡು ವರ್ಷಗಳ ವಿರಾಮದ ನಂತರ ಶಿಕ್ಷಣದ ಮೇಲೆ ಕೇಂದ್ರೀಕರಿಸಿದ್ದ ಅವರು 2022 ರಲ್ಲಿ ಮತ್ತೆ ಶೂಟಿಂಗ್ ಗೆ ಮರಳಿದ್ದರು. ಅಂದಿನಿಂದ ರಾಜ್ಯ ಶೂಟಿಂಗ್ ಚಾಂಪಿಯನ್‌ಶಿಪ್ ಮತ್ತು ದಸರಾ ಕಪ್ ಸೇರಿದಂತೆ ಹಲವಾರು ಪುರಸ್ಕಾರಗಳನ್ನು ಗಳಿಸಿದ್ದಾರೆ. ಅವರಿಗೆ ಬೆಂಗಳೂರಿನ ಶೂಟಿಂಗ್ ಅಕಾಡೆಮಿಯಲ್ಲಿ ಹೆಸರಾಂತ ತರಬೇತುದಾರ ರಾಮಚಂದ್ರನ್ ಪುರುಷೋತ್ತಮನ್ ತರಬೇತಿ ನೀಡುತ್ತಿದ್ದಾರೆ. ಅವರಿಗೆ ಕರ್ನಾಟಕ ರಾಜ್ಯ ರೈಫಲ್ ಅಸೋಸಿಯೇಷನ್ ಬೆಂಬಲವಾಗಿ ನಿಂತಿದೆ. ಮುಂದಿನ ಒಲಿಂಪಿಕ್ಸ್‌ನಲ್ಲಿ ವೇದಿಕೆಯ ಮೇಲೆ ನಿಂತು ನನ್ನ ದೇಶವನ್ನು ಹೆಮ್ಮೆ ಪಡುವಂತೆ ಮಾಡುವುದು ನನ್ನ ಅಂತಿಮ ಕನಸು ಎಂದು ಅಭಿಷೇಕ್ ತಮ್ಮ ಭವಿಷ್ಯದ ಮಹತ್ವಾಕಾಂಕ್ಷೆಗಳನ್ನು ಹಂಚಿಕೊಂಡಿದ್ದಾರೆ.

# ಗೆಜೆಟೆಡ್ ಪ್ರೊಬೆಷನರಿ ನೇಮಕಾತಿ; ಅಹಿತಕರ ಘಟನೆಗಳಿಲ್ಲದೆ ಸುಗಮವಾಗಿ ಮುಗಿದ ಪೂರ್ವಭಾವಿ ಮರುಪರೀಕ್ಷೆ

**ಚಿಕ್ಕಬಳ್ಳಾಪುರ:** ಜಿಲ್ಲಾ ಕೇಂದ್ರವಾದ ಚಿಕ್ಕಬಳ್ಳಾಪುರದಲ್ಲಿ ಭಾನುವಾರ ನಡೆದ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ನೇಮಕಾತಿಯ ಪೂರ್ವಭಾವಿ ಮರು ಪರೀಕ್ಷೆಗೆ ಒಟ್ಟು 5720 ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದು ಈ ಪೈಕಿ ಬೆಳಗಿನ ಪಾಳಿಯಲ್ಲಿ ಪತ್ರಿಕೆ 1ಕ್ಕೆ 2934 ಪರೀಕ್ಷೆ ಬರೆದರೆ ಮದ್ಯಾಹ್ನ ನಡೆದ ಪತ್ರಿಕೆ 2ರಲ್ಲಿ 2889 ಮಂದಿ ಯಶಸ್ವಿಯಾಗಿ ಪರೀಕ್ಷೆ ಬರೆದು ತಮ್ಮ ಅದೃಷ್ಟವನ್ನು ಪರೀಕ್ಷೆಗೆ ಒಡ್ಡಿದ್ದಾರೆ. ಜಿಲ್ಲಾ ಕೇಂದ್ರವಾದ ಚಿಕ್ಕಬಳ್ಳಾಪುರ ನಗರದಲ್ಲಿ ಒಟ್ಟು 12 ಪರೀಕ್ಷಾ ಕೇಂದ್ರಗಳಲ್ಲಿ ಎ ಮತ್ತು ಬಿ ವೃಂದದ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ನೇಮಕಾತಿ ಮರುಪರೀಕ್ಷೆಗೆ ಜಿಲ್ಲಾಡಳಿತ ವ್ಯವಸ್ಥೆ ಮಾಡಿತ್ತು. ಒಟ್ಟು ನೊಂದಾ ಯಿತ 5720 ಅಭ್ಯರ್ಥಿಗಳ ಪೈಕಿ 10 ರಿಂದ 12 ಗಂಟೆಯವರೆಗೆ ನಡೆದ ಬೆಳಗಿನ ಪಾಳಿಯಲ್ಲಿ 2934 ಮಂದಿ ಹಾಜರಾಗಿ ಪರೀಕ್ಷೆ ಬರೆದರೆ,2786 ಮಂದಿ ಗೈರುಹಾಜರಾಗಿದ್ದರು. ಮದ್ಯಾಹ್ನ 2 ಗಂಟೆಯಿ0ದ 4 ಗಂಟೆಯವರೆಗೆ ನಡೆದ ಪತ್ರಿಕೆ 2 ರಲ್ಲಿ-2886 ಮಂದಿ ಹಾಜರಾಗಿ ಪರೀಕ್ಷೆ ಬರೆದರೆ,2831 ಮಂದಿ ಗೈರು ಹಾಜರಾಗುವ ಮೂಲಕ ಪರೀಕ್ಷೆಯಿಂದ ಹೊರಗುಳಿದರು.

ಕರ್ನಾಟಕ ಲೋಕಸೇವಾ ಆಯೋಗ ಎ ಮತ್ತು ಬಿ ವೃಂದದ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ನೇಮಕಾತಿಯ ಮರು ಪರೀಕ್ಷೆಯನ್ನು ಕಟ್ಟು ನಿಟ್ಟಾಗಿ ನಡೆಸಲು ನೀಡಿದ್ದ ನಿಯಮಗಳನುಸಾರ ಜಿಲ್ಲಾಡಳಿತ ಪರೀಕ್ಷೆಗೆ ಬೇಕಾದ ಸಕಲ ಸಿದ್ದತೆ ಮಾಡಿಕೊಂಡಿದ್ದು ಎಲ್ಲಾ ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತಳತೆಯಲ್ಲಿ 144 ಸೆಕ್ಷನ್ ಜಾರಿ ಮಾಡಲಾಗಿತ್ತು. ಅಭ್ಯರ್ಥಿಗಳಿಗೆ ಕುಡಿಯುವ ನೀರು,ಶೌಚಾಲಯ,

ಗಾಳಿ ಬೆಳಕು, ಮೇಜು ಕುರ್ಚಿ ಸೇರಿದಂತೆ ಸುಗಮವಾಗಿ ಪರೀಕ್ಷೆ ಬರೆಯಲು ಬೇಕಾದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಆಧ್ಯತೆ ನೀಡಲಾಗಿತ್ತು.ಪ್ರತಿ 2 ಪರೀಕ್ಷಾ ಕೇಂದ್ರಕ್ಕೆ ಒಬ್ಬೊಬ್ಬ ತಹಶೀಲ್ದಾರ್ ಅವರನ್ನು ರಿಟರ್ನಿಂಗ್ ಅಧಿಕಾರಿಯನ್ನಾಗಿ ನೇಮಿಸಿದ್ದು ಬಿಗಿ ಪೊಲೀಸ್ ಬಂದೋಬಸ್ತಿನಲ್ಲಿ ಪ್ರಶ್ನೆಪತ್ರಿಕೆ, ಉತ್ತರಪತ್ರಿಕೆಗಳನ್ನು ಆಯಾಯಾ ಪರೀಕ್ಷಾ ಕೇಂದ್ರಗಳಿಗೆ ನಿಗದಿತ ಸಮಯಕ್ಕೆ ರವಾನಿಸಿ ಎಲ್ಲೂ ಲೋಪವಾಗದಂತೆ ಜಿಲ್ಲಾಡಳಿತ ನೋಡಿಕೊಂಡಿತ್ತು.

ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಜಾಮರ್ ಅಳವಡಿಸಲಾಗಿದ್ದು,ಅಭ್ಯರ್ಥಿಗಳನ್ನು ಲೋಹಶೋಧಕ ಯಂತ್ರಗಳಿ0ದ ತಪಾಸಣೆ ಮಾಡಿಯೇ ಪರೀಕ್ಷಾ ಕೇಂದ್ರಕ್ಕೆ ಪ್ರವೇಶ ನೀಡಲಾಗಿತ್ತು.ವಿವಾಹಿತ ಹೆಣ್ಣು ಮಕ್ಕಳು ತಾಳಿ ಕಾಲುಂಗುರ ಹೊರತುಪಡಿಸಿ ಬೇರೆ ಯಾವುದೇ ಆಭರಣಗಳನ್ನು ಧರಿಸದಂತೆ ಆಯೋಗ ನಿರ್ದೇಶನ ನೀಡಿದ್ದರಿಂದ ಪರೀಕ್ಷೆ ಹಾಜರಾಗುವ ಅಭ್ಯರ್ಥಿಗಳು ಸ್ವಯಂಪ್ರೇರಣೆಯಿ0ದ ಇವುಗಳನ್ನು ತೆಗೆದು ಮನೆಯಲ್ಲಿಯೇ ಇಟ್ಟು ಬಂದಿದ್ದರು. ಪುರುಷ ಅಭ್ಯರ್ಥಿಗಳು ಅರ್ಧತೋಳಿನ ಶರ್ಟ್ ಧರಿಸಿ ಪರೀಕ್ಷೆ ಬರೆದರು. ಜಿಲ್ಲಾ ಕೇಂದ್ರದಲ್ಲಿ ನಡೆದ ಮರು ಪರೀಕ್ಷೆಯು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ, ಅಪರ ಜಿಲ್ಲಾಧಿಕಾರಿ ಡಾ.ಎನ್. ಭಾಸ್ಕರ್ ನೇತೃತ್ವದಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ಇಲ್ಲದಂತೆ ಅಚ್ಚುಕಟ್ಟಾಗಿ, ಪಾರದರ್ಶಕವಾಗಿ ಸುಗಮವಾಗಿ ನಡೆಯಿತು. ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಅಪರ ಜಿಲ್ಲಾಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲಿಸಿದರು. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕಣ್ಗಾವಲಿನಲ್ಲಿ ಅಭ್ಯರ್ಥಿಗಳು ಅಚ್ಚುಕಟ್ಟಾಗಿ ಪರೀಕ್ಷೆಯನ್ನು ಬರೆದರು.

ಒಟ್ಟಾರೆ ಲೋಕಸೇವಾ ಆಯೋಗದ ಸೂಚಿತ ನಿರ್ದೇಶನದಂತೆ ಜಿಲ್ಲಾಡಳಿತ ಅತ್ಯಂತ ಯಶಸ್ವಿಯಾಗಿ ಎ ಮತ್ತು ಬಿ ವೃಂದದ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ನೇಮಕಾತಿ ಮರುಪರೀಕ್ಷೆ ನಡೆಸಿ ಸೈ ಎನಿಸಿಕೊಂಡಿದ್ದಲ್ಲದೆ ಅಭ್ಯರ್ಥಿ ಗಳ ಮೆಚ್ಚುಗೆಗೆ ಪಾತ್ರವಾಗಿದೆ.

# ಹವ್ಯಕ ಭಾಷೆ ಅಭಿವೃದ್ಧಿಗೆ ಸಹಕಾರ: ಕೇಂದ್ರ ಸಚಿವ ಹೆಚ್‌ಡಿಕೆ



ಬೆಂಗಳೂರು: "ಅತ್ಯಂತ ವಿಶಿಷ್ಟವಾದ ಹವ್ಯಕ ಭಾಷೆ ಉಳಿಯಬೇಕು, ಈ ಭಾಷೆ ಉಳಿಯುವ ನಿಟ್ಟಿನಲ್ಲಿ ನಾನು ನಿಮ್ಮೊಂದಿಗೆ ಇರುತ್ತೇನೆ" ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹವ್ಯಕ ಸಮಾಜಕ್ಕೆ ಭರವಸೆ ನೀಡಿದ್ದಾರೆ.

ನಗರದಲ್ಲಿ ಸಮಾರೋಪಗೊಂಡ ತೃತೀಯ ವಿಶ್ವ ಹವ್ಯಕ ಸಮ್ಮೇಳನದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. "ಹವ್ಯಕ ಭಾಷೆ ಅಭಿವೃದ್ಧಿಗೆ ಪ್ರತ್ಯೇಕ ಅಕಾಡೆಮಿ, ವಿಶ್ವವಿದ್ಯಾಲಯ ಹಾಗೂ ಅಧ್ಯಯನ ಕೇಂದ್ರ ಸ್ಥಾಪನೆಯಾಗಬೇಕು. ಅಂತಹ ಎಲ್ಲಾ ಪ್ರಯತ್ನಗಳಿಗೆ ನನ್ನ ಬೆಂಬಲ ಇದೆ" ಎಂದರು. ಅಡಕೆ ಬೇಸಾಯದಲ್ಲಿ ಹೆಚ್ಚು ತೊಡಗಿಸಿಕೊಂಡಿರುವ ಹವ್ಯಕರು ಆತಂಕಪಡಬೇಕಿಲ್ಲ. ನಾನು ಸ್ವತಃ ಅಡಕೆ ಬೆಳೆಗಾರನಾಗಿದ್ದೇನೆ. ಅಡಕೆಯ ಬೆಳೆಗಾರರ ಸಂಕಷ್ಟಗಳು ಏನು ಎಂಬುದನ್ನು ನಾನು ಪ್ರತ್ಯಕ್ಷವಾಗಿ ಅನುಭವಿಸುತ್ತಿದ್ದೇನೆ. ಹೀಗಾಗಿ ಅಡಕೆ ಬೆಳೆಗಾರರ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಕೇಂದ್ರದ ನರೇಂದ್ರ ಮೋದಿ ಅವರ ಸರಕಾರ ಮಹತ್ವದ ಕ್ರಮಗಳನ್ನು ಕೈಗೊಂಡಿದೆ. ಅಡಕೆ ಸಂಶೋಧನೆಗೆ 10 ಹತ್ತು ಕೋಟಿಯನ್ನು ಕೇಂದ್ರ ಈಗಾಗಲೇ ನೀಡಿದೆ. ಅಡಕೆ ಬಗ್ಗೆ ಅಪಪ್ರಚಾರ ಅನಗತ್ಯ, ಅದನ್ನು ಹತ್ತಿಕ್ಕಲು ಕೇಂದ್ರವು ಅನೇಕ ಉಪಕ್ರಮಗಳನ್ನು ಕೈಗೊಂಡಿದೆ. ಅಡಕೆ ಬೆಳೆಗಾರರ ಸಮಸ್ಯೆಗಳನ್ನು ನಾನು ಸೇರಿದಂತೆ ಕೇಂದ್ರದಲ್ಲಿ ಕೆಲಸ ಮಾಡುತ್ತಿರುವ ರಾಜ್ಯದ ಎಲ್ಲ ಸಚಿವರು ಸೇರಿ ಬಗೆಹರಿಸುವ ಬಗ್ಗೆ ಪ್ರಾಮಾಣಿಕ ಮಾಡುತ್ತೇವೆ ಎಂದು ಹೇಳಿದರು.

ನಿಮ್ಮ ಸಾಧನೆ– ಬುದ್ಧಿವಂತಿಕೆ, ಕೊಡುಗೆ ಸಣ್ಣದಲ್ಲ; ಹವ್ಯಕ ಸಮುದಾಯ ಗಾತ್ರದಲ್ಲಿ ಸಣ್ಣದು ಇರಬಹುದು. ಆದರೆ, ನಿಮ್ಮ ಸಾಧನೆ, ಬುದ್ಧಿವಂತಿಕೆ, ಸಮಾಜಕ್ಕೆ ಕೊಟ್ಟಿರುವ ಕೊಡುಗೆ ಸಣ್ಣದಲ್ಲ. ಪ್ರತಿಯೊಂದು ಕ್ಷೇತ್ರದಲ್ಲಿಯೂ ಛಾಪು ಗಣನೀಯವಾಗಿದೆ. ಸಾಹಿತ್ಯ, ಸಂಗೀತ, ಕಲೆ, ಮಾಧ್ಯಮ ಸೇರಿ ಅನೇಕ ಕ್ಷೇತ್ರಗಳಲ್ಲಿ ನಿಮ್ಮ ಸಮುದಾಯ ಅಚ್ಚಳಿಯದ ಛಾಪು ಮೂಡಿಸಿದೆ ಎಂದು ಕುಮಾರಸ್ವಾಮಿ ಶ್ಲಾಘಿಸಿದರು. ನಮ್ಮ ಹಳ್ಳಿಯ ಗ್ರಾಮೀಣ ಸೊಗಡು ಮರೆಯುತ್ತಿದ್ದೇವೆ. ಹಳ್ಳಿಗಳು ವೃದ್ಧಾಶ್ರಮಗಳಾಗುತ್ತಿವೆ. ಹಳ್ಳಿಗಳ ಅಸ್ತಿತ್ವ ನಶಿಸಿ ಹೋಗುತ್ತಿದೆ. ಅದರ ಬಗ್ಗೆ ನಾವು ಆಲೋಚನೆ ಮಾಡಬೇಕಿದೆ. ಹಳ್ಳಿಗಳಲ್ಲಿ ಅನೇಕ ಸಮಸ್ಯೆಗಳು ಹಾಗೆಯೇ ಇವೆ, ಮೂಲಸೌಕರ್ಯಗಳು ಇಲ್ಲ, ಇದನ್ನು ಸುಧಾರಣೆ ಮಾಡುವ ಅಗತ್ಯ ಇದೆ. ನಮ್ಮ ಪೂರ್ವಜರು ಬಹಳ ಶಿಸ್ತಿನಿಂದ ಬದುಕುತ್ತಿದ್ದರು, ಆದರೆ, ಇವತ್ತು ಅಂತಹ ಪರಿಸ್ಥಿತಿ ಇಲ್ಲ. ಹಳ್ಳಿಗಳಲ್ಲಿ ಮಾತ್ರವಲ್ಲ, ನಗರ ಪ್ರದೇಶಗಳಲ್ಲಿ ಅಂತಹ ಶಿಸ್ತು ಬರಬೇಕಿದೆ. ಇಲ್ಲವಾದರೆ ಅಭಿವೃದ್ಧಿ ಸಾಧ್ಯವಿಲ್ಲ" ಎಂದು ಪ್ರತಿಪಾದಿಸಿದರು.

ದಿವಂಗತ ರಾಮಕೃಷ್ಣ ಹೆಗಡೆ ಅವರ ಸಹೋದರ ಗಣೇಶ ಹೆಗಡೆ ಅವರ ಮನೆಗೆ ಒಮ್ಮೆ ಭೇಟಿ ನೀಡಿದ್ದೆ. ಅವರ ಧರ್ಮಪತ್ನಿ ಅವರು ನನಗೆ ಮಾತೃ ಸಮಾನರು. ನಾನು ಹೋದ ಕ್ಷಣ ಅವರೆಷ್ಟು ಸಂತೋಷಪಟ್ಟರು ಎಂದರೆ, ಬಹಳ ದಿನಗಳಿಂದ ತಪ್ಪಿಹೋದ ಮಗ ಮನೆಗೆ ಬಂದ ಎನ್ನುವಷ್ಟು ವಾತ್ಸಲ್ಯ ತೋರಿದರು. ನನಗೆ ಈಗಲೂ ಆ ಸಂದರ್ಭ ಕಣ್ಣಿಗೆ ಕಟ್ಟಿದಂತಿದೆ ಎಂದು ಸ್ಮರಿಸಿಕೊಂಡರು.

ಸಮಾರೋಪ ಸಮಾರಂಭದಲ್ಲಿ ರಾಮಚಂದ್ರಾಪುರ ಮಠದ ಶ್ರೀ ರಾಘವೇಶ್ವರ ಭಾರತೀ ಸ್ವಾಮೀಜಿಗಳು, ಹರಿಹರದ ಪಂಚಮಸಾಲಿ ಮಠದ ಶ್ರೀ ವಚನಾನಂದ ಸ್ವಾಮೀಜಿಗಳು, ಕೂಡಲಿ ಶೃಂಗೇರಿ ಮಹಾ ಸಂಸ್ಥಾನದ ಶ್ರೀ ಅಭಿನವ ಶಂಕರ ಭಾರತೀ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಿದ್ದರು. ಕಂಚಿ ಕಾಮಕೋಟಿ ಪೀಠದ ಶ್ರೀ ವಿಜಯೇಂದ್ರ ಸರಸ್ವತಿ ಸ್ವಾಮೀಜಿಗಳು ಆನ್?ಲೈನ್? ವೇದಿಕೆಯ ಮೂಲಕ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಸಮ್ಮೇಳನದ ಗೌರವಾಧ್ಯಕ್ಷ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಹೊರನಾಡು ಕ್ಷೇತ್ರದ ಧರ್ಮಾಧಿಕಾರಿ ಭೀಮೇಶ್ವರ ಜೋಷಿ, ಮಾಜಿ ಸಚಿವ ಸಿ.ಟಿ. ರವಿ, ವಿಶ್ವವಾಣಿ ದಿನಪತ್ರಿಕೆಯ ಸಂಪಾದಕ ವಿಶ್ವೇಶ್ವರ ಭಟ್, ಕನ್ನಡಪ್ರಭ ಪತ್ರಿಕೆಯ ಸಮೂಹ ಸಂಪಾದಕ ರವಿ ಹೆಗಡೆ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ ಮಂಜುನಾಥ ಗೌಡ ಮತ್ತು ಹವ್ಯಕ ಮಹಾಸಭಾ ಅಧ್ಯಕ್ಷ ಗಿರಿಧರ ಕಜೆ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

## ನಾನು ಆರೋಗ್ಯವಾಗಿರುವೆ ಡಾ.ಶಾಮನೂರು ಶಿವಶಂಕರಪ್ಪ




ದಾವಣಗೆರೆ: ನಾನು ಆರೋಗ್ಯವಾಗಿದ್ದೇನೆ, ಯಾರೂ ಆತಂಕಪಡುವ ಅವಶ್ಯಕತೆ ಇಲ್ಲ ಎಂದು ದಾವಣಗೆರೆ ದಕ್ಷಿಣ ಮತ ಕ್ಷೇತ್ರದ ಹಿರಿಯ ಕಾಂಗ್ರೆಸ್? ಶಾಸಕ, ಡಾ.ಶಾಮನೂರು ಶಿವಶಂಕರಪ್ಪ ವಿಡಿಯೋ ಮೂಲಕ ಸಂದೇಶ ರವಾನಿಸಿದ್ದಾರೆ.

ಆರೋಗ್ಯ ತಪಾಸಣೆಗೆ ಎಂದು ಬೆಂಗಳೂರಿಗೆ ತೆರಳಿದ್ದ ಶಾಮನೂರು ಶಿವಶಂಕರಪ್ಪ ಅವರು ಮತದಾರರು, ಅಭಿಮಾನಿಗಳಿಗೆ ವಿಡಿಯೋ ಮೂಲಕ ತಮ್ಮ ಆರೋಗ್ಯದ ಬಗ್ಗೆ ಮಾಹಿತಿ ನೀಡಿದ್ದಾರೆ. ಅಲ್ಲದೇ ನಾಡಿನ ಜನತೆಗೆ 2025ನೇ ವರ್ಷದ ಶುಭಾಶಯಗಳನ್ನು ಕೋರಿದ್ದಾರೆ.

ವಿಡಿಯೊದಲ್ಲಿ ಮಾತನಾಡಿರುವ ಅವರು, ಮತದಾರರ ಆಶೀರ್ವಾದದಿಂದ ನಾನು ಆರೋಗ್ಯವಾಗಿದ್ದೇವೆ. ದಾವಣಗೆರೆಗೆ ಆಗಮಿಸಲಿದ್ದೇನೆ. ಮತದಾರರು, ಅಭಿಮಾನಿಗಳು ಭಯಪಡುವ ಅಗತ್ಯ ಇಲ್ಲ. ಶೀಘ್ರದಲ್ಲೆ ನಿಮ್ಮೊಂದಿಗೆ ಹೊಸ ವರ್ಷವನ್ನು ಆಚರಿಸುವೆ ಎಂಬ ಸಂದೇಶ ರವಾನಿಸಿದ್ದಾರೆ.

ಶಾಮನೂರು ಶಿವಶಂಕರಪ್ಪ ಅವರ ಶ್ವಾಸಕೋಶದಲ್ಲಿ ಚಿಕ್ಕ–ಪುಟ್ಟ ಆರೋಗ್ಯ ಸಮಸ್ಯೆ ಆದ ಕಾರಣ ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ತೆರಳಿ ತಪಾಸಣೆ ಮಾಡಿಸಿಕೊಂಡು ಮನೆಗೆ ಮರಳಿದ್ದಾರೆ ಎಂದು ಶಾಸಕರ ಕಚೇರಿ ಮೂಲಗಳು ತಿಳಿಸಿವೆ.

# ಜೋಗ ಜಲಪಾತ ವೀಕ್ಷಣೆ ನಿರ್ಬಂಧ ತೆರವು



**ಶಿವಮೊಗ್ಗ:** ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಹಮ್ಮಿಕೊಂಡಿರುವ ಕಾರಣ ಜನವರಿ 1 ರಿಂದ ಮಾರ್ಚ್ 15 ರವರೆಗೆ ಜೋಗ ಜಲಪಾತಕ್ಕೆ ಪ್ರವಾಸಿಗರ ಪ್ರವೇಶವನ್ನು ನಿಷೇಧಿಸಿ ಕೆಲವು ದಿನಗಳ ಹಿಂದೆ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದರು. ಆದರೆ, ಇದೀಗ ಹೊಸ ವರ್ಷಾಚರಣೆ ಪ್ರಯುಕ್ತ ಜಿಲ್ಲಾಡಳಿತವು ಪ್ರವಾಸಿಗರಿಗೆ ಸಿಹಿ ಸುದ್ದಿ ನೀಡಿದೆ. ಜೋಗ ನಿರ್ವಹಣಾ ಪ್ರಾಧಿಕಾರದ ಮುಖ್ಯ ದ್ವಾರವನ್ನು ಹೊರತುಪಡಿಸಿ ಉಳಿದೆಲ್ಲ ಪರ್ಯಾಯ ಸ್ಥಳಗಳಿಂದ ಪ್ರವಾಸಿಗರಿಗೆ ಜೋಗ ಜಲಪಾತ ವೀಕ್ಷಿಸಲು ಜಿಲ್ಲಾಡಳಿತ ಅವಕಾಶ ಕಲ್ಪಿಸಿದೆ. ಪ್ರವಾಸಿಗರು ವ್ಯೂ ಪಾಯಿಂಟ್, ಯಾತ್ರಿ ನಿವಾಸ, ರಾಣಿ ಫಾಲ್ಸ್, ಮುಂಬೈ ಬಂಗಲೆ ಮೊದಲಾದೆಡೆಯಿಂದ ಜಲಪಾತವನ್ನು ವೀಕ್ಷಿಸಬಹುದು ಎಂದು ಜಿಲ್ಲಾಡಳಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಪ್ರತಿ ವರ್ಷ ಡಿಸೆಂಬರ್ ಕೊನೆಯ ವಾರದಲ್ಲಿ ಜೋಗಕ್ಕೆ ಪ್ರವಾಸಿಗರ ಸಂಖ್ಯೆ ಹೆಚ್ಚಾಗುತ್ತಿತ್ತು. ಆದರೆ, ಈ ವರ್ಷ ಪ್ರವೇಶ ನಿಷೇಧಿಸುವ ಮುನ್ನವೇ ಪ್ರವಾಸಿಗರ ಸಂಖ್ಯೆ ಕಡಿಮೆಯಾಗಿತ್ತು. ಜೋಗ ವೀಕ್ಷಣೆಯ ಸ್ಥಳಗಳಲ್ಲಿ ಬ್ಯಾರಿಕೇಡ್‌ಗಳನ್ನು ಹಾಕಲಾಗಿದ್ದು, ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ಪ್ರವಾಸೋದ್ಯಮ ಇಲಾಖೆ ಜಂಟಿ ಕಾರ್ಯದರ್ಶಿ ಧರ್ಮಪ್ಪ ತಿಳಿಸಿದ್ದಾರೆ.

ಭಾರತದ ಎರಡನೇ ಅತಿ ಎತ್ತರದ ಜಲಪಾತ ಎಂದೇ ಖ್ಯಾತಿವೆತ್ತ ಜೋಗ ಜಲಪಾತ ಕರ್ನಾಟಕ ರಾಜಧಾನಿ ಬೆಂಗಳೂರಿನಿಂದ ಸುಮಾರು 400 ಕಿ.ಮೀ ದೂರದಲ್ಲಿರುವ ಶಿವಮೊಗ್ಗ ಜಿಲ್ಲೆಯಲ್ಲಿದೆ. 253 ಮೀಟರ್ ಆಳಕ್ಕೆ ಧುಮ್ಮಿಕ್ಕುವ ಈ ಜಲಪಾತನವನ್ನು ನೋಡಲು ಕರ್ನಾಟಕದಲ್ಲಿ ಅತಿ ಹೆಚ್ಚು ಪ್ರವಾಸಿಗರು ಭೇಟಿ ನೀಡುತ್ತಾರೆ.

ಜೋಗ ಜಲಪಾತದಿಂದ 20 ಕಿ.ಮೀ ದೂರದಲ್ಲಿರುವ ತಾಳಗುಪ್ಪದಲ್ಲಿ ರೈಲು ನಿಲ್ದಾಣ ಇದೆ. ಬೆಂಗಳೂರಿನಿಂದ ಪ್ರತಿದಿನ ರೈಲುಗಳ ಸಂಚಾರ ಇದೆ. ಸಾಗರ (40 ಕಿ.ಮೀ) ಮತ್ತು ಶಿವಮೊಗ್ಗ (105 ಕಿ.ಮೀ) ಹತ್ತಿರದ ಪಟ್ಟಣಗಳು. ಜೋಗ ಜಲಪಾತ ಉತ್ತಮ ರಸ್ತೆ ಮತ್ತು ಸಾರ್ವಜನಿಕ ಸಾರಿಗೆ ಸಂಪರ್ಕ ಕೂಡ ಹೊಂದಿವೆ. ಜೋಗ ಜಲಪಾತ ವೀಕ್ಷಣೆ ಜಾಕ್ಕೆ ತೆರಳಲು ಶಿವಮೊಗ್ಗ ಅಥವಾ ಸಾಗರ ಪಟ್ಟಣಗಳಿಂದ ಟ್ಯಾಕ್ಸಿಗಳನ್ನು ಪಡೆಯಬಹುದು. ಶಿವಮೊಗ್ಗದಲ್ಲಿ ವಿಮಾನ ನಿಲ್ದಾಣ ಕೂಡ ಇದ್ದು, ಬೇರೆ ರಾಜ್ಯಗಳ ಪ್ರವಾಸಿಗರು ಈನ ಸೌಕರ್ಯವನ್ನೂ ಬಳಸಿಕೊಳ್ಳಬಹುದಾಗಿದೆ.

## ಉತ್ತರ ಕರ್ನಾಟಕದಲ್ಲಿ ಸಂಭ್ರಮದ ಎಳ್ಳು ಅಮಾವಾಸ್ಯೆ



**ಕೊಪ್ಪಳ:** ಉತ್ತರ ಕರ್ನಾಟಕದಲ್ಲಿ ಎಳ್ಳು ಅಮಾವಾಸ್ಯೆ ದಿನ ಇಂದು ರೈತರಲ್ಲಿ ವಿಶೇ? ಸಂತಸ ಮನೆಮಾಡಿರುತ್ತದೆ. ಪ್ರತೀ ವ?ದ ಎಳ್ಳು ಅಮಾವಾಸ್ಯೆ ದಿನ ರೈತಾಪಿ ವರ್ಗ ಕುಟುಂಬ ಸಮೇತ ಎತ್ತು, ಬಂಡಿ, ಟ್ರಾಕ್ಟರ್ ಗಳಲ್ಲಿ ಹೊಲಕ್ಕೆ ಹೋಗಿ ಭೂಮಿ ತಾಯಿಗೆ, ಎಳ್ಳು, ಶೇಂಗಾ ಹೋಳಿಗೆಯ ಸಿಹಿ ಪದಾರ್ಥಗಳ ನೈವೇದ್ಯ ಅರ್ಪಿಸಿ ಭೂಮಿ ತಾಯಿಗೆ ಪೂಜೆ ಸಲ್ಲಿಸುವ ಮೂಲಕ ವಿಶಿ?ವಾಗಿ, ವಿಶೇ?ವಾಗಿ ಎಳ್ಳು ಅಮಾವಾಸ್ಯ ಹಬ್ಬ ಆಚರಣೆ ಮಾಡುತ್ತಾರೆ.

ರೈತರು ತಮ್ಮ ಜಮೀನಿನಲ್ಲಿ ಬೆಳೆದ ಕಡಲೆ, ಕುಸಿಬಿ, ಜೋಳ, ಮೆಣಸಿನಕಾಯಿ, ಇತರ ಬೆಳೆಗಳನ್ನು ಹಿಂಗಾರು ಬೆಳೆಯಾಗಿ ಬೆಳೆಯುತ್ತಾರೆ. ಎಳ್ಳು ಅಮಾವಾಸ್ಯೆ ಹೊತ್ತಿಗೆ ಫಸಲು ಸಮೃದ್ಧವಾಗಿ ಬೆಳೆದಿರುತ್ತವೆ, ಎಲ್ಲಾ ಕಡೆಗಳಲ್ಲೂ ಸುತ್ತಲೂ ಹಚ್ಚ ಹಸಿರು ಪೈರು ಕಂಗೊಳಿಸುತ್ತವೆ. ಈ ಸಂಭ್ರಮದ ಸಂಕೇತವಾಗಿ ಕುಟುಂಬ ಸಮೇತ ರೈತರು ತಮ್ಮ ತಮ್ಮ ಹೊಲದಲ್ಲಿ ಬೆಳೆದ ಬೆಳೆಗಳಿಗೆ ಪೂಜೆ ಸಲ್ಲಿಸಿ ಸಹಭೋಜನ ಮಾಡುತ್ತಾರೆ.

ಉತ್ತರ ಕರ್ನಾಟಕದ ಬಾಗಗಳಲ್ಲಿ ಸುಮಾರು ವ?ಗಳಿಂದಲೂ ರೈತ ಸಂಕುಲ ಆಚರಿಸಿಕೊಂಡು ಬರುತ್ತಿರುವ ವಿಶೇ? ಹಬ್ಬವಾಗಿದೆ. ವಿಶೇ?ವಾಗಿ ಎರೇ ಭಾಗದ ರೈತರು ಈ ಸಮಯದಲ್ಲಿ ಅತೀ ಹೆಚ್ಚು ಸಮಯ ಹೊಲದಲ್ಲಿಯೇ ಕಾಲ ಕಳೆಯುತ್ತಾರೆ. ಎಳ್ಳು ಅಮಾವಾಸ್ಯೆ ದಿನ ಹೊಲದಲ್ಲಿ ಚರಗ ಚೆಲ್ಲಿ ಪೂಜೆ ಸಲ್ಲಿಸಿ ಭೂಮಿ ತಾಯಿಗೆ ನಮಿಸುವುದು ಹಲವಾರು ವ?ಗಳಿಂದಲೂ ನಡೆದುಕೊಂಡು ಬಂದ ಆಚರಣೆಯಾಗಿದೆ.

ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಈ ಎಳ್ಳು ಅಮಾವಾಸ್ಯೆ ಹಬ್ಬದ ಸಂಭ್ರಮ ಮನೆ ಮಾಡಿರುತ್ತದೆ. ಈ ವ? ಉತ್ತಮ ಮಳೆಯಾಗಿದ್ದು ಹಿಂಗಾರು ಬೆಲೆಯೂ ಕೂಡಾ ಸಮೃದ್ಧವಾಗಿ ಬೆಳೆದಿದ್ದು ರೈತರ ಸಂತಸವನ್ನು ಇಮ್ಮಡಿಗೊಳಿಸಿದೆ.

# ವೀರಶೈವ ಧರ್ಮದ ಮೂಲ ಸಿದ್ಧಾಂತ ಅರಿತರೆ ಧರ್ಮದಲ್ಲಿ ಸವಾಲುಗಳನ್ನು ಎದುರಿಸಬಹುದು: ರಂಭಾಪುರಿ ಶ್ರೀ




**ತುಮಕೂರು:** ಜಗದ್ಗುರು ಶ್ರೀ ರೇಣುಕಾಚಾರ್ಯರು ನಡೆಸಿಕೊಂಡು ಬಂದ ವೀರಶೈವ ಪರಂಪರೆಯಲ್ಲಿ ವೀರಶೈವ ಧರ್ಮದ ಮೂಲ ಸಿದ್ಧಾಂತವನ್ನು ಬಹಳಷ್ಟು ಜನ ತಿಳಿದುಕೊಂಡಿಲ್ಲ. ತಿಳಿದುಕೊಳ್ಳುವ ಪ್ರಾಮಾಣಿಕ ಪ್ರಯತ್ನವೂ ಮಾಡುತ್ತಿಲ್ಲ. ಹೀಗಾಗಿ ಧರ್ಮದಲ್ಲಿ ಅನೇಕ ಸಮಸ್ಯೆ ಮತ್ತು ಸವಾಲುಗಳನ್ನು ಕಾಣುವಂತಾಗಿದೆ ಎಂದು ಚಿಕ್ಕಮಗಳೂರು ಜಿಲ್ಲೆ ಬಾಳೆಹೊನ್ನೂರಿನ ರಂಭಾಪುರಿ ಪೀಠದ ಶ್ರೀ ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಸ್ವಾಮೀಜಿ ತಿಳಿಸಿದರು.

ತುಮಕೂರು ನಗರದಲ್ಲಿ ನಾಲ್ಕು ದಿನಗಳ ಕಾಲ ನಡೆದ ಧನುರ್ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಜನಜಾಗೃತಿ ಧರ್ಮ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇರುವಂತಹ ಸತ್ಯವನ್ನು ಗ್ರಂಥಗಳಿಂದ ತಿಳಿದುಕೊಳ್ಳಲು ಸಾಧ್ಯವಿದೆ. ಆದರೆ ಕೆಲವರು ಅದನ್ನು ತಿಳಿದುಕೊಳ್ಳದಿರುವುದರಿಂದ ಕೆಲವೊಂದು ಅವಾಂತರಗಳು ಮತ್ತು ಆತಂಕಗಳಿಗೆ ಕಾರಣವಾಗಿದೆ ಎಂದು ತಿಳಿಸಿದರು.

ವೀರಶೈವ ಧರ್ಮದ ಇತಿಹಾಸ ಮತ್ತು ಬೆಳೆದು ಬಂದ ಪರಂಪರೆ ಅತ್ಯಂತ ಪ್ರಾಚೀನ ಎನ್ನುವುದರಲ್ಲಿ ಎರಡು ಮಾತಿಲ್ಲ. ಪರಮಾಚಾರ್ಯರು ಹಾಕಿದ ಧರ್ಮ ಸಿದ್ಧಾಂತದ ತಳಹದಿಯ ಮೇಲೆ 12ನೇ ಶತಮಾನದ ಬಸವಾದಿ ಶರಣರು ಅದರಂತೆ ನಡೆದು ನುಡಿದು ಸಮಾಜದ ಶಕ್ತಿಯನ್ನು ಮತ್ತಷ್ಟು ಸಂವರ್ಧನೆಗೊಳಿಸಿರುವಂತಹುದನ್ನು ಜನ ತಿಳಿದುಕೊಳ್ಳಬೇಕು. ಬಸವಾದಿ ಶಿವಶರಣರಿಗಿಂತ ಪೂರ್ವದಲ್ಲಿಯೇ ವೀರಶೈವ ಧರ್ಮ ಅಸ್ತಿತ್ವದಲ್ಲಿತ್ತು. ಜಗದ್ಗುರು ಪಂಚಾಚಾರ್ಯರ ಪರಂಪರೆ, ಪವಿತ್ರವಾದ ಗುರು ಪರಂಪರೆ, ಈ ವೀರಶೈವ ಧರ್ಮ ಪರಂಪರೆ ಮತ್ತು ತತ್ವ ಸಿದ್ಧಾಂತಗಳನ್ನು ಪ್ರತಿಷ್ಠಾಪಿಸಿ ಜನರನ್ನು ಸನ್ಮಾರ್ಗದ ಕಡೆಗೆ ಕರೆತಂದಿತು ಎಂಬುದಕ್ಕೆ ಇತಿಹಾಸದಲ್ಲಿನ ಅನೇಕ ಸಂಗತಿಗಳು ಇವೆ ಎಂದರು.

ಸಾನಿಧ್ಯ ವಹಿಸಿದ್ದ ಸಿದ್ದರಬೆಟ್ಟದ ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ತಾನು ಅಭಿವೃದ್ಧಿ ಹೊಂದಬೇಕು ಎಂದು ಅತಿಯಾದ ಆಸೆಯೊಂದಿಗೆ ಮನುಷ್ಯ ಕೆಲ ವಾಮ ಮಾರ್ಗಗಳನ್ನು ಹಿಡಿಯುತ್ತಾನೆ. ಈ ವೇಳೆ, ಆತನ ಮನಸ್ಸಿನಲ್ಲಿ ಕಲ್ಮಷ ಸೃಷ್ಟಿಯಾಗುತ್ತದೆ. ಇಂತಹ ಸಂದರ್ಭದಲ್ಲಿ ಧರ್ಮ ಮಾರ್ಗದಲ್ಲಿ ಸಾಗಿದರೆ ಅಂತಹ ಕಲ್ಮಷಗಳನ್ನು ತೊಡೆದು ಹಾಕಬಹುದಾಗಿದೆ. ಆಗ ಮನಸ್ಸು ಶುದ್ಧವಾಗಿರುತ್ತದೆ. ಹೀಗಾಗಿ ಇಂತಹ ಧನುರ್ಮಾಸ ಇಷ್ಟಲಿಂಗ ಮಹಾಪೂಜೆಯ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಕ್ತರು ಪಾಲ್ಗೊಳ್ಳಬೇಕು ಎಂದರು.

ಅತಿಥಿಗಳಾಗಿ ಭಾವಹಿಸಿದ್ದ ವೀರಶೈವ ಮಹಾಸಭಾ ಅಧ್ಯಕ್ಷ ಶಂಕರ್ ಬಿದರಿ ಮಾತನಾಡಿ, ಮಠಗಳ ಕಾರ್ಯ ಕೇವಲ ಆಸ್ತಿ ಮಾಡುವ ಮೂಲಕವಲ್ಲ ಬದಲಾಗಿ ಧಾರ್ಮಿಕ ಮೌಲ್ಯವನ್ನು ಪ್ರಚಾರ ಮಾಡಬೇಕಿದೆ. ಅದನ್ನು ರಂಭಾಪುರಿ ಪೀಠದ ಸ್ವಾಮೀಜಿ ನಡೆಸಿಕೊಂಡು ಬರುತ್ತಿದ್ದಾರೆ. ವೀರಶೈವ ಮತ್ತು ಲಿಂಗಾಯತ ಒಂದೇ ಎಂಬುದು ಸಮುದಾಯದವರು ತಿಳಿಯಬೇಕಿದೆ. ಸಮಾಜಕ್ಕೆ ಬಲ ತುಂಬಬೇಕಾದ ಕೆಲಸ ಮಾಡಬೇಕಿದೆ ಎಂದರು.



**ಮಹದೇವಪುರ ಕ್ಷೇತ್ರದ ಮಾರತ್ತಹಳ್ಳಿ ವಾರ್ಡಿನ ಬಿಜೆಪಿ ಶಕ್ತಿ ಕೇಂದ್ರದ ಅಧ್ಯಕ್ಷ ಪ್ರಸಾದ್ ಜನ್ಮದ ಪ್ರಯುಕ್ತ ಬಡವರಿಗೆ ಕಂಬಳಿ, ಮಹಿಳೆಯರಿಗೆ ಸೀರೆ ವಿತರಣೆಯನ್ನು ಮಾಡಿದರು. ಈ ವೇಳೆ ಮಾಜಿ ಬಿಬಿಎಂಪಿ ಸದಸ್ಯ ರಮೇಶ್, ಆನಂದ್, ನರೇಶ್, ರವಿ, ಅರುಣ್, ಮಹೇಶ್ ಮತ್ತಿತ್ತರರು ಉಪಸ್ಥಿತರಿದ್ದರು.**

# ಮುಷ್ಕರ ಕೈಬಿಟ್ಟ ಸಾರಿಗೆ ನೌಕರರ ಒಕ್ಕೂಟ





**ಬೆಂಗಳೂರು:** ಜನವರಿ 15ರಂದು ಸಿಎಂ ಸಿದ್ದರಾಮಯ್ಯ ರಸ್ತೆ ಸಾರಿಗೆ ನೌಕರರ ಜೊತೆ ಸಭೆ ನಡೆಸುವ ಭರವಸೆ ನೀಡಿದ್ದು, ಡಿ.31ರಿಂದ ಮಾಡಲು ಉದ್ದೇಶಿಸಿದ್ದ ಅನಿರ್ದಿಷ್ಟಾವಧಿ ಮುಷ್ಕರದಿಂದ ಹಿಂದೆ ಸರಿಯಲು ಕೆಎಸ್‌ಆರ್‌ಟಿಸಿ ನೌಕರರ ಜಂಟಿ ಕ್ರಿಯಾ ಸಮಿತಿ ನಿರ್ಧರಿಸಿದೆ.

ಭಾನುವಾರ ಗೃಹ ಕಚೇರಿ ಕೃಷ್ಣಾದಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಸಭೆ ನಡೆಸಿದ ಬೆನ್ನಲ್ಲೇ ಕ್ರಿಯಾ ಸಮಿತಿ ಮುಷ್ಕರದಿಂದ ಹಿಂದೆ ಸರಿಯಲು ತೀರ್ಮಾನಿಸಿದೆ. ಸಭೆಯಲ್ಲಿ ಮಕರ ಸಂಕ್ರಾಂತಿಯಂದು ಸಭೆ ನಡೆಸಿ ರಸ್ತೆ ಸಾರಿಗೆ ನೌಕರರ ಬೇಡಿಕೆ ಈಡೇರಿಸುವ ಭರವಸೆ ನೀಡಲಾಗಿದೆ.

ಈ ಸಂಬಂಧ ಪ್ರತಿಕ್ರಿಯಿಸಿರುವ ಕೆಎಸ್‌ಆರ್‌ಟಿಸಿ ಸಿಬ್ಬಂದಿ ಮತ್ತು ನೌಕರರ ಒಕ್ಕೂಟದ ಅಧ್ಯಕ್ಷ ಅನಂತ ಸುಬ್ಬಾರಾವ್ "ಮುಷ್ಕರ ವಾಪಾಸ್ ಪಡೆಯಲು ತೀರ್ಮಾನಿಸಲಾಗಿದೆ. ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಜ.15 ರಂದು ಸಾರಿಗೆ ನೌಕರರ ಒಕ್ಕೂಟದ ಜೊತೆ ಸಭೆ ನಡೆಸುವ ಭರವಸೆ ನೀಡಿದ್ದಾರೆ. ಆ ಸಭೆಯಲ್ಲಿ ಎಲ್ಲ ಬೇಡಿಕೆಗಳ ಬಗ್ಗೆ ಸಿಎಂ ಸಿದ್ದರಾಮಯ್ಯ ಜೊತೆ ಚರ್ಚೆ ನಡೆಸಲಾಗುವುದು. ಹೀಗಾಗಿ ಮುಷ್ಕರ ಕೈಬಿಡುವಂತೆ ಸಚಿವ ರಾಮಲಿಂಗಾ ರೆಡ್ಡಿ ಮನವಿ ಮಾಡಿದ್ದಾರೆ. ಹಾಗಾಗಿ ಡಿ.31 ರಿಂದ ಮಾಡಲು ಉದ್ದೇಶಿಸಿದ್ದ ಮುಷ್ಕರವನ್ನು ಸದ್ಯ ಕೈ ಬಿಡಲು ತೀರ್ಮಾನಿಸಲಾಗಿದೆ" ಎಂದು ತಿಳಿಸಿದರು.

ಬಾಕಿ ವೇತನ ಪಾವತಿ ಹಾಗೂ ವೇತನ ಪರಿಷ್ಕರಣೆ ಸೇರಿ ಹಲವು ಬೇಡಿಕೆಗಳನ್ನು ನೌಕರರ ಕ್ರಿಯಾ ಸಮಿತಿ ಮುಂದಿಟ್ಟಿದೆ.

ಭಾನುವಾರ ನಡೆದ ಸಿಎಂ ನೇತೃತ್ವದ ಸಭೆ ಬಳಿಕ ಮಾತನಾಡಿದ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ, "ನಮ್ಮ ಕಾರ್ಪೊರೇಷನ್ ಆರ್ಥಿಕ ಪರಿಸ್ಥಿತಿ ಅವರಿಗೂ ಗೊತ್ತಿದೆ. ಹಿಂದೆ ಬಿಜೆಪಿ ಇದ್ದಾಗ 900 ಕೋಟಿ ಸಾಲ ಇಟ್ಟು ಹೋಗಿದ್ದಾರೆ. ಹೊಸ ನೇಮಕಾತಿ, ನೌಕರರ ವೇತನ ಅನೇಕ ಕಾರ್ಯಕ್ರಮ ಎಲ್ಲರಿಗೂ ಗೊತ್ತಿದೆ. ಸಂಘಟನೆಯವರು ನೌಕರರ ಪರವಾಗಿ ಕೆಲಸ ಮಾಡಿದ್ದಾರೆ. ನಾನೂ ಕೂಡ ಸಿಎಂ ಜೊತೆ ಚರ್ಚೆ ಮಾಡಿದ್ದೇನೆ. 220 ಕೋಟಿ ರೂ. ಅನುದಾನ ಬಿಡುಗಡೆಗೆ ಮನವಿ ಮಾಡಿದ್ದೇನೆ".

"ಸಂಪುಟ ಸಭೆಯಲ್ಲಿ ಈ ಪ್ರಸ್ತಾವನೆಯನ್ನು ಇಟ್ಟಿದ್ದೇವೆ. ವೇತನ ಪರಿಷ್ಕರಣೆ ಕೂಡ ಹೇಳಿದ್ದೇವೆ. ನಮ್ಮ ಪಕ್ಷದ ಪ್ರಣಾಳಿಕೆಯಲ್ಲೂ ಸಮಾನ ವೇತನ ಬಗ್ಗೆ ಹೇಳಿದ್ದೇವೆ. ಬಸ್ ನಿಲ್ಲಿಸುತ್ತೇವೆ ಅಂತ ಹೇಳಿದ್ದಾರೆ. ಅದನ್ನ ಮುಂದೂಡಿ ಅಂತ ಮನವಿ ಮಾಡಿದ್ದೇವೆ. ನಾವಂತೂ ರಸ್ತೆ ಸಾರಿಗೆ ನೌಕರರ ಪರವಾಗಿ ಪಾಸಿಟೀವ್ ಆಗಿದ್ದೇವೆ" ಎಂದಿದ್ದಾರೆ.

# ಸರಣಿ ಅಪಘಾತ: ಓರ್ವ ಸಾವು– ಹಲವರಿಗೆ ಗಾಯ

**ನೆಲಮಂಗಲ:** ಇಲ್ಲಿಯ ದಾಬಸ್ ಪೇಟೆಯ ಕೈಗಾರಿಕಾ ಪ್ರದೇಶದಲ್ಲಿ ಇಂದು ಬೆಳಂಬೆಳಗ್ಗೆ ಸರಣಿ ರಸ್ತೆ ಅಪಘಾತ ಸಂಭವಿಸಿದೆ. ಅಪಘಾತದಲ್ಲಿ ಓರ್ವ ಸ್ಥಳದಲ್ಲೇ ಮೃತಪಟ್ಟರೆ, ಹಲವರು ಗಾಯಗೊಂಡಿದ್ದಾರೆ. ವೀರಣ್ಣ(55) ಮೃತ ದುರ್ದೈವಿ.

ದಾಬಸ್ ಪೇಟೆಯ ರಾಷ್ಟ್ರೀಯ ಹೆದ್ದಾರಿ 48ರ ಎಡೇಹಳ್ಳಿ ಬಳಿ ಇಂದು ಬೆಳಗ್ಗೆ ಈ ಸರಣಿ ಅಪಘಾತ ಸಂಭವಿದೆ. ಕೈಗಾರಿಕಾ ಪ್ರದೇಶದ ಹೆಬ್ಬಾಗಿಲು ಮುಂಭಾಗದಲ್ಲಿ ಪ್ಯಾಸೆಂಜರ್ ಆಟೋ, ಕಾರು ಮತ್ತು ಲಾರಿ ನಡುವೆ ಸರಣಿ ಅಪಘಾತವಾಗಿದ್ದು, ಘಟನೆಯಲ್ಲಿ ವೀರಣ್ಣ ಸ್ಥಳದಲ್ಲೇ ಮೃತಪಟ್ಟರೆ, ಎಂಬಿಬಿಎಸ್ ಓದುತ್ತಿದ್ದ ವಿದ್ಯಾರ್ಥಿ ಸೇರಿದಂತೆ ಹಲವರು ಗಾಯಗೊಂಡಿದ್ದು, ಈ ಪೈಕಿ ಓರ್ವನ ಸ್ಥಿತಿ ಗಂಭೀರವಾಗಿದೆ. ರಸ್ತೆ ಪಕ್ಕ ನರಳಾಡುತ್ತಿದ್ದ ಪ್ರಯಾಣಿಕರನ್ನು ಸ್ಥಳೀಯರು ಆಸ್ಪತ್ರೆಗೆ ದಾಖಲಿಸಿದ್ದಾರೆ. ನೆಲಮಂಗಲ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.



## ಇಂದಿನಿಂದ ಸಿಪಿಎಂ ರಾಜ್ಯ ಸಮ್ಮೇಳನ

**ಚೇಳೂರು:** ತುಮಕೂರಿನಲ್ಲಿ ಇಂದಿನಿಂದ 29. 30. 31. ರಂದು ನಡೆಯಲಿರುವ ಸಿಪಿಎಂ. 24 ನೇ ರಾಜ್ಯ ಸಮ್ಮೇಳನದ ರ್‍ಯಾಲಿ .ಬಹಿರಂಗ ಸಭೆಯ ಪೋಸ್ಟರ್‌ನ್ನು ಚೇಳೂರು ತಾಲ್ಲೂಕು ಸಿಪಿಎಂ ಕಾರ್ಯದರ್ಶಿ ಗೌನೋರುಪಲ್ಲಿ ಬಯ್ಯಾರೆಡ್ಡಿ ರವರು ಬಿಡುಗಡೆ ಮಾಡಿದರು.

ಅವರು ಚೇಳೂರು ಪಟ್ಟಣದ ಪ್ರವಾಸಿಮಂದಿರದಲ್ಲಿ ತುಮಕೂರಿನಲ್ಲಿ ನಡೆಯುವ 24 ನೇ ಸಿಪಿಐ (ಎಂ) ರಾಜ್ಯ ಸಮ್ಮೇಳನಕ್ಕೆ ತೆರಳಲು ಪೂರ್ವ ಭಾವಿ ಸಭೆಯಲ್ಲಿ ಮಾತನಾಡಿ, ಈ ಭಾಗದಲ್ಲಿ ರೈತಾಪಿ ಜನರಿಗೆ ಜೀವನ ಮಾಡಲು ಕ?ಕರವಾಗಿದೆ ಈ ಭಾಗದಲ್ಲಿ ಶಾಶ್ವತವಾದ ನೀರಾವರಿಯು ಇಲ್ಲ, ನದಿಗಳಿಲ್ಲ ಕೈಗಾರಿಕೆ ಪ್ರದೇಶವಿಲ್ಲ ಕೂಲಿ ಮಾಡಿದರೆ ಜೀವನ ಇಲ್ಲವಾದರೆ ಇಲ್ಲ ಶಾಶ್ವತವಾದ ಕೈಗಾರಿಕೆಗಳು ತೆರೆಯಬೇಕಾಗಿದೆ ಇತರೆ ಬೇಡಿಕೆಗಳು ಈಡೇರಿಸಲು ಈ ತಿಂಗಳ ಮೂರು ದಿನಗಳ ಕಾಲ ತುಮಕೂರಿನಲ್ಲಿ ಸಮ್ಮೇಳನ ನಡೆಯಲಿದೆ ರಾಷ್ಟಿಯ ರಾಜ್ಯದ ಜನ ಪ್ರತಿನಿಧಿಗಳು ಭಾಗವಹಿಸಲಿದ್ದು 3 ದಿನಗಳ ಕಾಲ ಸಮ್ಮೇಳನ ನಡೆಯಲಿದೆ ಮೊದಲ ದಿನ ರ್‍ಯಾಲಿ ಮತ್ತು ಬಹಿರಂಗ ಸಭೆ ನಡೆಯಲಿದೆ ಪಕ್ಷದ ಕಾರ್ಯಕರ್ತರು ಎಲ್ಲಾ ನಾಗರೀಕರು ಭಾಗವಹಿಸಿ ಯಶಸ್ವಿ ಮಾಡಲು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾಚನಪಲ್ಲಿ ಬೈರೆಡ್ಡಿ. ಮಂಜುನಾಥ. ಚಿನ್ನಗಾನಪಲ್ಲಿ ಸಿ.ಜಿ.ಶಿವಣ್ಣ ಆರ್.ವಿ.ಆಶೋಕ್.ಮುಸ್ತಾಫ್‌ಬೇಗ್ಲ. ಲಕ್ಷೀನಾರಾಯಣ ಸುಬ್ಬಿರೆಡ್ಡಿ.ಉತ್ತನ್ನ.ಆದಿನಾರಾಯಣ. ಬಿ.ರಾಮಚಂದ್ರ ಹಾಜರಿದ್ದರು

# ಸರ್ಕಾರಿ ಸೌಲಭ್ಯಗಳನ್ನು ಪ್ರತಿಯೊಬ್ಬರು ಸದುಪಯೋಗ ಪಡಿಸಿ ಕೊಳ್ಳಲು ಸಲಹೆ




ಶಿಡ್ಲಘಟ್ಟ: ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ನಮ್ಮ ವಿಧಾನಸಭಾಕ್ಷೇತ್ರ ತೀರಾ ಹಿಂದುಳಿದಿದ್ದು ಸರ್ಕಾರಗಳು ನೀಡುವ ಅನುಧಾನ ಹಾಗು ಸೌಲಭ್ಯಗಳನ್ನು ಪ್ರತಿಯೊಬ್ಬರು ಸದುಪಯೋಗ ಪಡಿಸಿಕೊಂಡು ಆರ್ಥಿಕವಾಗಿ ಸದೃಡವಾಗಬೇಕು ಎಂದು ಶಾಸಕರಾದ ಬಿ.ಎನ್.ರವಿಕುಮಾರ್ ತಿಳಿಸಿದರು.

ನಗರದ ತಾಲ್ಲೂಕು ಕಛೇರಿಯ ಸಭಾಂಗಣದಲ್ಲಿ ಸರ್ಕಾರದ ವತಿಯಿಂದ ನೊಂದಾಯಿತ ಕಾರ್ಮಿಕರಿಗೆ ಎಲೆಕ್ಟ್ರೀಷಿಯನ್ ಹಾಗು ವೆಲ್ಡಿಂಗ್ ಕಿಟ್ ವಿತರಣೆ ಮಾಡಿ ಅವರು ಮಾತನಾಡಿದರು.

ಕಛೇರಿಗಳಿಗೆ ಕೆಲಸ ನಿಮಿತ್ತ ಬರುವ ನಾಗರಿಕರ ಕೆಲಸಗಳನ್ನು ತ್ವರಿತವಾಗಿ ಮುಗಿಸಿ ಪ್ರತಿಯೊಬ್ಬ ಅಧಿಕಾರಿಗಳು ಸ್ಪಂದಿಸುವಂತೆ ಸೂಚನೆ ನೀಡಿದರು. ಇದೇ ವೇಳೆ ಎಲೆಕ್ಟ್ರೀಷಿಯನ್ ಕಿಟ್ 120 ಜನರಿಗೆ ಹಾಗು ವೆಲ್ಡರ್ ಕಿಟ್ 25 ಜನರಿಗೆ ವಿತರಿಸಲಾಯಿತು. ಕಾರ್ಮಿಕ ಇಲಾಖೆ ವತಿಯಿಂದ ನೊಂದಾಯಿತ ಕಾರ್ಮಿಕರಿಗೆ ಇನ್ಸ್ಯೂರೆನ್ಸ್ ಸೌಲಭ್ಯವಿದ್ದು ಎಲ್ಲಾರು ಸದುಪಯೋಗಪಡಿಸಿಕೊಳ್ಳಬೇಕೆಂದು ಮನವರಿಕೆ ಮಾಡಿದರು.

ಈ ಸಂದರ್ಭದಲ್ಲಿ ತಹಶಿಲ್ದಾರ್ ಬಿ.ಎನ್.ಸ್ವಾಮಿ, ತಾಲ್ಲೂಕು ಪಂಚಾಯತಿ ಇ.ಒ.ಹೇಮಾವತಿ,ಕಾರ್ಮಿಕ ಇಲಾಖೆ ವೃತ್ತ ನೀರಿಕ್ಷಕಿ ವಿಜಯಲಕ್ಷ್ಮಿ,ನಗರಸಭೆ ಅದ್ಯಕ್ಷರಾದ ಎಂ.ವಿ.ವೆಂಕಟಸ್ವಾಮಿ, ಮುಖಂಡರಾದಡಿ.ಬಿ.ವೆಂಕಟೇಶ್,ತಾದೂರುರಘು, ಮೇಲೂರು ಮಂಜುನಾಥ್, ನವೀನ್, ಮರಗೆಲಸ ಕಾರ್ಮಿಕ ಸಂಘದ ಅಧ್ಯಕ್ಷ ಪ್ರದೀಪ್,ಎಲೆಕ್ಟ್ರಿಕ್ ಸಂಘದ ಗಂಗಾಧರ್,ವೆಲ್ಡರ್ಸ್ ಸಂಘದ ಮೆಹಬೂಬ್ ,ಖದೀರ್, ಗಾರೆ ಕೆಲಸ ಸಂಘದ ದ್ಯಾವಪ್ಪ ಮತ್ತಿತರರು ಹಾಜರಿದ್ದರು.

## ಶಾ ಹೇಳಿಕೆ ಖಂಡಿಸಿ: ಜ.6ರಂದು ಕೊಪ್ಪಳ ಬಂದ್‌ಗೆ ಕರೆ

**ಕುಕನೂರು:** ಡಾ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಕುರಿತು ಕೇಂದ್ರ ಗೃಹ ಮಂತ್ರಿ ಅಮಿತ್ ಶಾ ಸಂಸತ್ ಅಧಿವೇಶನದಲ್ಲಿ ಆಡಿರುವ ಅಪಮಾನಕರ ಹೇಳಿಕೆ ಖಂಡಿಸಿ ಪ್ರಗತಿಪರ ಸಂಘಟನೆಗಳು, ದಲಿತಪರ ಸಂಘಟನೆಗಳು ಜನೆವರಿ 6 ರಂದು ಕೊಪ್ಪಳ ಬಂದ್‌ಗೆ ಕರೆ ನೀಡಲಾಗಿದೆ.

ಈ ಕುರಿತು ಕುಕನೂರು ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ, ಹಿರಿಯ ಮುಖಂಡರಾದ ಆರ್ ಪಿ ರಾಜೂರ್ ಮಾತನಾಡಿ, ಡಾ ಅಂಬೇಡ್ಕರ್ ಅಂದರೆ ಈ ದೇಶ ಕಂಡ ಶ್ರೇ?ೃ ವ್ಯಕ್ತಿ, ಅವರ ತಿಳಿದು ಕೊಳ್ಳಲು ಶತಮಾನಗಳೇ ಬೇಕು, ದೇಶದ ಜಾತಿವಾದಿಗಳು ನಮ್ಮ ದೇವರು ಅಂಬೇಡ್ಕರ್ ಅವರಿಗೆ ಮಾಡುವ ಅವಮಾನ ಸಹಿಸುವುದಿಲ್ಲ. ಉಗ್ರವಾಗಿ ಹೋರಾಟ ಮಾಡುತ್ತೇವೆ, ಅಮಿತ್ ಶಾರನ್ನು ಮಂತ್ರಿ ಮಂಡಲದಿಂದ ವಜಾ ಗೊಳಿಸಲು ಅಗ್ರಹಿಸುತ್ತೇವೆ. ಸಂವಿಧಾನದ ಅಡಿಯಲ್ಲಿ ಮಂತ್ರಿಯಾಗಿ ಸಂವಿಧಾನ ಪಿತಾಮಹರಿಗೆ ಅವಮಾನ ಮಾಡುವುದು ಪ್ರತಿಯೊಬ್ಬ ಪ್ರಜೆಗೂ ಮಾಡಿದ ಅವಮಾನ. ಇಂತಹ ವಿ?ಯಗಳಲ್ಲಿ ಪಕ್ಷತೀತ ಹೋರಾಟ ಆಗಬೇಕು, ಅಂಬೇಡ್ಕರ್ ಅವರು ಎಲ್ಲರಿಗೂ ಬೇಕಾದವರು. ಶಾ ಹೇಳಿಕೆ ಖಂಡಿಸುತ್ತೇವೆ ಎಂದರು.

ಶಿವ ಶರಣ ಗಡಿಗೆಪ್ಪಜ್ಜ ಮಾತನಾಡಿ, ಅಮಿತ್ ಶಾ ಅಂಬೇಡ್ಕರ್ ಅವರಿಗೆ ಮಾತ್ರವಲ್ಲ ಈ ದೇಶದ ಜನರಿಗೆ ಅಪಮಾನ ಮಾಡಿದ್ದಾರೆ. ಮಂತ್ರಿಯಾಗಿರಲು ಅಮಿತ್ ಶಾ ಯೋಗ್ಯರಲ್ಲ, ಅವರ ಹೇಳಿಕೆ ಖಂಡಿಸಿ ಜನೆವರಿ 6 ಕೊಪ್ಪಳ ನಗರ ಬಂದ್ ಗೆ ಎಲ್ಲರೂ ಕೈಜೋಡಿಸಿ ಯಶಸ್ವಿಗೊಳಿಸಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಭೀಮ್ ಆರ್ಮಿಯ ನಿಂಗಪ್ಪ ಬೇಣಕಲ್, ಪ್ರಶಾಂತ್, ಈಶಪ್ಪ ದೊಡ್ಡಮನಿ, ಆರ್ ಪಿ ರಾಜೂರ್, ನಿಂಗಪ್ಪ ಗೊರ್ಲೆಕೊಪ್ಪ, ಭೀಮಣ್ಣ ನಡುಲಮನಿ, ರಾಘವೇಂದ್ರ ಕಾತರಕಿ, ಈರಪ್ಪ ಹಿರೇಮನಿ, ಶ್ರೀಧರ್ ಭಂಡಾರಿ, ಶ್ರೀಕಾಂತ್ ಲಕಮಪುರ,ಹನುಮಂತಪ್ಪ ರಾವಣಕಿ, ಬಸವರಾಜ್ ಕುಕನೂರು ಇದ್ದರು.



## ದೇವಲಾಪುರ ಕೆಪಿಎಸ್ ಶಾಲೆಗೆ ಪ್ರಥಮ



**ನಾಗಮಂಗಲ:** ಕುವೆಂಪು ಜನ್ಮ ಶತಮಾನೋತ್ಸವದ ಅಂಗವಾಗಿ ಕುವೆಂಪುರವರ ಕುರಿತು ರಸಪ್ರಶ್ನೆ ಕಾರ್ಯಕ್ರಮದಲ್ಲಿ ದೇವಲಾಪುರ ಕೆಪಿಎಸ್ ಶಾಲೆ ತಾಲೂಕಿಗೆ ಪ್ರಥಮ ಸ್ಥಾನ ಪಡೆದುಕೊಂಡಿದೆ.

ನಾಗಮಂಗಲ ಕನ್ನಡ ಸಂಘ ಆಯೋಜನೆ ಮಾಡಿದ್ದ ತಾಲೂಕು ಮಟ್ಟದ ಕುವೆಂಪು ಅವರ ಕುರಿತು ರಸಪ್ರಶ್ನೆ ಕಾರ್ಯಕ್ರಮದಲ್ಲಿ ದೇವಲಾಪುರ ಕೆಪಿಎಸ್ ಶಾಲೆಯು ಪ್ರಥಮ ಸ್ಥಾನ ಪಡೆದುಕೊಂಡಿದೆ. ಈ ಶಾಲೆ ವಿದ್ಯಾರ್ಥಿಗಳಾದ 8ನೇ ತರಗತಿಯ ಭೂಮಿಕ ಮತ್ತು ಸಿಂಚನರವರು ಪ್ರಥಮ ಸ್ಥಾನ ಪಡೆದುಕೊಂಡ ವಿದ್ಯಾರ್ಥಿಗಳಾಗಿದ್ದಾರೆ.

ವಿದ್ಯಾರ್ಥಿಗಳಿಗೆ ಕನ್ನಡ ಸಂಘದ ಅಧ್ಯಕ್ಷರಾದ ಅಲಮೇಲು ಬಹುಮಾನ ವಿತರಿಸಿದರು ಶಿಕ್ಷಕರಾದ ಉಮಾ ಅವರು ಹಾಜರಿದ್ದರು

## ಅಪಘಾತ: ಬೈಕ್ ಸವಾರರು ಸಾವು

ಶಿರಾ: ತಾಲ್ಲೂಕಿನ ರಾಷ್ಟ್ರೀಯ ರಾ.ಹೆ.48ರ ತರೂರು ಗೇಟ್ ಬಳಿ ರಾತ್ರಿ ಸುಮಾರು 12.30 ಸಮಯದಲ್ಲಿ ದ್ವಿಚಕ್ರ ವಾಹನಕ್ಕೆ ಹಿಂಬದಿಯಿಂದ ಬಂದ ಕ್ರೂಸರ್ ಡಿಕ್ಕಿ ಸಂಭವಿಸಿದ ಅಪಘಾತದಲ್ಲಿ ಯುವಕ ಇಬ್ಬರು ಸ್ಥಳದಲ್ಲಿ ಮೃತಪಟ್ಟಿದ್ದಾರೆ.

ದ್ವಿಚಕ್ರ ವಾಹನದ ಸವಾರರು ಮೃತ ದೇಹವನ್ನು ಶಿರಾ ಸಾರ್ವಜನಿಕ ಆಸ್ಪತ್ರೆಗೆ ಸಾಗಿಸಲಾಗಿದೆ. ತುಮಕೂರು ಕಡೆಯಿಂದ ಬರುತ್ತಿದ್ದ ಕ್ರೂಸರ್ ವಾಹನವು ಮುಂದೆ ಹೋಗುತಿದ್ದ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಕ್ರೂಸರ್ ರಸ್ತೆ ಪಕ್ಕದ ಗುಂಡಿಗೆ ಬಿದ್ದಿದು ಕಳ್ಳಂಬೆಳ್ಳ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಜ.11ರಿಂದ ಸಫಲಾಂಭ ದೇವಿಯ ಜಾತ್ರಾ ಮಹೋತ್ಸವ

**ಮಾಲೂರು:** ಇತಿಹಾಸ ಪ್ರಸಿದ್ಧ ಸಫಲಾಂಭ ದೇವಿಯ ಜಾತ್ರಾ ಮಹೋತ್ಸವವನ್ನು ಜನವರಿ 11 ರಿಂದ 20 ರವರೆಗೂ ಅದ್ದೂರಿಯಾಗಿ ನಡೆಯಲಿದ್ದು ಮುಜರಾಯಿ ಇಲಾಖೆ ವತಿಯಿಂದ ಜಾತ್ರೆಗೆ ಬರುವ ರಾಸುಗಳಿಗೆ ಹಾಗೂ ಭಕ್ತರಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುತ್ತದೆ ಎಂದು ಶಾಸಕ ಕೆ ವೈ ನಂಜೇಗೌಡ ತಿಳಿಸಿದರು



ಮಾಲೂರು ತಾಲ್ಲೂಕಿನ ತೊರ್ನಹಳ್ಳಿ ಗ್ರಾಮದಲ್ಲಿ ಇತಿಹಾಸ ಪ್ರಸಿದ್ಧ ಶ್ರೀ ಸಫಲಾಂಭ ದೇವಿ ಹಾಗೂ ಶ್ರೀ ಪ್ರಸನ್ನ ಭೀಮೇಶ್ವರ ಸ್ವಾಮಿ ಧನಗಳ ಜಾತ್ರಾ ಮಹೋತ್ಸವ ಜನವರಿ 11 ರಿಂದ 20 ರವರೆಗೂ ಅದ್ದೂರಿಯಾಗಿ ನಡೆಯಲಿದೆ ಎಂದು ಶಾಸಕ ಕೆ ವೈ ನಂಜೇಗೌಡ ಹೇಳಿದರು,

ಮುಜರಾಯಿ ಇಲಾಖೆ ಹಾಗೂ ದೇವಾಲಯವತಿಯಿಂದ ಜನವರಿ 11 ರಿಂದ 20 ರವರೆಗೂ ಅದ್ದೂರಿ ಜಾತ್ರೆಗೆ ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. ಆದರೆ ವರ್ತೂರ್ ಸಂತೋ? ಜನವರಿ 8 ರಂದು ಜಾತ್ರೆ ಪ್ರಾರಂಭವಾಗಲಿದೆ ಎಂದು ಸೋಷಿಯಲ್ ಮೀಡಿಯಾದಲ್ಲಿ ವೀಡಿಯೋ ಹರಿಬಿಟ್ಟು ಗೊಂದಲ ಸೃಷ್ಟಿಸಿದ್ದಾರೆ, ಇದಕ್ಕೆ ರಾಸುಗಳ ಮಾಲೀಕರು, ಭಕ್ತಾಧಿಗಳು ಕಿವಿಕೊಡಬಾರದು ಮುಜರಾಯಿ ಇಲಾಖೆ, ದೇವಾಲಯ ಸಮಿತಿ ವತಿಯಿಂದ ಜಾತ್ರೆ ಮಹೋತ್ಸವನ್ನು ಜನವರಿ 11 ರಿಂದ 20 ರವರೆಗೂ ನಿಗದಿಪಡಿಸದೆ ಭಕ್ತರು ಹಾಗೂ ರೈತರು ರಾಸುಗಳನ್ನ ನಿಗದಿ ಪಡಿಸಿದ ದಿನಾಂಕದಂದು ಜಾತ್ರೆಗೆ ಆಗಮಿಸಬೇಕು ಎಂದು ತಿಳಿಸಿದರು,

ಇನ್ನೂ ಹೊಸ ವ?ದ ಮೊದಲ ಜಾತ್ರೆಗೆ ಹೊರ ರಾಜ್ಯಗಳಿಂದ ಸಾವಿರಾರು ರಾಸುಗಳು ಹಾಗೂ ಭಕ್ತರು ಸಫಲಾಂಭ ದೇವಿಯ ಜಾತ್ರಾಗೆ ಆಗಮಿಸುತ್ತಾರೆ. ಮುಜರಾಯಿ ಇಲಾಖೆಯಿಂದ ಮೂಲ ಭೂತ ಸೌಕರ್ಯಗಳ ಜತೆಗೆ ಜಾತ್ರೆಯಲ್ಲಿ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ ಎಂದು ಶಾಸಕ ಕೆ ವೈ ನಂಜೇಗೌಡ ಹೇಳಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ಕ್ಷೇತ್ರನಹಳ್ಳಿ ವೆಂಕಟೇಶ್ ಗೌಡ, ದರಖಾಸ್ತು ಸಮಿತಿ ಅಧ್ಯಕ್ಷ ಆನೇಪುರ ಹನುಮಂತಪ್ಪ, ದರಖಾಸ್ತು ಸಮಿತಿ ಸದಸ್ಯ ಬನಹಳ್ಳಿ ಸತೀಶ್, ಮುಖಂಡ ಶೆಟ್ಟಹಳ್ಳಿ ರಾಮಮೂರ್ತಿ ಸೇರಿದಂತೆ ಹಲವಾರು ಮುಖಂಡರು ಹಾಜರಿದ್ದರು.



**ಶಿಡ್ಲಘಟ್ಟ ತಾಲ್ಲೂಕಿನ ಹಿತ್ತಲಹಳ್ಳಿ ಕೃಷಿಪಂಡಿತ್ ಪ್ರಶಸ್ತಿ ಎಚ್.ಜಿ.ಗೋಪಾಲಗೌಡ, ಬೂದಾಳ ರಾಮಾಂಜಿನಪ್ಪ, ಭೋದಗೂರು ರಾಮಮೂರ್ತಿ, ಗೊರಮಡಗು ಮಂಜುನಾಥ್, ಕಾಚಹಳ್ಳಿ ರತ್ನಮ್ಮ, ಬೀರಪ್ಪನಹಳ್ಳಿ ಚಾತುರ್ಯ ಅವರಿಗೆ ಕರ್ನಾಟಕ ಪ್ರದೇಶ ಕೃಷಿಕ ಸಮಾಜದ ಬೆಂಗಳೂರಿನ ಕಚೇರಿಯಲ್ಲಿ "ರೈತ ರತ್ನ" ಪ್ರಶಸ್ತಿ ನೀಡಿ ಗೌರವಿಸಲಾಯಿತು.**

# ಎಚ್.ನರಸಿಂಹಯ್ಯ ಪ್ರಶಸ್ತಿಗೆ ಆರ್.ಆಂಜನೇಯರೆಡ್ಡಿ ಭಾಜನ

ಶಿಡ್ಲಘಟ್ಟ: ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ನೀಡುವ "ಎಚ್.ನರಸಿಂಹಯ್ಯ" ಪ್ರಶಸ್ತಿಗೆ ಚಿಕ್ಕಬಳ್ಳಾಪುರ–ಕೋಲಾರ ಭಾಗದ ಶಾಶ್ವತ ನೀರಾವರಿ ಹೋರಾಟ ಸಮಿತಿ ಅಧ್ಯಕ್ಷ ಆರ್.ಆಂಜನೇಯರೆಡ್ಡಿ ಅವರು ಭಾಜನರಾಗಿದ್ದಾರೆ.



ಇದೇ 28 ಮತ್ತು 29 ರಂದು ಬೆಂಗಳೂರಿನ ಯಲಹಂಕ ಬಳಿಯ ಬಾಗಲೂರಿನ ವಿ.ಜೆ. ಇಂಟರ್ ನ್ಯಾಷನಲ್ ಶಾಲಾ ಮೈದಾನದಲ್ಲಿ ನಡೆಯಲಿರುವ ಕರ್ನಾಟಕ ವೈಜ್ಞಾನಿಕ ಸಂಶೋಧನಾ ಪರಿಷತ್ ಆಯೋಜಿಸಿರುವ 4 ನೇ ರಾಜ್ಯಮಟ್ಟದ ವೈಜ್ಞಾನಿಕ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರಧಾನ ಮಾಡಲಾಗುತ್ತದೆ ಎಂದು ಪರಿಷತ್ ಅಧ್ಯಕ್ಷ ಬಿ.ಕೆ.ರವಿ ತಿಳಿಸಿದ್ದಾರೆ.

ನೀರಾವರಿ ತಜ್ಞ ಜಿ.ಎಸ್.ಪರಮಶಿವಯ್ಯ ಅವರ ಒಡನಾಡಿಯಾಗಿದ್ದ ಆಂಜನೇಯರೆಡ್ಡಿ 25 ವರ್ಷಗಳಿಂದ ಚಿಕ್ಕಬಳ್ಳಾಪುರ, ಕೋಲಾರ ಹಾಗು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಶಾಶ್ವತ ನೀರಾವರಿ ಕಲ್ಪಿಸುವ ಹೋರಾಟದಲ್ಲಿ ತೊಡಗಿಸಿಕೊಂಡಿದ್ದಾರೆ. ಕೆರೆಗಳ ಪುನರುಜ್ಜೀವನ, ಜಲಸಂರಕ್ಷಣೆ ಹೋರಾಟಗಳಿಂದಾಗಿ 'ನೀರಾವರಿ ಆಂಜನೇಯ ರೆಡ್ಡಿ' ಎಂದೇ ಚಿರಪರಿಚಿತರಾಗಿದ್ದಾರೆ.

## ಮಾಜಿ ಪ್ರಧಾನಿ ಮನಮೋಹನ್ ಸಿಂಗ್‌ಗೆ ಶ್ರದ್ಧಾಂಜಲಿ ಸಭೆ

ಶಿಡ್ಲಘಟ್ಟ: ಹಣ ದುಬ್ಬರ ನಿಯಂತ್ರಣಕ್ಕೆ ಸಾಕಷ್ಟು ಶ್ರಮಿಸಿದ್ದ ನಮ್ಮ ದೇಶದ ಪ್ರಧಾನಿಯಾದ ಮನಮೋಹನ್ ಸಿಂಗ್ ಅವರು 2004 ರಿಂದ 2014 ರವರೆಗೆ ದೇಶವನ್ನು ಮುನ್ನಡೆಸಿದ್ದರು ಎಂದು ಕಾಂಗ್ರೆಸ್ ಮುಖಂಡ ಡಾಲ್ಫಿನ್ ಎ.ನಾಗರಾಜ್ ತಿಳಿಸಿದರು.

ನಗರದ ಕಾಂಗ್ರೆಸ್ ಭವನದಲ್ಲಿ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಶ್ರದ್ಧಾಂಜಲಿ ಸಭೆಯಲ್ಲಿ ಅವರು ಮಾತನಾಡಿದರು. ಸರ್ವ ಶಿಕ್ಷಣ ಅಭಿಯಾನ ಆರ್ಟಿಐ ಕಾಯ್ದೆ, ನರೇಗಾ ಯೋಜನೆ, ಕಡ್ಡಾಯ ಶಿಕ್ಷಣವನ್ನು ಮೂಲಭೂತ ಹಕ್ಕನ್ನಾಗಿಸಿದ್ದು ಸೇರಿದಂತೆ ಹಲವು ಕ್ರಾಂತಿಕಾರಿ ಯೋಜನೆಗಳನ್ನು ಜಾರಿಗೊಳಿಸಿ ದೇಶದ ಸರ್ವಾಂಗೀಣ ಅಭ್ಯುದಯಕ್ಕೆ ಶ್ರಮಿಸಿದ್ದರು ಎಂದು ಹೇಳಿದರು.

ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಎ. ನಾಗರಾಜ್, ಗುತ್ತಿಗೆದಾರ ಟಿ.ಕೆ.ನಟರಾಜ್, ಬ್ಲಾಕ್ ಕಾಂಗ್ರೆಸ್ ಉಪಾಧ್ಯಕ್ಷ ಶ್ರೀನಾಥ್, ನಗರಸಭೆಯ ಮಾಜಿ ಅಧ್ಯಕ್ಷ ಅಫ್ಸರ್ ಪಾಷಾ, ನಗರಸಭಾ ಸದಸ್ಯರಾದ ಶ್ರೀನಿವಾಸ್,ಮೌಲಾ, ರಿಯಾಸ್ ಪಾಷಾ,ಜಿಲ್ಲಾ ಕಾಂಗ್ರೆಸ್ ಸಾಮಾಜಿಕ ಜಾಲತಾಣ ವಿಭಾಗದ ಸಂಚಾಲಕ ಮಹಮ್ಮದ್ ಹಫೀಜ್, ಕುರುಬರ ಸಂಘದ ಕಾರ್ಯದರ್ಶಿ ರಾಮಾಂಜಿ,ಮಂಜುನಾಥ್, ರಾಜಕುಮಾರ್,ಸೈಯದ್ ಬಾಬಾ, ಅಲ್ತಾಫ್ ಹುಸೇನ್, ಮತ್ತಿತರರು ಪಾಲ್ಗೊಂಡಿದ್ದರು.



# ಸಾರ್ವಜನಿಕರ ಸಹಕಾರವಿದ್ದರೆ ಅಪರಾಧಗಳ ತಡೆಯಬಹುದು




ಶಿಡ್ಲಘಟ್ಟ: ಸಾರ್ವಜನಿಕರ ಸಹಕಾರವಿದ್ದರೆ ಮಾತ್ರ ಅಪರಾಧಗಳನ್ನು ಪೋಲಿಸರು ತಡೆಯಬಹುದು ಕೇವಲ ಪೋಲಿಸರದ ತಡೆಯಲು ಸಾಧ್ಯವಿಲ್ಲ ಎಂದು ಪೊಲೀಸ್ ಸರ್ಕಲ್ ಇನ್ಸ್ಪೆಕ್ಟರ್ ಶ್ರೀನಿವಾಸ್ ತಿಳಿಸಿದರು.

ನಗರದ ರೇಷ್ಮೆ ಗೂಡು ಮಾರುಕಟ್ಟೆಯಲ್ಲಿ ರೈತರು ಮತ್ತು ರೀಲರ್‌ಗಳಿಗಾಗಿ ಅಪರಾಧ ತಡೆ ಮಾಸಾಚರಣೆ ಅಂಗವಾಗಿ ಪೊಲೀಸ್ ಇಲಾಖೆಯಿಂದ ಆಯೋಜಿಸಿದ್ದ ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಲಕ್ಷಾಂತರ ರೂ.ಗಳ ವಹಿವಾಟು ನಡೆಯುವ ಹಾಗೂ ನೂರಾರು ಮಂದಿ ರೈತರು ಮತ್ತು ವ್ಯಾಪಾರಸ್ಥರು ಆಗಮಿಸುವ ರೇಷ್ಮೆಗೂಡು ಮಾರುಕಟ್ಟೆಯಲ್ಲಿ ಸಾಕಷ್ಟು ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು. ಹೆಚ್ಚುತ್ತಿರುವ ಸೈಬರ್ ಅಪರಾಧಗಳು, ವಹಿಸಬೇಕಾದ ಮುನ್ನೆಚ್ಚರಿಕೆ ಬಗ್ಗೆ ಮಾಹಿತಿ ನೀಡಿದರು,ರೈತರು ಮಾರುಕಟ್ಟೆಯಲ್ಲಿಯೇ ಗೂಡನ್ನು ಮಾರುವುದರಿಂದ ಕಾನೂನು ಬೆಂಬಲವಾಗಿರುತ್ತದೆ ಜತೆಗೆ ವಂಚನೆಗೆ ಅವಕಾಶ ಇರುವುದಿಲ್ಲ ಎಂದು ಹೇಳಿದರು.

ಪ್ರತಿವರ್ಷ ಡಿಸೆಂಬರ್‌ನಲ್ಲಿ ಅಪರಾಧ ಮಾಸಾಚರಣೆ ಆಚರಿಸಲಾಗುತ್ತಿದ್ದು ಜತೆಗೆ ಸಾರ್ವಜನಿಕರಿಗೆ ಜಾಗೃತಿಯನ್ನು ಮೂಡಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ನಗರ ಠಾಣೆಯ ಸಬ್ ಇನ್ಸ್ಪೆಕ್ಟರ್ ವೇಣುಗೋಪಾಲ್,ಮಾರುಕಟ್ಟೆ ಉಪನಿರ್ದೇಶಕ ಮಹದೇವಯ್ಯ, ಸಹಾಯಕ ನಿರ್ದೇಶಕರಾದ ತಿಮ್ಮರಾಜು,ತಾಲೂಕು ಸಿಲ್ಕ್ ರೀಲರ್ಸ್ ಅಸೋಸಿಯೇಷನ್ ಅಧ್ಯಕ್ಷ ಅನ್ಸರ್ ಖಾನ್, ರೇಷ್ಮೆ ನೂಲು ಉತ್ಪಾದಕರ ಸಂಘದ ಅಧ್ಯಕ್ಷ ಫರೂಕ್‌ಪಾಷಾ, ಮುನಿಕೃಷ್ಣಪ್ಪ,ಜಿ.ರೆಹಮಾನ್ ಮುಂತಾದವರು ಹಾಜರಿದ್ದರು.

## ಪ್ರೇಯಸಿಯ ಮನೆ ಮುಂದೆ ಪ್ರಿಯಕರ ಆತ್ಮಹತ್ಯೆ



**ನಾಗಮಂಗಲ:** ಮನೆ ಮುಂದೆ ಪ್ರೀತಿಯ ನಿರಾಕರಣೆಯ ಹಿನ್ನೆಲೆಯಲ್ಲಿ ಪ್ರಿಯಕರ ಮನೆಯ ಮುಂದೆ ಮದ್ದು ಸಿಡಿಸುವ ಸ್ಫೋಟಕವನ್ನು ಬಳಸಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಾಗಮಂಗಲ ಸಮೀಪ ಬಸವೇಶ್ವರನಗರದಲ್ಲಿ ನಡೆದಿದೆ.

ನಾಗಮಂಗಲ ತಾಲೂಕಿನ ಬಸವೇಶ್ವರ ನಗರದಲ್ಲಿ ರಾಮಚಂದ್ರ ಎಂಬ ಯುವಕ ಬಂಡೆ ಸಿಡಿಸಲು ಬಳಸುತ್ತಿದ್ದ ಜಿಲೆಟಿನ್ ಕಟ್ಟಿಕೊಂಡು ಪ್ರೇಯಸಿಯ ಮನೆ ಮುಂದೆ ಸ್ಫೋಟಿಸಿಕೊಂಡು ಸಾವನ್ನಪ್ಪಿರುವ ಘಟನೆ ನಡೆದಿದೆ.

ಆತ್ಮಹತ್ಯೆಗೆ ಬಳಸಿಕೊಂಡಿದ್ದ ಈ ಸ್ಫೋಟಕ ಯುವಕನ ದೇಹ ಚುರುಚುರಾಗಿದ್ದು ಕಳೆದ ವರ್ಷ ಯುವಕ ಅಪ್ರಾಪ್ತ ಪ್ರೇಮಿಯ ಜೊತೆ ಹೊರ ಹೋಗಿದ್ದು ಎನ್ನಲಾಗಿದೆ ಬಳಿಕ ಪೊಲೀಸರು ಯುವಕನನ್ನು ಬಂಧಿಸಿ ಜೈಲಿಗೆ ಕಳಿಸಿದ್ದರು ಎನ್ನಲಾಗಿದೆ ಜಮೀನಿನ ಮೇಲೆ ಹೊರ ಬಂದಿದ್ದ ಯುವಕ ಆತ್ಮಹತ್ಯೆ ಮಾಡಿಕೊಂಡಿದ್ದು ಈ ಸಂಬಂಧ ನಾಗಮಂಗಲ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

# ಬಂಡೀಪುರದಲ್ಲಿ ಹೊಸ ವರ್ಷಾಚರಣೆಗೆ ಬ್ರೇಕ್

ಚಾಮರಾಜನಗರ: ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ರಾಷ್ಟ್ರೀಯ ಅಭಯಾರಣ್ಯದಲ್ಲಿ ನೂತನ ವರ್ಷಾಚರಣೆಗೆ ಬ್ರೇಕ್ ಹಾಕಲಾಗಿದೆ. ಡಿ.31 ಮತ್ತು 2025ರ ಜ.1 ರಂದು ಬಂಡೀಪುರ ಅರಣ್ಯ ಇಲಾಖೆ ವಸತಿಗೃಹಗಳಲ್ಲಿ ವಾಸ್ತವ್ಯಕ್ಕೆ ನಿರ್ಬಂಧ ವಿಧಿಸಲಾಗಿದೆ. ಆದರೆ ಎಂದಿನಂತೆ ಸಫಾರಿ ವ್ಯವಸ್ಥೆ ಇರಲಿದೆ.

ಬಂಡೀಪುರ ಅಭಯಾರಣ್ಯ ವ್ಯಾಪ್ತಿಯಲ್ಲಿ ಹೊಸ ವರ್ಷಾಚರಣೆ ನೆಪದಲ್ಲಿ ಪ್ರವಾಸಿಗರು ವಾಸ್ತವ್ಯ ಹೂಡಿ ಮೋಜು ಮಸ್ತಿ ಮಾಡುವುದರಿಂದ ಕಾಡು ಪ್ರಾಣಿಗಳ ಸಹಜ ಜೀವನಕ್ಕೆ ತೊಂದರೆಯಾಗುತ್ತದೆ ಎಂಬುದನ್ನು ಮನಗಂಡ ಅರಣ್ಯ ಇಲಾಖೆ, ಡಿ.31 ಹಾಗೂ ಜ.1ರಂದು ಎರಡು ದಿನಗಳ ಕಾಲ ವಸತಿ ಗೃಹಗಳ ವಾಸ್ತವ್ಯಕ್ಕೆ ಅವಕಾಶ ನಿರಾಕರಿಸಿದೆ. ಇದರಿಂದ ಮೋಜು ಮಸ್ತಿಗೆ ಕಡಿವಾಣ ಬಿದ್ದಿದೆ.




ಬಂಡೀಪುರ ಅರಣ್ಯವು ದೇಶದ ಪ್ರಮುಖ ವನ್ಯಜೀವಿ ತಾಣವಾಗಿರುವ ಹಿನ್ನೆಲೆ ಪ್ರತಿನಿತ್ಯ ಕೇರಳ, ತಮಿಳುನಾಡು, ಬೆಂಗಳೂರು, ಮೈಸೂರು ಹಾಗು ವಿದೇಶಗಳಿಂದಲೂ ಅಧಿಕ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸಿ ಬಂಡೀಪುರದಲ್ಲಿ ವಾಸ್ತವ್ಯ ಹೂಡಲು ಬಯಸುತ್ತಾರೆ. ಈ ಮಧ್ಯೆ ಹೊಸ ವರ್ಷಾಚರಣೆಯನ್ನು ಬಂಡೀಪುರದಲ್ಲೇ ಮಾಡಬೇಕು ಎಂದು ಪ್ರವಾಸಿಗರು ಯೋಜನೆ ರೂಪಿಸುವ ಹಿನ್ನೆಲೆ ಪ್ರತಿ ವರ್ಷದಂತೆ ಈ ಬಾರಿಯೂ ನಿರ್ಬಂಧ ಹೇರಲಾಗಿದೆ.

ಬಂಡೀಪುರ ವ್ಯಾಪ್ತಿಯ ಖಾಸಗಿ ವಸತಿ ಗೃಹಗಳು ಮತ್ತು ಹೋಂ ಸ್ಟೇಗಳಿಂದಲೂ ಸಹ ಕಾಡು ಪ್ರಾಣಿಗಳ ಸಹಜ ಜೀವನಕ್ಕೆ ತೊಂದರೆಯಾಗಬಾರದು ಎಂಬ ಉದ್ದೇಶದಿಂದ ಹಲವು ನಿಯಮಗಳನ್ನು ವಿಧಿಸಲಾಗಿದೆ. ಅಧಿಕ ಪ್ರಮಾಣದ ಶಬ್ದ ಮಾಡಬಾರದು, ಲೈಟಿಂಗ್ಸ್ ಬಳಸಬಾರದು, ಡಿಜೆ ಬಳಸುವಂತಿಲ್ಲ, ಫೈರ್ ಕ್ಯಾಂಪ್ ಹಾಕಬಾರದು ಎನ್ನುವುದು ಸೇರಿದಂತೆ ಇನ್ನಿತ್ಯಾದಿ ಹಲವು ಎಚ್ಚರಿಕೆ ನೀಡಲಾಗಿದೆ.

**ಗೋಪಾಲಸ್ವಾಮಿ ಬೆಟ್ಟಕ್ಕೆ ಹೆಚ್ಚು ಪ್ರವಾಸಿಗರ ನಿರೀಕ್ಷೆ:** ಪ್ರಸಿದ್ಧ ಧಾರ್ಮಿಕ ಸ್ಥಳವಾದ ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ಹೊಸ ವರ್ಷದ ದಿನದಂದು ಸಾವಿರಾರು ಮಂದಿ ಪ್ರವಾಸಿಗರು ಆಗಮಿಸುವ ನಿರೀಕ್ಷೆ ಇರುವ ಕಾರಣ ಕೆಎಸ್‌ಆರ್?ಟಿಸಿ ವತಿಯಿಂದಲೂ ಸಹ ಪ್ರವಾಸಿಗರ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ಬಸ್‌ಗಳನ್ನು ಬಿಡಲು ಚಿಂತನೆ ನಡೆಸಲಾಗಿದೆ.

**ಎಂದಿನಂತೆ ಸಫಾರಿ:** ಬಂಡೀಪುರದಲ್ಲಿ ಹೊಸ ವರ್ಷಕ್ಕೆ ಕೇವಲ ವಸತಿಗೃಹಕ್ಕೆ ಮಾತ್ರ ನಿರ್ಬಂಧ ಹಾಕಿರುವ ಅರಣ್ಯ ಇಲಾಖೆ ಎಂದಿನಂತೆ ಸಫಾರಿ ವ್ಯವಸ್ಥೆ ಕಲ್ಪಿಸಿದೆ. ಪ್ರತಿ ದಿನದಂತೆ ಬೆಳಗ್ಗೆ ಮತ್ತು ಸಂಜೆ ವೇಳೆ ಸಫಾರಿ ಇರಲಿದ್ದು, ಇದರ ಸೌಲಭ್ಯವನ್ನು ಪ್ರವಾಸಿಗರು ಪಡೆದುಕೊಳ್ಳಬಹುದಾಗಿದೆ. ಈಗಾಗಲೇ ಆನ್‌ಲೈನ್ ಮೂಲಕ ಅಂದಿನ ಸಫಾರಿ ಟಿಕೆಟ್‌ಗಳು ಕೂಡ ಬುಕ್ ಆಗಿವೆ ಎಂದು ವಲಯ ಅರಣ್ಯಾಧಿಕಾರಿ ಮಲ್ಲೇಶ್ ಮಾಹಿತಿ ನೀಡಿದ್ದಾರೆ.

# ಬೀದಿ ನಾಯಿಗಳ ಹಾವಳಿ ಹೆಚ್ಚಳ

ಶಿಡ್ಲಘಟ್ಟ: ನಗರದಲ್ಲಿ ಇತ್ತೀಚೆಗೆ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು ಅಧಿಕಾರಿಗಳ ನಿರ್ಲಕ್ಷ್ಯದಿಂದ ಸಮಸ್ಯೆ ಹೆಚ್ಚಾಗಿದೆ ಇತ್ತೀಚೆಗೆ 1ನೇ ವಾರ್ಡ್ ನಲ್ಲಿ ಮನೆ ಸಮೀಪ ವಾಕಿಂಗ್ ಮಾಡುತ್ತಿದ್ದ ಶಿಲ್ಪಾ ಎಂಬ ಮಹಿಳೆ ಮೇಲೆ ನಾಯಿಗಳು ದಾಳಿ ಮಾಡಿದ್ದು ತೀವ್ರವಾಗಿ ಗಾಯಗೊಂಡಿದ್ದಾರೆ.



ಗಾಯಗೊಂಡ ಶಿಲ್ಪಾ ಅವರನ್ನು ತಕ್ಷಣವೇ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದ್ದು,ಪ್ರಥಮ ಚಿಕಿತ್ಸೆನೀಡಲಾಗಿದೆ ಇಂತಹ ಘಟನೆಗಳು ಮರುಕಳಿ ಸಬಾರದು ಎಂಬ ಉದ್ದೇಶದಿಂದ ಸ್ಥಳೀಯಮುಖಂಡರಾದ ಚೆಲುವರಾಜ್ ಅವರು ಘಟನೆಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಘಟನೆಗೆ ಸಂಬಂಧಿಸಿದ ಅಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಬಡಾವಣೆಯಲ್ಲಿ ತಕ್ಷಣವೇ ಈ ನಾಯಿಗಳ ಸಂತಾನಹರಣ ಕಾರ್ಯಾಚರಣೆ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ. ಸಮಸ್ಯೆಯನ್ನು ತಕ್ಷಣವೇ ಪರಿಹರಿಸಲು ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯರು 1ನೇ ವಾರ್ಡ್‌ನ ನಗರಸಭಾ ಸದಸ್ಯೆ ಪದ್ಮಿನಿ ಅವರನ್ನು ಒತ್ತಾಯಿಸಿದ್ದಾರೆ. ನಾಯಿಗಳ ಹಾವಳಿ ಮಕ್ಕಳ ಮತ್ತು ಮಹಿಳೆಯರ ಜೀವನವನ್ನು ಅಪಾಯಕ್ಕೊಳಪಡಿಸುತ್ತಿವೆ ಶೀಘ್ರವೇ ನಾಯಿಗಳ ಹಾವಳಿಗೆ ಕಡಿವಾಣ ಹಾಕಬೇಕೆಂದು ಒತ್ತಾಯಿಸಿದರು.

# ಮಹಾ ಕುಂಭಮೇಳಕ್ಕೆ ಏಳು ಸುತ್ತಿನ ಭದ್ರತೆ

**ಪ್ರಯಾಗ್ ರಾಜ್:** ಉತ್ತರ ಪ್ರದೇಶದಲ್ಲಿ 12 ವರ್ಷಗಳಿಗೆ ಒಮ್ಮೆ ನಡೆಯುವ ಮಹಾ ಕುಂಭ ಮೇಳಕ್ಕೆ ಭರದಿಂದ ಸಿದ್ಧತೆ ಸಾಗಿದ್ದು, ಭದ್ರತೆಗೆ ಹೆಚ್ಚಿನ ಒತ್ತು ನೀಡಲಾಗಿದೆ. ಈ ಹಿನ್ನೆಲೆಯಲ್ಲಿ ಮಹಾ ಕುಂಭಮೇಳಕ್ಕಾಗಿ ಪ್ರಯಾಗ್‌ರಾಜ್‌ಗೆ ಭೇಟಿ ನೀಡುವ 40 ಕೋಟಿಗೂ ಹೆಚ್ಚು ಜನರಿಗೆ 7 ಸುತ್ತಿನ ಭದ್ರತೆಯ ವ್ಯವಸ್ಥೆಯನ್ನು ಕಲ್ಪಿಸುವ ಮೂಲಕ ಜನರ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಲಾಗಿದೆ.



ನಗರ ಮತ್ತು ಗ್ರಾಮೀಣ ಪ್ರದೇಶ ಸೇರಿದಂತೆ ರೈಲು ನಿಲ್ದಾಣ, ಬಸ್ ನಿಲ್ದಾಣ, ವಿಮಾನ ನಿಲ್ದಾಣ ಹಾಗೂ ಇತರ ಪ್ರಮುಖ ಮಾರ್ಗದಲ್ಲಿ ತಾತ್ಕಾಲಿಕ ಪೊಲೀಸ್ ಠಾಣೆ ಮತ್ತು ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲು ಸ್ಥಳೀಯ ಅಧಿಕಾರಿಗಳು ನಿರ್ಧರಿಸಿದ್ದಾರೆ.

ಪ್ರಾಂತೀಯ ಸಶಸ್ತ್ರ ಕಾನ್‌ಸ್ಟಾಬ್ಯುಲರಿ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳು, ಬಿಡಿಡಿ ಮತ್ತು ಎಎಸ್ ಚೆಕ್ ತಂಡಗಳನ್ನು ನಿಯೋಜಿಸುವ ಮೂಲಕ ಭದ್ರತೆಯನ್ನು ಮತ್ತಷ್ಟು ಬಲಗೊಳಿಸಲಿದೆ. ಈ ಘಟಕಗಳನ್ನು ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಇರಿಸಲಾಗುವುದು ಎಂದು ಉತ್ತರ ಪ್ರದೇಶ ಸರ್ಕಾರ ತಿಳಿಸಿದೆ.

**ಭದ್ರತೆ ಹಾಗೂ ಸಿದ್ಧತೆಗಳ ಬಗ್ಗೆ ಪೊಲೀಸ್ ಆಯುಕ್ತರಿಂದ ಮಾಹಿತಿ:** ಈ ಕುರಿತು ಮಾಹಿತಿ ನೀಡಿರುವ ಪ್ರಯಾಗ್‌ರಾಜ್ ಪೊಲೀಸ್ ಆಯುಕ್ತರಾದ ತರುಣ್ ಗಬಾ, 13 ತಾತ್ಕಾಲಿಕ ಪೊಲೀಸ್ ಠಾಣೆ ಮತ್ತು 23 ಚೆಕ್‌ಪೋಸ್ಟ್‌ಗಳ ಭದ್ರತಾ ಖಾತ್ರಿಯನ್ನು ಒದಗಿಸಲಾಗುವುದು. ಈ ಮೂಲಕ ಒಟ್ಟಾರೆ 44 ರಿಂದ 57 ಸ್ಟೇಷನ್‌ಗಳನ್ನು ಸ್ಥಾಪಿಸಲಾಗುವುದು. ಪ್ರಯಾಗ್‌ರಾಜ್‌ನ ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ 10,000 ಪೊಲೀಸ್ ಸಿಬ್ಬಂದಿ ನೇಮಕ ಮಾಡಲಾಗಿದೆ ಎಂದು ಮಾಹಿತಿ ಒದಗಿಸಿದ್ದಾರೆ.

ಪ್ರಯಾಗರಾಜ್ ಪೊಲೀಸ್ ಕಮಿಷನರೇಟ್‌ನ ಶಾಶ್ವತ ಮತ್ತು ತಾತ್ಕಾಲಿಕ ಮೂಲಸೌಕರ್ಯವನ್ನು ಎಂಟು ಪ್ರಮುಖ ವಲಯಗಳನ್ನಾಗಿ ವಿಭಾಗಿಸಲಾಗಿದೆ. 21 ಕಂಪನಿಗಳು, ಕೇಂದ್ರ ಸಶಸ್ತ್ರ ಪೊಲೀಸ್ ಪಡೆಯ ಎರಡು ಮೀಸಲು ಪಡೆ, ಪಿಎಸಿಯ ಐದು ಪಡೆ, ಎನ್‌ಡಿಆರ್‌ಎಫ್‌ನ ನಾಲ್ಕು ತಂಡಗಳು,12 ಎಎಸ್ ತಂಡ ಮತ್ತು 4 ಬಿಡಿಡಿ ತಂಡಗಳಾಗಿ ವಿಂಗಡಿಸಲಾಗಿದೆ ಎಂದು ಆಯುಕ್ತರು ಹೇಳಿದ್ದಾರೆ.

ಜನವರಿ 13ರಂದು ಪುಷ್ ಪೂರ್ಣಿಮಾದಿಂದ ಆರಂಭವಾಗಲಿರುವ ಮಹಾ ಕುಂಭ ಮೇಳ 45 ದಿನಗಳ ಕಾಲ ಸಾಗಲಿದ್ದು, ಮಹಾಶಿವರಾತ್ರಿಯಂದು ಅಂದರೆ ಫೆಬ್ರವರಿ 26ರಂದು ಮುಕ್ತಾಯವಾಗಲಿದೆ. ಆರು ವಾರಗಳ ಕಾಲ ನಡೆಯುವ ಕುಂಭಮೇಳದಲ್ಲಿ ಅಮೆರಿಕ ಮತ್ತು ಕೆನಡಾ ಸೇರಿದಂತೆ ದೇಶ– ವಿದೇಶದಿಂದ ಅಪಾರ ಪ್ರಮಾಣದ ಭಕ್ತರು ಇಲ್ಲಿ ಸೇರಲಿದ್ದಾರೆ. ಗಂಗಾ, ಯಮುನಾ ಮತ್ತು ಗುಪ್ತವಾಗಿ ಹರಿಯುವ ಪುರಾಣ ಪ್ರಸಿದ್ಧ ಸರಸ್ವತಿ ನದಿ ಸೇರುವ ಸಂಗಮನದಲ್ಲಿ ಪವಿತ್ರ ಸ್ನಾನವನ್ನು ಯಾತ್ರಾರ್ಥಿಗಳು ಮಾಡಲಿದ್ದಾರೆ.

# ಸಿರಿಯಾದಲ್ಲಿ ಚುನಾವಣೆ ನಡೆಸಲು 4 ವರ್ಷ ಬೇಕಾಗಬಹುದು





**ಡಮಾಸ್ಕಸ್:** ಯುದ್ಧಪೀಡಿತ ಸಿರಿಯಾದಲ್ಲಿ ಚುನಾವಣೆ ನಡೆಸಲು ಕನಿಷ್ಠ ನಾಲ್ಕು ವರ್ಷ ಬೇಕಾಗಬಹುದು ಎಂದು ಪ್ರಸ್ತುತ ಸಿರಿಯಾದ ಆಡಳಿತದ ಚುಕ್ಕಾಣಿ ಹಿಡಿದಿರುವ ಮುಖಂಡ ಅಹ್ಮದ್ ಅಲ್–ಶರಾ ಹೇಳಿದ್ದಾರೆ. ಮೂರು ವಾರಗಳ ಹಿಂದೆ ಅಲ್ – ಶರಾ ನೇತೃತ್ವದಲ್ಲಿ ಹಯಾತ್ ತಹ್ರಿರ್ ಅಲ್–ಶಾಮ್ (ಎಚ್‌ಟಿಎಸ್) ಹೋರಾಟಗಾರರು ದೀರ್ಘಕಾಲದ ಆಡಳಿತಗಾರ ಬಷರ್ ಅಲ್–ಅಸ್ಸಾದ್ ಅವರನ್ನು ಪದಚ್ಯುತಗೊಳಿಸಿದ ನಂತರ ಇದೇ ಮೊದಲ ಬಾರಿಗೆ ಚುನಾವಣಾ ವೇಳಾಪಟ್ಟಿಯ ಬಗ್ಗೆ ಹೊಸ ಸಿರಿಯನ್ ನಾಯಕ ಪ್ರತಿಕ್ರಿಯಿಸಿದ್ದಾರೆ. ದೇಶಕ್ಕೆ ಹೊಸ ಸಂವಿಧಾನ ರಚಿಸಲು ಮೂರು ವರ್ಷ ಬೇಕಾಗಬಹುದು ಎಂದು ಅಲ್–ಶರಾ ಸೌದಿ ಅರೇಬಿಯಾದ ಸರ್ಕಾರಿ ಮಾಧ್ಯಮ ಅಲ್ ಅರೇಬಿಯಾಕ್ಕೆ ಭಾನುವಾರ ತಿಳಿಸಿದ್ದಾರೆ. ಮುಂದಿನ ಒಂದು ವರ್ಷದಲ್ಲಿ ಸಿರಿಯಾದಲ್ಲಿ ಗಮನಾರ್ಹ ಬದಲಾವಣೆ ತರಲಾಗುವುದು ಮತ್ತು ಸಿರಿಯಾದಲ್ಲಿ ಅತ್ಯಂತ ಪ್ರಬಲ ಮಿಲಿಟರಿ ಮತ್ತು ರಾಜಕೀಯ ಶಕ್ತಿಯಾಗಿರುವ ಎಚ್‌ಟಿಎಸ್ ರಾಷ್ಟ್ರೀಯ ಸಂವಾದ ಸಮ್ಮೇಳನದಲ್ಲಿ ವಿಸರ್ಜಿಸಲಾಗುವುದು ಎಂದು ಅವರು ಹೇಳಿದ್ದಾರೆ. ದೇಶದಲ್ಲಿ ಅರ್ಹ ಮತದಾರರ ಸಂಖ್ಯೆಯನ್ನು ತಿಳಿಯಲು ಹೊಸ ಜನಗಣತಿಯನ್ನು ನಡೆಸಬೇಕಾಗಿರುವುದರಿಂದ ನಾಲ್ಕು ವರ್ಷಗಳ ನಂತರ ಚುನಾವಣೆಗಳು ನಡೆಯುವ ಸಾಧ್ಯತೆಯಿದೆ ಎಂದು ಅವರು ತಿಳಿಸಿದರು.

ಅಸ್ಸಾದ್ ಬೆಂಬಲಿಗರ ಬಂಧನ: ಸಿರಿಯಾದ ಹೊಸ ಮಧ್ಯಂತರ ಆಡಳಿತದ ಅಧಿಕಾರಿಗಳು ಅಸ್ಸಾದ್ ಬೆಂಬಲಿಗರ ನೆಲೆಗಳ ಮೇಲೆ ದಾಳಿ ಆರಂಭಿಸಿದ್ದು, ಸುಮಾರು 300 ಜನರನ್ನು ವಶಕ್ಕೆ ಪಡೆದಿದ್ದಾರೆ ಎಂದು ಸಿರಿಯನ್ ಮಾನವ ಹಕ್ಕುಗಳ ವೀಕ್ಷಣಾಲಯ ತಿಳಿಸಿದೆ.

ಕರಾವಳಿ ಪ್ರಾಂತ್ಯದ ಲಟಾಕಿಯಾ ಮತ್ತು ಹಮಾದಲ್ಲಿ ದಲ್ಲಿ ಶನಿವಾರ ಮತ್ತು ಗುರುವಾರ ಅಸ್ಸಾದ್ ಬೆಂಬಲಿಗ ಹೋರಾಟಗಾರರು ಮತ್ತು ಕೆಲ ಶಂಕಿತ ವ್ಯಕ್ತಿಗಳನ್ನು ಬಂಧಿಸಲಾಗಿದೆ ಎಂದು ಸರ್ಕಾರಿ ಸುದ್ದಿ ಸಂಸ್ಥೆ ಸನಾ ದೃಢಪಡಿಸಿದೆ. ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳನ್ನು ಕೂಡ ದಾಳಿಯ ಸಮಯದಲ್ಲಿ ವಶಪಡಿಸಿಕೊಳ್ಳಲಾಗಿದೆ ಎಂದು ಸನಾ ವರದಿ ಮಾಡಿದೆ.

ಗೂಢಚಾರರು, ಅಸಾದ್ ಆಡಳಿತ ಪರ ಮತ್ತು ಇರಾನ್ ಪರವಾಗಿರುವ ಸಶಸ್ತ್ರ ಹೋರಾಟಗಾರರು ಮತ್ತು ಕೆಳದರ್ಜೆಯ ಮಿಲಿಟರಿ ಅಧಿಕಾರಿಗಳು ಬಂಧಿತರಲ್ಲಿ ಸೇರಿದ್ದಾರೆ ಎಂದು ವೀಕ್ಷಣಾಲಯ ಭಾನುವಾರ ತಿಳಿಸಿದೆ. ಡಮಾಸ್ಕಸ್, ಲಟಾಕಿಯಾ, ಟಾರ್ಟಸ್ ಮತ್ತು ಹೋಮ್ಸ್ ಪ್ರದೇಶಗಳಲ್ಲಿನ ಹಿಂದಿನ ಅಸ್ಸಾದ್ ಆಡಳಿತದೊಂದಿಗೆ ಸಂಬಂಧ ಹೊಂದಿದ್ದ ವ್ಯಕ್ತಿಗಳನ್ನು ಗುರಿಯಾಗಿಸಿಕೊಂಡು ಹೊಸ ಆಡಳಿತದ ಭದ್ರತಾ ಪಡೆಗಳು ಗುರುವಾರ ವ್ಯಾಪಕ ಕಾರ್ಯಾಚರಣೆ ಪ್ರಾರಂಭಿಸಿವೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಕುಖ್ಯಾತ ಸದ್ನಾಯಾ ಜೈಲಿನಲ್ಲಿ ಸಾವಿರಾರು ಜನರ ಮರಣ ದಂಡನೆಯ ವಿಚಾರಣೆಯ ಮೇಲ್ವಿಚಾರಣೆ ನಡೆಸಿದ್ದ ಮಿಲಿಟರಿ ನ್ಯಾಯಾಲಯದ ಮಾಜಿ ಮುಖ್ಯಸ್ಥ ಜನರಲ್ ಮೊಹಮ್ಮದ್ ಕಾಂಜೋ ಹಸನ್ ಅವರನ್ನು ಕೂಡ ಬಂಧಿಸಲಾಗಿದೆ ಎಂದು ವರದಿಗಳು ತಿಳಿಸಿವೆ. ಈ ವ್ಯಕ್ತಿಗಳ ಬಂಧನಕ್ಕೆ ಸ್ಥಳೀಯ ನಿವಾಸಿಗಳು ಸಹಕಾರ ನೀಡಿದ್ದಾರೆ ಮತ್ತು ಸಾಮಾನ್ಯ ನಾಗರಿಕರನ್ನು ನಿಶ್ಯಸ್ತ್ರೀಕರಣಗೊಳಿಸಲು ಅಭಿಯಾನ ನಡೆಸಲಾಗುತ್ತಿದೆ ಎಂದು ವೀಕ್ಷಣಾಲಯ ಹೇಳಿದೆ.

# ಪಂಜಾಬ್ ಬಂದ್: ತುರ್ತು ಸೇವೆ ಹೊರತುಪಡಿಸಿ ಇತರ ಸೌಕರ್ಯಗಳು ಸ್ಥಗಿತ



**ಪಂಜಾಬ್:** ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪಂಜಾಬ್ ಮತ್ತು ಹರಿಯಾಣ ರೈತರು ಶಂಭು ಮತ್ತು ಕನೌರಿ ಗಡಿ ಬಳಿ ನಿರಂತರ ಪ್ರತಿಭಟನೆ ಮುಂದುವರೆಸಿದ್ದಾರೆ. ಈ ನಡುವೆ ರೈತರು ನಡೆಸಿದ್ದ ದೆಹಲಿ ನಡಿಗೆ ಹಲವು ಬಾರಿ ವಿಫಲವಾಗಿದ್ದು, ಗಡಿಯಲ್ಲಿಯೇ ಅವರನ್ನು ತಡೆಯಲಾಗುತ್ತಿದೆ. ಮತ್ತೊಂದೆಡೆ ನಾನಾ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರೈತ ನಾಯಕ ಜಗ್ಜಿತ್ ಸಿಂಗ್ ಕಳೆದ 34 ದಿನಗಳಿಂದ ಅಮರಣಾಂತ ಉಪವಾಸ ನಡೆಸುತ್ತಿದ್ದಾರೆ. ಅವರ ಆರೋಗ್ಯ ದಿನದಿಂದ ದಿನಕ್ಕೆ ಕ್ಷೀಣಿಸುತ್ತಿರುವ ಹಿನ್ನೆಲೆ ಮಧ್ಯ ಪ್ರವೇಶಿಸಿರುವ ಸುಪ್ರೀಂ ಕೋರ್ಟ್ ಪಂಜಾಬ್ ಮತ್ತು ಕೇಂದ್ರ ಸರ್ಕಾರಗಳು, ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವಂತೆ ಸೂಚಿಸಿದೆ.

ಈ ನಡುವೆ ರೈತರು ಇಂದು ಪಂಜಾಬ್ ಬಂದ್‌ಗೆ ಕರೆ ನೀಡಿದ್ದಾರೆ. ತುರ್ತು ಸೇವೆ ಹೊರತುಪಡಿಸಿ ಸಂಪೂರ್ಣ ಬಂದ್ ನಡೆಸುವುದಾಗಿ ಅವರು ಘೋಷಿಸಿದ್ದಾರೆ. ಇದಾದ ಬಳಿಕ ಹರಿಯಾಣದಲ್ಲಿ ಜನವರಿ 4 ರಂದು ಮತ್ತು ಜನವರಿ 9 ರಂದು ಮೊಗಾದಲ್ಲಿ ಮಹಾಪಂಚಾಯತ್ ಸಂಘಟಿಸಲಾಗುವುದು ಎಂದು ರೈತರು ಘೋಷಿಸಿದ್ದಾರೆ.

ಪಂಜಾಬ್ ಬಂದ್‌ಗಿಲ್ಲ ಉದ್ಯಮಗಳ ಬೆಂಬಲ: ಡಿಸೆಂಬರ್ 30ರಂದು ಕರೆ ನೀಡಿರುವ ಪಂಜಾಬ್ ಬಂದ್ ರಸ್ತೆ ಟ್ರಾಫಿಕ್ ಜೊತೆಗೆ ಉದ್ಯಮದ ಮೇಲೂ ಪರಿಣಾಮ ಬೀರಲಿದೆ. ಇದೇ ವೇಳೆ ಪಂಜಾಬ್ ಉದ್ಯಮಿಗಳು ಮಾರುಕಟ್ಟೆ ತೆರೆಯುವುದಾಗಿ ಘೋಷಿಸಿದ್ದಾರೆ. ಈ ಕುರಿತು ಮಾತನಾಡಿರುವ ಪಂಜಾಬ್? ಉದ್ಯಮ ಮಂಡಳಿಯ ರಾಜ್ಯ ನಾಯಕ ಅನಿಲ್ ಬನ್ಸಾಲ್‌ನಾನಾ, ರೈತ ಸಂಘಟನೆ ಬಂದ್ ಕುರಿತಾಗಿ ನಮ್ಮ ಜೊತೆ ಯಾವುದೇ ಸಂಪರ್ಕ ನಡೆಸಿಲ್ಲ. ಜೊತೆಗೆ ಬಂದ್‌ನಿಂದ ಉದ್ಯಮಿ – ವ್ಯಾಪಾರಿಗಳಿಗೆ ತೊಂದರೆಯಾಗಲಿದೆ. ಈಗಾಗಲೇ ಉದ್ಯಮವೂ ಕೆಟ್ಟ ಸ್ಥಿತಿಯಲ್ಲಿದೆ. ಈ ಹಿನ್ನೆಲೆಯಲ್ಲಿ ನಾವು ಪಂಜಾಬ್ ಬಂದ್‌ಗೆ ಬೆಂಬಲ ನೀಡುವುದಿಲ್ಲ ಎಂದರು.

ಬಂದ್‌ಗೆ ಸಾರಿಗೆ ಬೆಂಬಲ: ರಾಜ್ಯ ಬಂದ್‌ಗೆ ಪಿಆರ್‌ಟಿಸಿ ಗುತ್ತಿಗೆ ಕಾರ್ಮಿಕರು ಬೆಂಬಲ ನೀಡಿದ್ದಾರೆ. ಬೆಳಗ್ಗೆ 10 ರಿಂದ ಮಧ್ಯಾಹ್ನ 2ರವರೆಗೆ ದಿಗ್ಬಂದನ ಹಾಕುವುದಾಗಿ ತಿಳಿಸಿದ್ದಾರೆ.

## ಹೊಸ ವರ್ಷಾಚರಣೆ ವಿರುದ್ಧ ಫತ್ವಾ ಹೊರಡಿಸಿದ ಮುಸ್ಲಿಂ ಸಂಘಟನೆ

**ನವದೆಹಲಿ:** ಹೊಸ ವರ್ಷಾಚರಣೆಗೆ ದೇಶಾದ್ಯಂತ ಭರ್ಜರಿ ತಯಾರಿ ನಡೆಯುತ್ತಿರುವಂತೆಯೇ, ಅಖಿಲ ಭಾರತ ಮುಸ್ಲಿಂ ಜಮಾತ್‌ನ ರಾಷ್ಟ್ರೀಯ ಅಧ್ಯಕ್ಷ ಮೌಲಾನಾ ಶಹಾಬುದ್ದೀನ್ ರಜ್ವಿ ಬರೇಲ್ವಿ ಭಾನುವಾರ ಹೊಸ ವರ್ಷಾಚರಣೆಯ ವಿರುದ್ಧ ಫತ್ವಾ ಹೊರಡಿಸಿದ್ದು, ಮುಸ್ಲಿಮರು ಅದನ್ನು ಆಚರಿಸದಂತೆ ನಿರುತ್ಸಾಹಗೊಳಿಸಿದ್ದಾರೆ. ಬದಲಿಗೆ ಅವರ ನಂಬಿಕೆಗೆ ಹೊಂದಿಕೆಯಾಗುವ ಧಾರ್ಮಿಕ ಆಚರಣೆಗಳತ್ತ ಗಮನ ಹರಿಸುವಂತೆ ಒತ್ತಾಯಿಸಿದ್ದಾರೆ.

ಚಶ್ಮೆ ದರ್ಫ್ತಾ ಬರೇಲಿ ಅವರು ಈ ಫತ್ವಾ ಹೊರಡಿಸಿದ್ದು, ಹೊಸ ವರ್ಷದ ಸಂಭ್ರಮಾಚರಣೆಯಲ್ಲಿ ಮುಸ್ಲಿಂ ಯುವಕರು ಮತ್ತು ಯುವತಿಯರು ಪಾಲ್ಗೊಳ್ಳಬಾರದು ಎಂದು ರಜ್ವಿ ಬರೇಲ್ವಿ ಹೇಳಿದ್ದಾರೆ.

ಹೊಸ ವರ್ಷ ಆಚರಿಸುವುದು ಹೆಮ್ಮೆಯ ವಿಷಯವಲ್ಲಾ. ಇದನ್ನು ಆಚರಿಸಬಾರದು ಅಥವಾ ಅಭಿನಂದಿಸಬಾರದು ಎಂದು ಹೊಸ ವರ್ಷ ಆಚರಿಸುವ ಯುವಕ– ಯುವತಿಯರಿಗೆ ಫತ್ವಾದಲ್ಲಿ ಸೂಚಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.


# ವಾರಾಣಸಿ ದೇಗುಲ ದರ್ಶನದಲ್ಲಿ ಕೆಲ ಬದಲಾವಣೆ

**ವಾರಾಣಸಿ:** 2025ರ ಹೊಸ ವರ್ಷ ಪ್ರಾರಂಭಕ್ಕೆ ಇನ್ನೂ ಎರಡು ದಿನ ಬಾಕಿ ಇದೆ. ಅನೇಕರು ಈ ನವ ವರ್ಷವನ್ನು ದೇವರ ಆಶೀರ್ವಾದದಿಂದ ಪ್ರಾರಂಭ ಮಾಡಲು ಇಚ್ಛಿಸುತ್ತಾರೆ. ಈ ಸಮಯದಲ್ಲಿ ಶ್ರೀ ಕಾಶಿ ವಿಶ್ವನಾಥ ಸನ್ನಿಧಿಗೆ ಭೇಟಿ ನೀಡುವ ಮಂದಿ ಕೂಡ ಹೆಚ್ಚು. ಲಕ್ಷಾಂತರ ಜನರು ಈ ದಿನ ದೇಗುಲಕ್ಕೆ ಬರುವ ಹಿನ್ನೆಲೆ ಶ್ರೀ ಕಾಶಿ ವಿಶ್ವನಾಥ್ ನ್ಯಾಸ್ ಪರಿಷದ್ ಕ್ಯೂ ಸಿದ್ಧತೆ ನಡೆಸಿದೆ.

ಈ ದಿನ ಭಕ್ತರ ಸಂಖ್ಯೆ ಹೆಚ್ಚಿರುವ ಹಿನ್ನೆಲೆ ದೇಗುಲದ ಗರ್ಭಗುಡಿ ಪ್ರವೇಶ ಸಂಪೂರ್ಣ ಬಂದ್ ಮಾಡಲಾಗಿದೆ.

ವಿಶ್ವನಾಥನ ದರ್ಶನಕ್ಕೆ ಮುಗಿಬಿದ್ದ ಜನ – ಎಲ್ಲ ಟಿಕೆಟ್ ಬುಕ್: ವಾರಾಣಸಿಯಲ್ಲಿ ಶ್ರೀ ಕಾಶಿ ವಿಶ್ವನಾಥ ಕಾರಿಡಾರ್ ಉದ್ಘಾಟನೆಯಾದ ಬಳಿಕ ದೇಗುಲಕ್ಕೆ ಭೇಟಿ ನೀಡುವ ಭಕ್ತರ ಸಂಖ್ಯೆ ನಿರಂತರವಾಗಿ ಏರಿಕೆ ಕಂಡಿದೆ.

ಹೊಸ ವರ್ಷಕ್ಕೂ ಮೊದಲೇ ಬೃಹತ್ ಸಂಖ್ಯೆಯಲ್ಲಿ ಭಕ್ತರು ಶ್ರೀ ಕಾಶಿ ವಿಶ್ವನಾಥ ಧಾಮಕ್ಕೆ ಭೇಟಿ ನೀಡುತ್ತಿದ್ದು, ವಿಶ್ವನಾಥನ ಆರತಿ, ರುದ್ರಾಭಿಷೇಕ, ಸುಗಮ ದರ್ಶನದ ಟಿಕೆಟ್‌ಗಳ ಬೇಡಿಕೆ ನಾಲ್ಕು ಪಟ್ಟು ಹೆಚ್ಚಿದ್ದು, ಎಲ್ಲವೂ ಬುಕ್ ಆಗಿದೆ.



ವಿಶ್ವನಾಥನ ಮಂಗಳಾರತಿ , ಮಧ್ಯಾಹ್ನದ ಬೋಗ್ ಆರತಿ, ಸಪ್ತರಿಶಿ ಆರತಿ ಮತ್ತು ಶ್ರೀನಗರ್ ಬೋಗ್ ಆರತಿ ಆನ್‌ಲೈನ್ ಟಿಕೆಟ್‌ಗಳು ಸದ್ಯ ಭಕ್ತರಿಗೆ ಲಭ್ಯವಿಲ್ಲ ಎಂದು ದೇಗುಲದ ಆಡಳಿತ ಮಂಡಳಿ ತಿಳಿಸಿದೆ. ರುದ್ರಾಭಿಷೇಕ ಮತ್ತು ಸುಗಮ ದರ್ಶನದ ಟಿಕೆಟ್‌ಗಳು ಸಂಪೂರ್ಣವಾಗಿ ಬುಕ್ ಆಗಿದೆ. ಡಿಸೆಂಬರ್ 31ರಿಂದ ಜನವರಿ 2ರವರೆಗೆ ಯಾವುದೇ ರೀತಿಯ ಬುಕ್ಕಿಂಗ್‌ಗಳಿಗೆ ಅವಕಾಶವಿಲ್ಲ ಈ ಹಿನ್ನೆಲೆಯಲ್ಲಿ ದೇವಸ್ಥಾನದಲ್ಲಿ ಭಕ್ತರನ್ನು ನಿಯಂತ್ರಿಸಲು ಹರಸಾಹಸ ಪಡಬೇಕಿದೆ.

ದೇಗುಲದಲ್ಲಿ ಬಿಗಿ ಭದ್ರತೆ, ಸುರಕ್ಷತೆಗೆ ಹೆಚ್ಚಿನ ಒತ್ತು; ದೇಗುಲದ ಭದ್ರತೆ ಕುರಿತು ಮಾತನಾಡಿರುವ ಶ್ರೀ ಕಾಶಿ ವಿಶ್ವನಾಥ ದೇವಸ್ಥಾನದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಎಲ್ಲ ರೀತಿಯ ಸುರಕ್ಷತೆ ಕೈಗೊಳ್ಳಲಾಗಿದೆ. ಹೊಸ ವರ್ಷದಂದು ಭೇಟಿ ನೀಡಲಿರುವ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಸೌಲಭ್ಯ ಕಲ್ಪಿಸಲಾಗಿದೆ. ಪ್ರತಿ ವರ್ಷ ಹೊಸ ವರ್ಷದಂದು ದೊಡ್ಡ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಾರೆ. ಈ ದೃಷ್ಟಿಯಲ್ಲಿ ಶ್ರಾವಣ ಮತ್ತು ಮಹಾಶಿವರಾತ್ರಿಯಲ್ಲಿ ಮಾಡುವಂತೆ ಬ್ಯಾರಿಕೇಡ್ ವ್ಯವಸ್ಥೆ ಮಾಡಲಾಗಿದೆ. ಭಕ್ತರ ಸಂಖ್ಯೆ ಕಡಿಮೆಯಾಗುವವರೆಗೆ ಗರ್ಭಗುಡಿ ಪ್ರವೇಶ, ಸ್ಪರ್ಶ ದರ್ಶನಕ್ಕೆ ಅವಕಾಶವಿಲ್ಲ. ಇದರ ಜೊತೆಗೆ ಮಹಾ ಕುಂಭಕ್ಕೂ ಎಲ್ಲಾ ರೀತಿ ಸಿದ್ಧತೆ ನಡೆಸಲಾಗಿದ್ದು, ಜನವರಿ 10 ರಿಂದ ಈ ಭದ್ರತಾ ಕಾರ್ಯ ಜಾರಿ ಮಾಡಲಾಗುವುದು ಎಂದರು.

# ಮತಾಂತರದ ಶಂಕೆ, ಬುಡಕಟ್ಟು ಮಹಿಳೆಯರನ್ನು ಮರಕ್ಕೆ ಕಟ್ಟಿ ಥಳಿತ

ಬಾಲಸೋರ್: ಧಾರ್ಮಿಕ ಮತಾಂತರದ ಶಂಕೆಯ ಮೇಲೆ ಜನರ ಗುಂಪೊಂದು ಇಬ್ಬರು ಮಹಿಳೆಯರನ್ನು ಮರಕ್ಕೆ ಕಟ್ಟಿಹಾಕಿ ಥಳಿಸಿರುವ ಘಟನೆ ಒಡಿಶಾದ ಬಾಲಸೋರ್ ಜಿಲ್ಲೆಯ ರೆಮುನಾ ಪ್ರದೇಶದಲ್ಲಿ ನಡೆದಿದೆ. ಹಲ್ಲೆ ವಿಡಿಯೋ ವೈರಲ್ ಬಳಿಕ ಪೊಲೀಸರು ಎರಡು ಪ್ರತ್ಯೇಕ ಪ್ರಕರಣಗಳನ್ನು ದಾಖಲಿಸಿದ್ದಾರೆ.



ಇಬ್ಬರು ಬುಡಕಟ್ಟು ಮಹಿಳೆಯರು ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಳ್ಳಲು ಗ್ರಾಮಸ್ಥರನ್ನು ಮನವೊಲಿಸಲು ಖರಿಮುಖ ಗ್ರಾಮಕ್ಕೆ ಹೋಗಿದ್ದಾರೆ. ಈ ಸುದ್ದಿ ಇಡೀ ಗ್ರಾಮದಲ್ಲಿ ಹಬ್ಬಿದ್ದು, ಹಿಂದೂ ಸಂಘಟನೆಯ ಸದಸ್ಯರು ಮತ್ತು ಸ್ಥಳೀಯರನ್ನು ಒಳಗೊಂಡ ಗುಂಪೊಂದು ಸ್ಥಳಕ್ಕೆ ಆಗಮಿಸಿ ಇಬ್ಬರು ಮಹಿಳೆಯರನ್ನು ಮರಕ್ಕೆ ಕಟ್ಟಿಹಾಕಿ ಹಲ್ಲೆ ನಡೆಸಿದೆ ಎಂದು ರೆಮುನಾ ಪೊಲೀಸ್ ಠಾಣೆಯ ಪ್ರಭಾರಿ ಅಧಿಕಾರಿ (ಒಐಸಿ) ಸುಭಾಷ್ ಚಂದ್ರ ಮಲ್ಲಿಕ್ ಭಾನುವಾರ ಖಿಒಖಇ ಗೆ ತಿಳಿಸಿದರು.

ಗುಂಪು ಮಹಿಳೆಯರ ಮುಖವನ್ನು ವಿರೂಪಗೊಳಿಸಿದ್ದು, "ಜೈ ಶ್ರೀ ರಾಮ್" ಎಂದು ಕೂಗುವಂತೆ ಒತ್ತಾಯಿಸಿದೆ. ಮಾಹಿತಿ ತಿಳಿಯುತ್ತಿದ್ದಂತೆಯೇ ನೀಲಗಿರಿ ಪೊಲೀಸ್ ತಂಡ ಸ್ಥಳಕ್ಕೆ ಧಾವಿಸಿ ಇಬ್ಬರು ಮಹಿಳೆಯರನ್ನು ರಕ್ಷಿಸಿದ್ದಾರೆ. ವಿಚಾರಣೆ ವೇಳೆ, ಸ್ಥಳೀಯರನ್ನು ಮತಾಂತರಗೊಳಿಸಲು ಗ್ರಾಮಕ್ಕೆ ಹೋಗಿದ್ದಾಗಿ ಘಟನೆ ನಡೆದಿರುವುದಾಗಿ ಮಹಿಳೆಯರು ಒಪ್ಪಿಕೊಂಡಿದ್ದಾರೆ ಎಂದು ಮಲ್ಲಿಕ್ ಹೇಳಿದ್ದಾರೆ.

ಅದೇ ದಿನ, ಸಂತ್ರಸ್ತರು ಮತ್ತು ಸ್ಥಳೀಯರಿಂದ ಪ್ರತ್ಯೇಕ ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ. ದೂರುಗಳ ಆಧಾರದ ಮೇಲೆ, ಪೊಲೀಸರು ಎರಡು ಪ್ರಕರಣಗಳನ್ನು ದಾಖಲಿಸಿದ್ದಾರೆ ಮತ್ತು ಒಡಿಶಾ ಧಾರ್ಮಿಕ ಸ್ವಾತಂತ್ರ್ಯ ಕಾಯಿದೆ, 1967 ರ ಸೆಕ್ಷನ್ 4 ಮತ್ತು ಬಿಎನ್‌ಎಸ್‌ನ ಸೆಕ್ಷನ್ 299, 3 (5) ಮತ್ತು 351 (2) ರ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿದ್ದಾರೆ. ಅದೇ ರೀತಿ, 15 ಜನರ ವಿರುದ್ಧ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಕಾಯ್ದೆ, 1989 ಮತ್ತು ಬಿಎನ್‌ಎಸ್‌ನ ವಿವಿಧ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ತನಿಖೆ ನಡೆಯುತ್ತಿದ್ದು, ಘಟನೆಯಲ್ಲಿ ಭಾಗಿಯಾಗಿರುವವರ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಪ್ರದೇಶದಲ್ಲಿ ಶಾಂತಿ ಕಾಪಾಡಲು ಮತ್ತು ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಮಲ್ಲಿಕ್ ತಿಳಿಸಿದ್ದಾರೆ.

# ಕರಗಿದ ಮಗು ಜೀವಂತ ಆಸೆ

ಜೈಪುರ: ರಾಜಸ್ತಾನದಲ್ಲಿ ಸಂಭವಿಸಿದ ಬೋರ್‌ವೆಲ್ ದುರಂತ ಸಂಭವಿಸಿ ಬರೊಬ್ಬರಿ 7 ದಿನಗಳೇ ಕಳೆದರೂ ಕಾರ್ಯಾಚರಣೆ ಮಾತ್ರ ಇನ್ನೂ ಮುಕ್ತಾಯವಾಗಿಲ್ಲ. ಮಗು ಜೀವಂತವಾಗಿರುವ ಆಸೆ ದಿನೇ ದಿನೇ ಕರಗುತ್ತಿದೆ.

ಹೌದು.. ರಾಜಸ್ತಾನದ ಕಿರಾತಪುರದ ಬದಿಯಾಲಿ ಧಾನಿಯಲ್ಲಿ ಮೂರು ವರ್ಷದ ಚೇತನಾ ಎಂಬ ಬಾಲಕಿ ಕೊಳವೆ ಬಾವಿಗೆ ಬಿದ್ದು ಜೀವನ್ಮರಣ ಹೋರಾಟ ನಡೆಸಿದ್ದಾಳೆ. ನೀರಿಲ್ಲದ ಕೊಳವೆ ಬಾವಿಯನ್ನು ಮುಚ್ಚದೆ ಹಾಗೇ ಬಿಡಲಾಗಿತ್ತು. ಇದರ ಪಕ್ಕ ಗಿಡ ಗಂಟೆಗಳು, ಹುಲ್ಲುಗಳು ಬೆಳೆದು ಕೊಳವೆ ಬಾವಿಯ ಯಾವುದೇ ಗುರುತು ಇರಲಿಲ್ಲ. ಇದೇ ಕೊಳವೆ ಬಾವಿ ಪಕ್ಕದಲ್ಲಿ ಮಗು ಚೇತನಾ ತನ್ನ ತಂದೆ ಜೊತೆ ಆಟವಾಡುತ್ತಿರುವಾಗ ಬಿದ್ದಿದ್ದಾಳೆ.

ಈ ಘಟನೆ ನಡೆದು ಬರೊಬ್ಬರಿ 7 ದಿನಗಳೇ ಗತಿಸಿಹೋದರೂ ಇನ್ನೂ ಕೂಡ ಬಾಲಕಿಯಲ್ಲಿ ಕೊಳವೆಬಾವಿಯಿಂದ ಹೊರತೆಗೆಯುವ ಕಾರ್ಯಾ ಇನ್ನೂ ಆಗಿಲ್ಲ. ಬಾಲಕಿಯನ್ನು ರಕ್ಷಿಸುವ ರಕ್ಷಣಾ ಕಾರ್ಯಾಚರಣೆಯನ್ನು ಚುರುಕುಗೊಳಿಸಲಾಗಿದ್ದು, ಎಲ್ಲಾ ಸಂಭಾವ್ಯ ಆಯ್ಕೆಗಳನ್ನು ಪ್ರಸ್ತುತ ಅನ್ವೇಷಿಸಲಾಗುತ್ತಿದೆ ಮತ್ತು ಚರ್ಚಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಭರವಸೆ ನೀಡಿದ್ದಾರೆ.

ಕೋಟ್‌ಪುಟ್ಲಿ–ಬೆಹ್ರೋರ್ ಜಿಲ್ಲಾಧಿಕಾರಿ ಕಲ್ಪನಾ ಅಗರ್ವಾಲ್ ಅವರು ಈ ಬಗ್ಗೆ ಮಾತನಾಡಿ, 'ಸುರಂಗ ಮಾರ್ಗದ ಕಲ್ಲಿನ ಭೂಪ್ರದೇಶದಿಂದಾಗಿ ಹುಡುಗಿಯನ್ನು ತಲುಪಲು ಸುರಂಗ ನಿರ್ಮಾಣವು ಹೆಚ್ಚಿನ ಸವಾಲುಗಳನ್ನು ಎದುರಿಸುತ್ತಿದೆ. ಹೆಚ್ಚುವರಿಯಾಗಿ, ಸುರಂಗದ ಮೇಲ್ಭಾಗ ಮತ್ತು ಕೆಳಭಾಗದ ನಡುವಿನ ಗಮನಾರ್ಹ ತಾಪಮಾನ ವ್ಯತ್ಯಾಸವು ತೊಂದರೆಗಳನ್ನುಂಟುಮಾಡುತ್ತಿದೆ.

ನಾವು ಸುರಂಗವನ್ನು ನಿರ್ಮಿಸುತ್ತಿದ್ದೇವೆ... ಸುರಂಗ ಮಾರ್ಗವು ಕಲ್ಲಿನಿಂದ ಕೂಡಿರುವುದರಿಂದ ಅದನ್ನು ಕೊರೆಯುವುದು ಸವಾಲಾಗಿದೆ... ಮೇಲ್ಭಾಗ ಮತ್ತು ಕೆಳಭಾಗದಲ್ಲಿ ತಾಪಮಾನದಲ್ಲಿ ಭಾರಿ ವ್ಯತ್ಯಾಸವಿದೆ... ಎಲ್ಲಾ ಆಯ್ಕೆಗಳನ್ನು ಪರಿಗಣಿಸಲಾಗುತ್ತಿದೆ ಮತ್ತು ಚರ್ಚಿಸಲಾಗುತ್ತಿದೆ... ಅತ್ಯುತ್ತಮ ಉಪಕರಣಗಳು ಲಭ್ಯವಾಗುವಂತೆ ಮಾಡಲಾಗಿದೆ ಎಂದು ಅವರು ಹೇಳಿದರು.

ಗುರುವಾರ ರಾತ್ರಿಯಿಂದ ನಿರಂತರ ಮಳೆಯಿಂದಾಗಿ ರಾಜಸ್ಥಾನದ ಕೋಟ್‌ಪುಟ್ಲಿಯಲ್ಲಿ ಬೋರ್‌ವೆಲ್‌ನಲ್ಲಿ ಸಿಲುಕಿರುವ ಮೂರು ವರ್ಷದ ಬಾಲಕಿಯನ್ನು ರಕ್ಷಿಸುವ ಪ್ರಯತ್ನಗಳು ತೀವ್ರವಾಗಿ ಅಡ್ಡಿಯಾಗಿವೆ. ಹಾಲಿ ಮಳೆಯು ಸುತ್ತಮುತ್ತಲಿನ ಮಣ್ಣನ್ನು ಜಾರುವಂತೆ ಮಾಡಿದೆ. ವೆಲ್ಡಿಂಗ್ ಮತ್ತು ಕೇಸಿಂಗ್ ಪೈಪ್ ಅನ್ನು ಕೆಳಕ್ಕೆ ಇಳಿಸುವುದು ಸೇರಿದಂತೆ ನಿರ್ಣಾಯಕ ಕಾರ್ಯಾಚರಣೆಗಳನ್ನು ಸಂಕೀರ್ಣಗೊಳಿಸಿದೆ ಎಂದು ಅವರು ಹೇಳಿದರು.

ಕರಗಿದ ಮಗು ಜೀವಂತ ಆಸೆ!

ಇನ್ನು ಮಗು ಬೋರ್‌ವೆಲ್ ಗೆ ಬಿದ್ದು ಬರೊಬ್ಬರಿ 7 ದಿನಗಳೇ ಕಳೆದರೂ ಇನ್ನೂ ಮಗುವನ್ನು ಹೊರತೆಗೆಯಲು ಸಾಧ್ಯವಾಗಿಲ್ಲ. ಹೀಗಾಗಿ ಮಗು ಜೀವಂತವಾಗಿರುವ ಆಸೆ ದಿನೇ ದಿನೇ ಕರಗುತ್ತಿದೆ.





# 10,418 ಕೋಟಿ ಜಾಕ್‌ಪಾಟ್ ಗೆಲ್ಲುವ ಲಾಟರಿ ಟಿಕೆಟ್

**ಕ್ಯಾಲಿಫೋರ್ನಿಯಾ:** ಇಲ್ಲಿನ ಮೆಗಾ ಮಿಲಿಯನ್‌ಗಳ ಜಾಕ್‌ಪಾಟ್ ಲಾಟರಿ ಫಲಿತಾಂಶ ಪ್ರಕಟವಾಗಿದೆ. ಹೌದು, 3, 7, 37, 49, 55 ಸಂಖ್ಯೆಗಳ ವೈಟ್ ಬಾಲ್‌ಗಳು ಮತ್ತು 6ನೇ ಸಂಖ್ಯೆಯ ಗೋಲ್ಡನ್ ಮೆಗಾ ಬಾಲ್ ಹೊಂದಿಕೆಯಾದ ಲಾಟರಿ ಟಿಕೆಟ್ 1.22 ಬಿಲಿಯನ್ ಡಾಲರ್ ಬೃಹತ್ ಮೊತ್ತದ ಜಾಕ್‌ಪಾಟ್ ಗೆದ್ದಿದೆ. ಈ ಟಿಕೆಟ್ ಕ್ಯಾಲಿಫೋರ್ನಿಯಾದಲ್ಲಿ ಮಾರಾಟ ಮಾಡಲಾಗಿದೆ ಎಂದು ಮೆಗಾ ಮಿಲಿಯನ್ಸ್ ವೆಬ್‌ಸೈಟ್ ತಿಳಿಸಿದೆ.




ಅಮೆರಿಕದ ಮೆಗಾ ಮಿಲಿಯನ್ ಲಾಟರಿಗಳ ಇತಿಹಾಸದಲ್ಲಿ ಇದು ಮೂರನೇ ಅತಿದೊಡ್ಡ ಲಾಟರಿ ಮೊತ್ತವಾಗಿದೆ. ಕಳೆದ ಮೂರು ತಿಂಗಳಿಂದ ಪ್ರತಿ ಬಾರಿ ಲಾಟರಿ ಹೊಡೆದಾಗಲೂ ಗೆಲ್ಲುವ ಸಂಖ್ಯೆ ಯಾರಿಗೂ ಹೊಂದಾಣಿಕೆಯಾಗದ ಕಾರಣ ಟಿಕೆಟ್ ಮಾರಾಟ ಮುಂದುವರಿದಿತ್ತು. ಅದರಿಂದ ಗೆಲುವಿನ ಮೊತ್ತ 10,000 ಕೋಟಿ ರೂ. ದಾಟಿತ್ತು. ಕ್ಯಾಲಿಫೋರ್ನಿಯಾದ ಕಾಟನ್‌ವುಡ್ ನಗರದ ರೋಂಡಾ ರಸ್ತೆಯಲ್ಲಿರುವ ಸರ್ಕಲ್ ಕೆ ನಲ್ಲಿರುವ ಸನ್‌ಶೈನ್ ಫುಡ್ ಮತ್ತು ಗ್ಯಾಸ್ ಸ್ಟೋರ್‌ನಲ್ಲಿ ಈ ಲಾಟರಿ ಟಿಕೆಟ್ ಮಾರಾಟವಾಗಿದೆ.

ಈ ಕುರಿತು ಸ್ಟೋರ್ ಮಾಲೀಕರ ಮಗ ಇಶಾರ್ ಗಿಲ್ ಮಾತನಾಡಿ, "ಸುಮಾರು 6,000 ಜನರಿರುವ ಸಣ್ಣ ಗ್ರಾಮೀಣ ಪಟ್ಟಣಕ್ಕೆ ಈ ಬಹುಮಾನದ ಟಿಕೆಟ್ ವರವಾಗಿದೆ. ಯಾರು ಲಾಟರಿ ಗೆದ್ದಿರಬಹುದು ಎಂಬುದರ ಬಗ್ಗೆ ನಮಗೆ ಸಣ್ಣ ಸುಳಿವು ಇಲ್ಲ. ಆದರೆ ಮುಂಚಿತವಾಗಿಯೇ ವಿಜೇತರಿಗೆ ಅಭಿನಂದನೆಗಳು" ಎಂದು ಹೇಳಿದ್ದಾರೆ.

ವಿಜೇತರು 29 ವರ್ಷಗಳ ವಾರ್ಷಿಕ ಪಾವತಿಯನ್ನು ಮಾಡಲು ಒಪ್ಪಿಕೊಂಡರೆ ಮಾತ್ರ ಪೂರ್ಣ ಮೆಗಾ ಮಿಲಿಯನ್ ಜಾಕ್‌ಪಾಟ್ ಮೊತ್ತವನ್ನು ನೀಡಲಾಗುತ್ತದೆ.

2023ರ ಆಗಸ್ಟ್‌ನಲ್ಲಿ ಫ್ಲೋರಿಡಾದಲ್ಲಿ 1.6 ಶತಕೋಟಿ ಡಾಲರ್ ಮೌಲ್ಯದ ಅತಿದೊಡ್ಡ ಮೆಗಾ ಮಿಲಿಯನ್‌ಗಳ ಜಾಕ್‌ಪಾಟ್ ಟಿಕೆಟ್ ಅನ್ನು ಮಾರಾಟ ಮಾಡಲಾಗಿತ್ತು. ಮೆಗಾ ಮಿಲಿಯನ್‌ಗಳು ಮತ್ತು ಪವರ್‌ಬಾಲ್ ಅನ್ನು ವಾಷಿಂಗ್ಟನ್ ಡಿ.ಸಿ ಮತ್ತು ವರ್ಜಿನ್ ಐಲ್ಯಾಂಡ್‌ಗಳು ಸೇರಿದಂತೆ ಅಮೆರಿಕದ 45 ರಾಜ್ಯಗಳಲ್ಲಿ ಮಾರಾಟ ಮಾಡಲಾಗುತ್ತದೆ. ಪವರ್‌ಬಾಲ್ ಅನ್ನು ಪೋರ್ಟೊ ರಿಕೊದಲ್ಲಿ ಮಾರಾಟ ಮಾಡಲಾಗುತ್ತದೆ. ಇನ್ನು ಮೆಗಾ ಮಿಲಿಯನ್ ಟಿಕೆಟ್ ದರಗಳು 2 ಡಾಲರ್?ನಿಂದ ರಿಂದ 5 ಡಾಲರ್‌ಗೆ ಏರಿಕೆಯಾಗಿವೆ.




# ಪುಷ್ಪ–2 ಕಾಲ್ತುಳಿತ ಪ್ರಕರಣ:
## ಕಾನೂನಿನಂತೆ ಎಲ್ಲ ನಡೆಯಲಿದೆ: ತೆಲಂಗಾಣ ಡಿಜಿಪಿ

**ಹೈದರಾಬಾದ್:** 'ಪುಷ್ಪ– 2' ಸಿನಿಮಾ ಪ್ರದರ್ಶನದ ಸಂದರ್ಭ ಚಿತ್ರಮಂದಿರವೊಂದರಲ್ಲಿ ಆಗಿದ್ದ ಕಾಲ್ತುಳಿತದಿಂದ ಮಹಿಳೆ ಮೃತಪಟ್ಟ ಪ್ರಕರಣದಲ್ಲಿ ಕಾನೂನಾತ್ಮಕವಾಗಿ ಏನು ಕ್ರಮ ಕೈಗೊಳ್ಳಬೇಕೋ ಅದು ಮುಂದುವರಿಯಲಿದೆ ಎಂದು ತೆಲಂಗಾಣ ಡಿಜಿಪಿ ಜಿತೇಂದರ್ ಭಾನುವಾರ ಹೇಳಿದರು. ಈ ಪ್ರಕರಣದಲ್ಲಿ ನಟ ಅಲ್ಲು ಅರ್ಜುನ್ ಅವರೂ ಆರೋಪಿಗಳಲ್ಲಿ ಒಬ್ಬರು. ವರ್ಷಾಂತ್ಯದ ಸಂದರ್ಭದಲ್ಲಿ ಜಿತೇಂದರ್ ಅವರು ಸುದ್ದಿಗೋಷ್ಠಿ ನಡೆಸಿದಾಗ, ಪ್ರಕರಣದ ಕುರಿತು ಎದುರಾದ ಪ್ರಶ್ನೆಗೆ ಉತ್ತರಿಸಿದರು. 'ಪ್ರಕರಣ ಕುರಿತು ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿರುವುದರಿಂದ ಇನ್ನಷ್ಟು ಮಾಹಿತಿ ನೀಡಲು ಸಾಧ್ಯವಿಲ್ಲ' ಎಂದಷ್ಟೆ ಪ್ರತಿಕ್ರಿಯಿಸಿದರು.

# 'ಸಿಕಂದರ್' ಚಿತ್ರದ ಟೀಸರ್ ಬಿಡುಗಡೆ:
## ಖಡಕ್ ಲುಕ್‌ನಲ್ಲಿ ನಟ ಸಲ್ಮಾನ್ ಖಾನ್

**ಮುಂಬೈ:** ಬಾಲಿವುಡ್ ನಟ ಸಲ್ಮಾನ್ ಖಾನ್ ಅಭಿನಯದ ಬಹು ನಿರೀಕ್ಷಿತ 'ಸಿಕಂದರ್' ಸಿನಿಮಾದ ಟೀಸರ್ ಇಂದು(ಶನಿವಾರ) ಬಿಡುಗಡೆಯಾಗಿದೆ.

ಈ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ನಟ ಸಲ್ಮಾನ್ ಖಾನ್, ಹುಟ್ಟುಹಬ್ಬಕ್ಕೆ ಶುಭ ಕೋರಿದ ಎಲ್ಲರಿಗೂ ಧನ್ಯವಾದಗಳು. ಸಿಕಂದರ್ ಟೀಸರ್ ಅನ್ನು ನೀವು ಇಷ್ಟಪಡುತ್ತೀರಿ ಎಂದು ಭಾವಿಸುತ್ತೇನೆ ಎಂದು ಬರೆದುಕೊಂಡಿದ್ದಾರೆ.


'ಗಜಿನಿ', 'ಹಾಲಿಡೇ: ಎ ಸೋಲ್ಜರ್ ಈಸ್ ನೆವರ್ ಆಫ್ ಡ್ಯೂಟಿ' ಖ್ಯಾತಿಯ ನಿರ್ದೇಶಕ ಎ.ಆರ್ ಮುರುಗದಾಸ್ ಈ ಚಿತ್ರಕ್ಕೆ ಆ?ಯಕ್ಷನ್ ಕಟ್ ಹೇಳಿದ್ದಾರೆ.

'ಕತ್ತಲ ಜಗತ್ತಿನೊಂದಿಗೆ ಆರಂಭವಾಗುವ ಟೀಸರ್ ವಿಡಿಯೊ ಆ?ಯಕ್ಷನ್ ಥ್ರಿಲ್ಲರ್ ದೃಶ್ಯಗಳಿಗೆ ಸಾಕ್ಷಿಯಾಗಿದ್ದು, ಫೈಟಿಂಗ್ ದೃಶ್ಯದೊಂದಿಗೆ ಸಲ್ಲು ಖಡಕ್ ಲುಕ್‌ನಲ್ಲಿ ಕಾಣಿಸಿಕೊಂಡಿದ್ದಾರೆ.

'ಸಿಂಗಮ್ 3' ಮತ್ತು 'ಬೇಬಿ ಜಾನ್' ಚಲನಚಿತ್ರಗಳಲ್ಲಿ ಸಲ್ಮಾನ್ ಖಾನ್ ಅತಿಥಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು.

ಸಲ್ಮಾನ್ ಖಾನ್ ಅವರ ಹುಟ್ಟುಹಬ್ಬದ ಪ್ರಯುಕ್ತ ಅವರು ನಟಿಸಿರುವ ಬಹು ನಿರೀಕ್ಷಿತ ಸಿಕಂದರ್ ಸಿನಿಮಾದ ಟೀಸರ್ ಗುರುವಾರ ಬಿಡುಗಡೆಯಾಗಬೇಕಿತ್ತು. ಆದರೆ, ಮಾಜಿ ಪ್ರಧಾನಿ ಮನಮೋಹನ ಸಿಂಗ್ ಅವರು ನಿಧನರಾದ ಹಿನ್ನೆಲೆಯಲ್ಲಿ ಸಿನಿಮಾದ ಟೀಸರ್ ಬಿಡುಗಡೆಯನ್ನು ಚಿತ್ರ ನಿರ್ಮಾಪಕರು ಮುಂದೂಡಿದ್ದರು. ಸಿಕಂದರ್ ಚಿತ್ರದಲ್ಲಿ ನಟಿ ರಶ್ಮಿಕಾ ಮಂದಣ್ಣ ಕೂಡ ನಟಿಸಿದ್ದಾರೆ.


ಈ ಚಿತ್ರ 2025ರ ಈದ್ ಹಬ್ಬಕ್ಕೆ ವಿಶ್ವದಾದ್ಯಂತ ಬಿಡುಗಡೆಯಾಗಲಿದೆ ಎಂದು ಚಿತ್ರತಂಡ ತಿಳಿಸಿದೆ.




### ಮರಾಠಿ ನಟಿ ಊರ್ಮಿಳಾ ಕಾರು ಡಿಕ್ಕಿ: ಕಾರ್ಮಿಕ ಸ್ಥಳದಲ್ಲೇ ಸಾವು, ಮತ್ತೊಬ್ಬರಿಗೆ ಗಾಯ



**ಮುಂಬೈ:** ಮರಾಠಿ ನಟಿ ಊರ್ಮಿಳಾ ಕೊಥಾರೆ ಅವರ ಕಾರು ಡಿಕ್ಕಿ ಹೊಡೆದ ಪರಿಣಾಮ ಓರ್ವ ಕಾರ್ಮಿಕ ಸ್ಥಳದಲ್ಲೇ ಮೃತಪಟ್ಟಿದ್ದು, ಮತ್ತೊಬ್ಬ ಕಾರ್ಮಿಕ ಗಂಭೀರವಾಗಿ ಗಾಯಗೊಂಡಿರುವ ಘಟನೆ ಮುಂಬೈನ ಕಂಡಿವಲಿ ಪ್ರದೇಶದಲ್ಲಿ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.



ಸಿನಿಮಾ ಚಿತ್ರೀಕರಣ ಮುಗಿಸಿ ಮನೆಗೆ ವಾಪಸ್ ಆಗುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ. ಘಟನೆಯಲ್ಲಿ ನಟಿ ಊರ್ಮಿಳಾ ಕೊಥಾರೆ ಮತ್ತು ಕಾರು ಚಾಲಕ ಕೂಡ ಗಾಯಗೊಂಡಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮುಂಬೈನ ಕಂಡಿವಲಿ ಪೂರ್ವದ ಪೊಯ್ಸರ್ ಮೆಟ್ರೊ ನಿಲ್ದಾಣದ ಬಳಿ ಕೆಲಸ ಮಾಡುತ್ತಿದ್ದ ಇಬ್ಬರು ಕಾರ್ಮಿಕರಿಗೆ ಕಾರು ಡಿಕ್ಕಿ ಹೊಡೆದಿದೆ. ಸೂಕ್ತ ಸಮಯಕ್ಕೆ ಏರ್ ಬ್ಯಾಗ್ ತೆರೆದುಕೊಂಡಿದ್ದರಿಂದ ಊರ್ಮಿಳಾ ಕೊಥಾರೆ ಹಾಗೂ ಕಾರಿನ ಚಾಲಕ ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಸಮತಾ ನಗರ ಪೊಲೀಸ್ ಠಾಣೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಚಾಲಕನ ನಿಯಂತ್ರಣ ತಪ್ಪಿದ ಕಾರು ರಸ್ತೆ ಬದಿಯಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕರಿಗೆ ಡಿಕ್ಕಿ ಹೊಡೆದಿದೆ. ಘಟನೆ ಸಂಬಂಧ ಕಾರು ಚಾಲಕನ ವಿರುದ್ಧ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ. ಊರ್ಮಿಳಾ ಕೊಥಾರೆ ಅವರು ಮರಾಠಿಯಲ್ಲಿ 'ದುನಿಯಾದಾರಿ' ಮತ್ತು ಹಿಂದಿಯಲ್ಲಿ 'ಥ್ಯಾಂಕ್ ಗಾಡ್' ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದ್ದಾರೆ.

# 'ಮ್ಯಾಕ್ಸ್' ಸಕ್ಸಸ್: ಚಾಮುಂಡೇಶ್ವರಿ ದರ್ಶನ ಪಡೆದ ಕಿಚ್ಚ ಸುದೀಪ್

**ಮೈಸೂರು:** ಎರಡು ವರ್ಷಗಳ ಕಾಯುವಿಕೆಯ ಬಳಿಕ ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ಅಭಿನಯದ ಪ್ಯಾನ್ ಇಂಡಿಯಾ ಸಿನಿಮಾ ಮ್ಯಾಕ್ಸ್ ಡಿ.25 ರಂದು ಬಿಡುಗಡೆಯಾಗಿದ್ದು, ಸಿನಿಮಾ ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಜೊತೆಗೆ ಬಾಕ್ಸ್ ಆಫೀಸ್‌ನಲ್ಲಿ ಕೂಡ ಚಿತ್ರ ಭರ್ಜರಿ ಗಳಿಕೆ ಮಾಡುತ್ತಿರುವ ಹಿನ್ನೆಲೆ ಇಂದು ಕಿಚ್ಚ ಸುದೀಪ್ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ಚಾಮುಂಡಿ ದೇವಿಯ ದರ್ಶನ ಪಡೆದು, ವಿಶೇಷ ಪೂಜೆ ಸಲ್ಲಿಸಿದರು. ನಿರ್ಮಾಪಕ ಮತ್ತು ವಿತರಕರಾದ ಕಾರ್ತಿಕ್ ಗೌಡ ಅವರು ಕೂಡ ಕಿಚ್ಚನಿಗೆ ಸಾಥ್ ನೀಡಿದರು.

ಅಭಿಮಾನಿಗಳಿಂದ ಕಿಕ್ಕಿರಿದ ಚಾಮುಂಡಿ ಬೆಟ್ಟ: ನೆಚ್ಚಿನ ನಟ ಸುದೀಪ್ ಭೇಟಿ ಹಿನ್ನೆಲೆ ಅಭಿಮಾನಿಗಳ ದಂಡೇ ಚಾಮುಂಡಿ ಬೆಟ್ಟಕ್ಕೆ ಹರಿದು ಬಂದಿತ್ತು. ಸುದೀಪ್‌ರನ್ನು ನೋಡಿದ ಫ್ಯಾನ್, ಜೈಕಾರ, ಶಿಳ್ಳೆ ಹಾಕಿ ಖುಷಿಪಟ್ಟರು. ಅಭಿಮಾನಿಗಳನ್ನು ನಿಯಂತ್ರಿಸುವುದೇ ಪೊಲೀಸರಿಗೆ ಹರಸಾಹಸವಾಯಿತು.

ಸೆಲ್ಫಿಗೆ ಮುಗಿಬಿದ್ದ ಅಭಿಮಾನಿಗಳು: ಚಾಮುಂಡಿ ದೇವಿಗೆ ಪೂಜೆ ಮುಗಿಸಿ ದೇವಾಲಯದಿಂದ ಸುದೀಪ್ ಹೊರಬಂದೊಡನೆ ಅಭಿಮಾನಿಗಳು ಸೆಲ್ಫಿಗಾಗಿ ಮುಗಿಬಿದ್ದರು. ನಂತರ ಕಾರಿನೊಳಕ್ಕೆ ತೆರಳಿದ ಸುದೀಪ್ ಅವರು, ಅಭಿಮಾನಿಗಳತ್ತ ಕೈ ಬೀಸಿದರು.

ಸುದೀಪ್‌ಗೆ ಅಭಿನಂದನೆ ಸಲ್ಲಿಸಿದ ಬಿಗ್‌ಬಾಸ್ ತಂಡ: ಶನಿವಾರದ ಬಿಗ್‌ಬಾಸ್ ಕಾರ್ಯಕ್ರಮದಲ್ಲಿ ಸುದೀಪ್ ಆಗಮನಕ್ಕೂ ಮೊದಲು ಮನೆಯೊಳಗಿನ ಕಂಟೆಸ್ಟೆಂಟ್‌ಗಳಿಗೆ ಮ್ಯಾಕ್ಸ್ ಯಶಸ್ಸಿನ ಬಗ್ಗೆ ಮಾಹಿತಿ ನೀಡಲಾಯಿತು. ಬಳಿಕ ಮ್ಯಾಕ್ಸ್ ಸಕ್ಸಸ್ ಹಿನ್ನೆಲೆ ಮನೆಮಂದಿಗೆಲ್ಲಾ ಬಿಗ್‌ಬಾಸ್ ತಂಡ ಕೇಕ್ ಕಳುಹಿಸಿತ್ತು. ಕೇಕ್ ಕಟ್ ಮಾಡಿದ ಸ್ಪರ್ಧಿಗಳು ಸಿನಿಮಾದಲ್ಲಿ ಅಭಿನಯಿಸಿರುವ ಮಂಜು ಅವರಿಗೆ ಮೊದಲು ಕೇಕ್ ತಿನ್ನಿಸಿ, ಸಂಭ್ರಮಿಸಿದರು. ಬಳಿಕ ಸುದೀಪ್ ಕಾರ್ಯಕ್ರಮ ಆರಂಭಿಸುವಾಗ ಮಾತನಾಡಿದ ಬಿಗ್‌ಬಾಸ್, ಸುದೀಪ್ ಅವರಿಗೆ ಅಭಿನಂದಿಸಿದರು.



ಡಿಸೆಂಬರ್ 25ರಂದು ಬಿಡುಗಡೆಗೊಂಡ ಮ್ಯಾಕ್ಸ್‌ಗೆ ಕರ್ನಾಟಕ ಸೇರಿದಂತೆ ಆಂಧ್ರಪ್ರದೇಶ, ತಮಿಳುನಾಡಿನಲ್ಲೂ ಉತ್ತಮ ಪ್ರತಿಕ್ರಿಯೆ ವ್ಯಕವಾಗಿದೆ.

ಮ್ಯಾಕ್ಸ್ ಸಿನಿಮಾವನ್ನು ವಿಜಯ್ ಕಾರ್ತಿಕೇಯನ್ ನಿರ್ದೇಶಿಸಿದ್ದು, ಕಿಚ್ಚ ಕ್ರಿಯೇಶನ್ಸ್, ವಿ ಕ್ರಿಯೇಶನ್ಸ್ ಬ್ಯಾನರ್ ಅಡಿ ಬಿಗ್ ಬಜೆಟ್‌ನಲ್ಲಿ ನಿರ್ಮಿಸಲಾಗಿದೆ. ಚಿತ್ರಕ್ಕೆ ಅಜನೀಶ್ ಲೋಕನಾಥ್ ಅವರ ಸಂಗೀತವಿದೆ.




# ಡಿಸ್ನಿ ಪ್ಲಸ್ ಹಾಟ್‌ಸ್ಟಾರ್‌ನಲ್ಲಿ ನಂಬರ್ 1 ಟ್ರೆಂಡಿಂಗ್‌ನಲ್ಲಿದೆ 'ಬಘೀರ': ಕನ್ನಡ ಸಿನಿಮಾಗೆ ಹಿಂದಿ ಪ್ರೇಕ್ಷಕರೂ ಫಿದಾ

ಕನ್ನಡ ಚಿತ್ರರಂಗದ ಬಹುನಿರೀಕ್ಷಿತ ಚಿತ್ರ 'ಬಘೀರ' ಅಕ್ಟೋಬರ್ 31ರಂದು ಬಿಡುಗಡೆಯಾಗಿ ಉತ್ತಮ ಪ್ರತಿಕ್ರಿಯೆ ಪಡೆದುಕೊಂಡಿತ್ತು. ಸ್ಯಾಂಡಲ್‌ವುಡ್‌ನ ಬಹುಬೇಡಿಕೆ ನಟ ರೋರಿಂಗ್ ಸ್ಟಾರ್ ಶ್ರೀಮುರಳಿ ಮತ್ತು ಚೆಂದುಳ್ಳಿ ಚೆಲುವೆ ರುಕ್ಮಿಣಿ ವಸಂತ್ ತೆರೆಕಂಡ ಚಿತ್ರ ಸಿನಿಪ್ರಿಯರಿಂದ ಉತ್ತಮ ಪ್ರತಿಕ್ರಿಯೆ ಸ್ವೀಕರಿಸಿದ್ದಲ್ಲದೇ, ಬಾಕ್ಸ್ ಆಫೀಸ್‌ನಲ್ಲೂ ಉತ್ತಮ ಗಳಿಕೆ ಮಾಡಿತ್ತು. ಸದ್ಯ ಒಟಿಟಿ ಪ್ಲ್ಯಾಟ್‌ಫಾರ್ಮ್‌ನಲ್ಲೂ ಟ್ರೆಂಡಿಂಗ್‌ನಲ್ಲಿದೆ.

ಹೊಂಬಾಳೆ ಫಿಲ್ಮ್ಸ್ ನಿರ್ಮಾಣದ ಸಲಾರ್ ಸಿನಿಮಾ ಒಟಿಟಿಯಲ್ಲೂ ಭಾರಿ ಯಶಸ್ಸು ಕಂಡಿದೆ. 300 ದಿನಗಳಿಗಿಂತಲೂ ಹೆಚ್ಚು ಸಮಯದಿಂದ ಟ್ರೆಂಡ್‌ನಲ್ಲಿದೆ, ಇನ್ನೂ ಟ್ರೆಂಡಿಂಗ್‌ನಲ್ಲಿದೆ. ಇದೀಗ ಹೊಂಬಾಳೆ ಫಿಲ್ಮ್ಸ್ ನಿರ್ಮಾಣದ ಬಘೀರ ಹಾಟ್‌ಸ್ಟಾರ್‌ನಲ್ಲಿ #1 ಸ್ಥಾನವನ್ನು ಪಡೆದುಕೊಂಡಿದೆ. ಡಾ.ಸೂರಿ ನಿರ್ದೇಶನದ ಈ ಸಿನಿಮಾ ಹೆಚ್ಚಿನ ಸಂಖ್ಯೆಯ ಪ್ರೇಕ್ಷಕರನ್ನು ರಂಜಿಸುವಲ್ಲಿ ಯಶ ಕಂಡಿದೆ. ಪವರ್‌ಫುಲ್ ವಿಎಫ್‌ಎಕ್ಸ್, ಆಸಕ್ತಿದಾಯಕ ಕಥೆ ಮತ್ತು ಉತ್ತಮ ಹಿನ್ನೆಲೆ ಸಂಗೀತದೊಂದಿಗೆ ಆಯಕ್ಷನ್–ಪ್ಯಾಕ್ಡ್ ಮನರಂಜನೆಯನ್ನು ಒದಗಿಸುತ್ತಿದೆ. ಇದೀಗ ಒಟಿಟಿ ಪ್ಲ್ಯಾಟ್‌ಫಾರ್ಮ್‌ನಲ್ಲೂ ಟ್ರೆಂಡಿಂಗ್‌ನಲ್ಲಿದ್ದು ಸಖತ್ ಸದ್ದು ಮಾಡುತ್ತಿದೆ.

ಹೌದು, ಡಿಸ್ನಿ ಪ್ಲಸ್ ಹಾಟ್‌ಸ್ಟಾರ್‌ನಲ್ಲಿ ಟಾಪ್ 10 ಹಿಂದಿ ಸಿನಿಮಾಗಳ ಪೈಕಿ 'ಬಘೀರ' #1 ಟ್ರೆಂಡಿಂಗ್‌ನಲ್ಲಿದೆ. ಒಟಿಟಿ ಪ್ಲ್ಯಾಟ್‌ಫಾರ್ಮ್‌ನಲ್ಲಿ ಹೆಚ್ಚಿನ ಸಂಖ್ಯೆಯ ಪ್ರೇಕ್ಷಕರು ಕನ್ನಡ ಸಿನಿಮಾದ ಹಿಂದಿ ಆವೃತ್ತಿಯನ್ನು ಆನಂದಿಸುತ್ತಿದ್ದಾರೆ. ಈ ವಿಚಾರವನ್ನು ಚಿತ್ರದ ಹಿಂದಿರುವ ಖ್ಯಾತ ಚಲನಚಿತ್ರ ನಿರ್ಮಾಣ ಸಂಸ್ಥೆ ಹೊಂಬಾಳೆ ಫಿಲ್ಮ್ಸ್ ಹಂಚಿಕೊಂಡಿದೆ.

ಈ ಹಿಂದೆ ಮಾತನಾಡಿದ್ದ ನಟ ಶ್ರೀಮುರಳಿ, "ಬಘೀರ ಚಿತ್ರದ ಯಶಸ್ಸು ನನ್ನ 3 ವರ್ಷಗಳ ಶ್ರಮಕ್ಕೆ ಸಿಕ್ಕ ಪ್ರತಿಫಲ. ಇದರಲ್ಲಿ ಚಿತ್ರತಂಡದ ಸಂಪೂರ್ಣ ಶ್ರಮ ಅಡಗಿದೆ. ಈ ಗೆಲುವನ್ನು ನಮ್ಮ ಅಭಿಮಾನಿಗಳಿಗೆ ಅರ್ಪಿಸುತ್ತೇನೆ. ಚಿತ್ರತಂಡದ ಶ್ರಮ ಮತ್ತು ಪ್ರೇಕ್ಷಕರ ಶ್ರಮದಿಂದ ಗೆಲುವು ಸಿಕ್ಕಿದೆ. ಇನ್ನೂ ಯಾವುದೇ ಕೊರತೆ ಬಾರದ ಹಾಗೆ ಚಿತ್ರವನ್ನು ನಿರ್ಮಿಸಿರುವ ನಿರ್ಮಾಪಕ ವಿಜಯ್ ಕಿರಗಂದೂರು ಮತ್ತು ಖ್ಯಾತ ನಿರ್ದೇಶಕ ಪ್ರಶಾಂತ್ ನೀಲ್ ಅವರ ಕಥೆಯನ್ನು ಮನಮುಟ್ಟುವಂತೆ ನಿರ್ದೇಶಿಸಿರುವ ಡಾ.ಸೂರಿ ಅವರಿಗೆ ಧನ್ಯವಾದಗಳು ಎಂದು ತಿಳಿಸಿದ್ದರು.

ಬ್ಲಾಕ್‌ಬಸ್ಟರ್ ಚಿತ್ರಗಳ ನಿರ್ದೇಶಕ ಪ್ರಶಾಂತ್ ನೀಲ್ ಅವರು ಈ ಚಿತ್ರಕ್ಕೆ ಕಥೆ ಒದಗಿಸಿದ ಹಿನ್ನೆಲೆ ಸಿನಿಮಾ ಸೆಟ್ಟೇರಿದ ಕ್ಷಣದಿಂದಲೂ ಸಾಕಷ್ಟು ಸದ್ದು ಮಾಡುತ್ತಾ ಬಂತು. ಡಾ.ಸೂರಿ ನಿರ್ದೇಶನದ ಜೊತೆಗೆ ಚಿತ್ರಕಥೆ ಮತ್ತು ಸಂಭಾಷಣೆಯ ಜವಾಬ್ದಾರಿ ಹೊತ್ತಿದ್ದರು. ಎ.ಜೆ ಶೆಟ್ಟಿ ಅವರ ಛಾಯಾಗ್ರಹಣ ನಿರ್ವಹಿಸಿದ್ದರೆ, ಚೇತನ್ ಡಿಸೋಜಾ ಆಯಕ್ಷನ್ ಕಂಪೋಸ್ ಮಾಡಿದ್ದರು. ಉಳಿದಂತೆ ಸೆನ್ಸಾರ್ ಪರೀಕ್ಷೆಯಲ್ಲಿ ಯು/ಎ ಸರ್ಟಿಫಿಕೇಟ್ ಪಡೆದುಕೊಂಡ ಚಿತ್ರ ಪ್ರೇಕ್ಷಕರಿಂದಲೂ ಬಹುತೇಕ ಮೆಚ್ಚುಗೆಯನ್ನೇ ಸ್ವೀಕರಿಸಿದೆ. ಸದ್ಯ ಒಟಿಟಿಯಲ್ಲೂ ಕಮಾಲ್ ಮಾಡುತ್ತಿದೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-37 Email-mussanje2010@gmail.com, Phone: **9448074878**